ಸಂಪುಟ: 05 ಸಂಚಿಕೆ: 174 ಪುಟಗಳು: 08 ಭಾನುವಾರ 07 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಅಸಹಿಷ್ಣುತೆಯು ಹಿಂಸೆಯ ಒಂದು ರೂಪ ಮತ್ತು ನಿಜವಾದ ಪ್ರಜಾಪ್ರಭುತ್ವದ ಬೆಳವಣಿಗೆಗೆ ಅದು ಅಡ್ಡಿಯಾಗಿರುತ್ತದೆ.

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ಗೆ ಆಹ್ವಾನ

• ಉದಯವಾಹಿನಿ, ಬೆಂಗಳೂರು

ನಾಡಹಬ್ಬ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ಗೆ ಆಹ್ವಾನದ ವಿಚಾರ ರಾಜಕೀಯದಿಂದ ಕಾನೂನು ಹೋರಾಟಕ್ಕೆ ತಿರುವು ಪಡೆದಿದೆ. ಬಾನು ಮುಷ್ತಾಕ್ ಆಹ್ವಾನ ಹಿಂಪಡೆಯುವಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಿ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಹೌದು, ರಾಜ್ಯ ಸರ್ಕಾರದ ಕ್ರಮ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ ಪ್ರತಾಪ್ ಸಿಂಹ, ಸರ್ಕಾರದ ಕ್ರಮಕ್ಕೆ ತಡೆ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿದ್ದಾರೆ. ದಸರಾ ಉದ್ಘಾಟನೆ ವೇಳೆ ಚಾಮುಂಡೇಶ್ವರಿ ಪ್ರತಿಮೆಗೆ ಪುಷ್ಪಾರ್ಚನೆ ಮಾಡಬೇಕು. ವೇದ ಮಂತ್ರ, ಧಾರ್ಮಿಕ ಆಚರಣೆಗಳೊಂದಿಗೆ ಉದ್ಘಾಟನೆಯ ಸಂಪ್ರದಾಯವಿದೆ. ಬಾನು ಮುಷ್ತಾಕ್ ಹಿಂದೂ ವಿರೋಧಿ, ಕನ್ನಡ ವಿರೋಧಿ ಭಾವನೆ ಹೊಂದಿದ್ದಾರೆ. ಈ ವಿಚಾರದಲ್ಲಿ ರಾಜ್ಯ ಸರ್ಕಾರ ಏಕಪಕ್ಷೀಯವಾಗಿ ಬಾನು ಮುಷ್ತಾಕ್ ಆಯ್ಕೆ ಮಾಡಿದೆ. ಮೈಸೂರಿನ ರಾಜಮನೆತನದವರೂ ಸರ್ಕಾರದ ನಡೆ ವಿರೋಧಿಸಿದ್ದಾರೆ. ಆದರೂ ಸರ್ಕಾರದ ನಿರ್ಧಾರದಿಂದ ಹಿಂದೂಗಳ ಭಾವನೆಗೆ ಘಾಸಿ ಉಂಟು ಮಾಡಿದ್ದಾರೆ. ಹೀಗಾಗಿ ಬಾನು ಮುಷ್ತಾಕ್ ಅವರಿಗೆ ನೀಡಿದ ಆಹ್ವಾನ ಹಿಂಪಡೆಯುವಂತೆ ನಿರ್ದೇಶಿಸಲು ಮನವಿ ಮಾಡಿದ್ದಾರೆ. ಈ ವಿಚಾರ ಇನ್ನಷ್ಟೇ ಹೈಕೋರ್ಟ್ ಅಲ್ಲಿ ವಿಚಾರಣೆಗೆ ಬರಬೇಕಿದೆ.

## ಆಲಮಟ್ಟಿ ಅಣೆಕಟ್ಟು ಎತ್ತರಿಸುವ ಬದ್ಧತೆ ನಮ್ಮ ಸರ್ಕಾರಕ್ಕೆ ಇದೆ

• ಉದಯವಾಹಿನಿ, ವಿಜಯಪುರ

ಆಲಮಟ್ಟಿ ಅಣೆಕಟ್ಟು ಎತ್ತರವನ್ನು 518 ಮೀ.ನಿಂದ 524 ಮೀ. ಎತ್ತರಿಸುವ ಬಗ್ಗೆ ಆದ್ಯತೆ ಮತ್ತು ಬದ್ಧತೆ ನಮ್ಮ ಸರ್ಕಾರಕ್ಕಿದೆ. ಮುಂದಿನ ಒಂದು ವಾರದೊಳಗೆ ಭೂಸ್ವಾಧೀನಕ್ಕೆ ನಿಗದಿ ಮಾಡಿರುವ ಬೆಲೆ ಘೋಷಣೆ ಮಾಡಲಾಗುವುದು ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. ಆಲಮಟ್ಟಿ ಅಣೆಕಟ್ಟಿನಲ್ಲಿ ಕೃಷ್ಣಾ ನದಿಗೆ ಶನಿವಾರ ಬಾಗಿನ ಅರ್ಪಣೆ ನಂತರ ನಡೆದ ಮಾಧ್ಯಮಗೋಷ್ಟಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಯವರು ಹಾಗೂ ಯೋಜನೆ ವ್ಯಾಪ್ತಿಯ ಜನಪ್ರತಿನಿಧಿಗಳ ಸಭೆ ನಡೆಸಿ ಬೆಲೆ ನಿಗದಿ ತೀರ್ಮಾನ ಮಾಡಲಾಗುವುದು. ಯಾವುದೇ ಮೇಲ್ಮನವಿ ಇಲ್ಲದಂತೆ ಒಂದೇ ಹಂತದ ಒಪ್ಪಿತ ಭೂಸ್ವಾಧೀನಕ್ಕೆ ಮುಖಂಡರು, ಜನಪ್ರತಿನಿಧಿಗಳು ಒಪ್ಪಿಗೆ ನೀಡಬೇಕು. ಪುನರ್ವಸತಿ ಬಗ್ಗೆ ಪ್ರತ್ಯೇಕ ತೀರ್ಮಾನ ಮಾಡಲಾಗುವುದು. ಸಮುದ್ರಕ್ಕೆ ಹೋಗುತ್ತಿರುವ ನೀರನ್ನು ನಮ್ಮ ಜನರಿಗೆ ನೀರಾವರಿ ಕಲ್ಪಿಸುವುದು ನಮ್ಮ ಸಂಕಲ್ಪ. ಇದನ್ನು ಇದೇ ಅವಧಿಯಲ್ಲಿ ಮಾಡಲು ಮುಂದಾಗಿದ್ದೇವೆ ಎಂದರು.

## ಎಸ್ಸಿ ಒಳಮೀಸಲಾತಿ ಅಳವಡಿಸಿಕೊಂಡು ಹೊಸದಾಗಿ ನೇಮಕಾತಿ ಅಧಿಸೂಚನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ವಿವಿಧ ಇಲಾಖೆ, ನಿಗಮ-ಮಂಡಳಿ, ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ 2024ರ ಅ.28ರ ಬಳಿಕ ಹೊರಡಿಸಿರುವ ಎಲ್ಲಾ ನೇರ ನೇಮಕಾತಿ ಅಧಿಸೂಚನೆಗಳನ್ನು ರದ್ದುಗೊಳಿಸುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಸಚಿವ ಸಂಪುಟದ ನಿರ್ಣಯದಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ(ಡಿಪಿಎಆರ್) ಸರಕಾರದ ಅಧೀನ ಕಾರ್ಯದರ್ಶಿ ವೀರಭದ್ರ ಅವರು, ಈ ಕುರಿತು ಅಧಿಕೃತ ಸುತ್ತೋಲೆ ಹೊರಡಿಸಿದ್ದು, ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಹಿನ್ನೆಲೆ 2024ರ ಅಕ್ಟೋಬರ್ 28ರ ನಂತರ ಹೊರಡಿಸಲಾದ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಬೇಕು ಎಂದು ಸೂಚನೆ ನೀಡಲಾಗಿದೆ.

## ಜಗಜ್ಯೋತಿ ಬಸವೇಶ್ವರ ಮೂರ್ತಿ ಅನಾವರಣ ಸಮಾರಂಭ

• ಉದಯವಾಹಿನಿ, ಬೆಂಗಳೂರು

ಬಸವಣ್ಣನ ತತ್ವಗಳಾದ ಸ್ವಾತಂತ್ರ್ಯ, ಸಮಾನತೆ, ಕಾಯಕ, ದಾಸೋಹ, ಸಹೋದರತ್ವ, ಸಹಬಾಳ್ವೆ ಪಾಲನೆಯಿಂದ ಸುಂದರ ಸಮಾಜದ ನಿರ್ಮಾಣ ಸಾಧ್ಯ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಅಭಿಪ್ರಾಯಪಟ್ಟರು.

ಬಸವ ಪುತ್ಥಳಿ ಪ್ರತಿಷ್ಠಾಪನಾ ಸಮಿತಿ ರಾಜಾಜಿನಗರದ ವೆಸ್ಟ್ ಆಫ್ ಕಾರ್ಡ್ ರೋಡ್ ಜಂಕ್ಷನ್ ಬಳಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಗಜ್ಯೋತಿ ಬಸವೇಶ್ವರ ಮೂರ್ತಿ ಅನಾವರಣ ಸಮಾರಂಭದಲ್ಲಿ ಮಾತನಾಡಿದರು. ಅಸಮಾನತೆ, ಕಂದಾಚಾರ, ಅಸ್ಪೃಶ್ಯತೆ, ಮೌಢ್ಯತೆ ಇದ್ದ 850 ವರ್ಷಗಳ ಹಿಂದೆ ಬಸವಣ್ಣ ಅವರು ಶ್ರೇಣಿರಹಿತ ಸಮ ಸಮಾಜದ ಕನಸು ಕಂಡಿದ್ದರು. ಮಹಿಳೆಯರಿಗೂ ಸಮಾನ ಸ್ಥಾನಮಾನ ನೀಡಬೇಕೆಂದು ಪ್ರತಿಪಾದಿಸಿದ್ದರು. ಸಮ ಸಮಾಜದ ಅವರ ಕನಸನ್ನು ನನಸಾಗಿಸಬೇಕು' ಎಂದು ಹೇಳಿದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, 'ಬಸವಣ್ಣ ಅವರನ್ನು ಒಂದೇ ಸಮಾಜಕ್ಕೆ ಸೀಮಿತ ಮಾಡಬಾರದು. ಸರ್ವ ಸಮುದಾಯದ ನಾಯಕ. ಜ್ಞಾನಿಗಳು, ವಿಜ್ಞಾನಿಗಳು, ಚಿಂತಕರು, ಸಾಹಿತಿಗಳು ಪುಟಗಟ್ಟಲೆ ಹೇಳುವುದನ್ನು ಜನಸಾಮಾನ್ಯರಿಗೆ ಅರ್ಥವಾಗುವಂತೆ ನಾಲ್ಕೈದು ಸಾಲಿನಲ್ಲಿ ತಿಳಿಸಿದ ಮಹಾನ್ ನಾಯಕ ಬಸವಣ್ಣ' ಎಂದರು.



# ಭಾರತ-ಅಮೆರಿಕ ಸಂಬಂಧ ಸುಧಾರಣೆಗೆ ಟ್ರಂಪ್ ಸಕಾರಾತ್ಮಕ ನಡೆ ಶ್ಲಾಘನೀಯ: ಮೋದಿ

**ಚೀನಾ, ರಷ್ಯಾ ಭಾಗಿಯಾಗಲಿರುವ ಬ್ರಿಕ್ಸ್ ಶೃಂಗಸಭೆಗೆ ಮೋದಿ ಗೈರು**

**ಮೋದಿ ಅದ್ಭುತ ಪ್ರಧಾನಿ, ಅವರೊಂದಿಗೆ ಎಂದಿಗೂ ಸ್ನೇಹಿತರಾಗಿರುತ್ತೇನೆ**

# ಊಸರವಳ್ಳಿ ಟ್ರಂಪ್

**ಉಕ್ರೇನ್ ಸಂಘರ್ಷ ಕೊನೆಗೊಳಿಸುವ ಬಗ್ಗೆ ಚರ್ಚೆ**

• ಉದಯವಾಹಿನಿ, ಹೊಸದಿಲ್ಲಿ

ಭಾರತ, ಚೀನಾ ಹಾಗೂ ರಷ್ಯಾ ದೇಶಗಳ ಮುಖ್ಯಸ್ಥರು ಇತ್ತೀಚೆಗೆ ಚೀನಾದಲ್ಲಿ ಒಗ್ಗಟ್ಟು ಪ್ರದರ್ಶಿಸುತ್ತಿದ್ದಂತೆಯೇ ವಿಚಲಿತರಾಗಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇದೀಗ ತಮ್ಮ ವರಸೆಯನ್ನೇ ಬದಲಿಸುತ್ತಿದ್ದಾರೆ. ನಾನು ಯಾವಾಗಲೂ ಮೋದಿ ಜೊತೆ ಸ್ನೇಹಿತನಾಗಿರುತ್ತೇನೆ.

ಭಾರತ ಮತ್ತು ಅಮೆರಿಕಾ ವಿಶೇಷ ಸಂಬಂಧವನ್ನು ಹೊಂದಿದ್ದು, ಯಾವುದಕ್ಕೂ ತಲೆಕೆಡಿಸಿಕೊಳ್ಳಬೇಕಿಲ್ಲ ಎಂದು ಹೇಳಿದ್ದಾರೆ. ತಮ್ಮ ಓವಲ್ ಕಚೇರಿಯಲ್ಲಿ ಮಾತನಾಡಿರುವ ಟ್ರಂಪ್ ಅವರು, ಭಾರತ ಜೊತೆಗೆ ಸಂಬಂಧ ಸುಧಾರಣೆಗೆ ಸಿದ್ಧರಿದ್ದೀರಾ ಎನ್ನುವ ಪ್ರಶ್ನೆಗೆ ಉತ್ತರಿಸಿದ್ದಾರೆ. ನಾನು ಯಾವಾಗಲೂ ಮೋದಿ ಅವರೊಂದಿಗೆ ಸ್ನೇಹಿತನಾಗಿರುತ್ತೇನೆ. ಅವರು ಒಬ್ಬ ಉತ್ತಮ ಹಾಗೂ ಅದ್ಭುತ ಪ್ರಧಾನಿ. ಆದರೆ ಈ ನಿರ್ದಿಷ್ಟ ಕ್ಷಣದಲ್ಲಿ ಅವರು ಮಾಡುತ್ತಿರುವುದು ನನಗೆ ಇಷ್ಟವಿಲ್ಲ. ಆದರೆ ಭಾರತ ಮತ್ತು ಅಮೆರಿಕ ವಿಶೇಷ ಸಂಬಂಧವನ್ನು ಹೊಂದಿವೆ. ಈ ಬಗ್ಗೆ ಚಿಂತಿಸಲು ಏನೂ ಇಲ್ಲ. ಪ್ರಸ್ತುತ ಪರಿಸ್ಥಿತಿ ಕ್ಷಣಿಕವಷ್ಟೇ ಎಂದು ಹೇಳಿದ್ದಾರೆ. ನಾವು ಭಾರತವನ್ನು ಕಳೆದುಕೊಂಡಿಲ್ಲ. ಭಾರತ ರಷ್ಯಾದಿಂದ ದೊಡ್ಡ ಪ್ರಮಾಣದ ತೈಲವನ್ನು ಖರೀದಿಸುತ್ತಿದೆ. ಅದು ನಮಗೆ ಬಹಳ ನಿರಾಶೆ ತಂದಿದೆ. ಹೀಗಾಗಿ ಅದನ್ನು ಅವರಿಗೆ ತಿಳಿಸಲು ದೊಡ್ಡ ರೀತಿಯ ಸುಂಕವನ್ನು ವಿಧಿಸಿದ್ದೇವೆ. ನಿಮಗೆ ತಿಳಿದಿರುವಂತೆ ನಾನು ಭಾರತದ ಪ್ರಧಾನಮಂತ್ರಿ ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದೇನೆ. 2 ತಿಂಗಳ ಹಿಂದೆ ಮೋದಿ ಅಮೆರಿಕಾದಲ್ಲಿದ್ದರು. ರೋಸ್ ಗಾರ್ಡನ್ ನಲ್ಲಿನಾವಿಬ್ಬರೂ ಪತ್ರಿಕಾಗೋಷ್ಠಿ ನಡೆಸಿದ್ದೆವು ಎಂದು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದ ಟ್ರಂಪ್ ಅವರು, ನಾವು ಭಾರತ ಮತ್ತು ರಷ್ಯಾವನ್ನು ಕರಾಳ ಚೀನಾದಿಂದಾಗಿ ಕಳೆದುಕೊಂಡಂತೆ ಕಾಣುತ್ತಿದೆ. ಅವರಿಗೆ ಸುದೀರ್ಘ ಹಾಗೂ ಸಮೃದ್ಧ ಭವಿಷ್ಯ ಸಿಗುವಂತಾಗಲಿ ಎಂದು ಹೇಳಿದ್ದರು. ಇದರ ಜತೆಗೆ ಅವರು ಇತ್ತೀಚೆಗೆ ನಡೆದ ಶಾಂಘೈ ಸಹಕಾರ ಒಕ್ಕೂಟದ (ಎಸ್‌ಸಿಒ) ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡು ಶಕ್ತಿ ಪ್ರದರ್ಶನ ಮಾಡಿದ್ದರ ಫೋಟೋವನ್ನು ಪೋಸ್ಟ್ ಮಾಡಿದ್ದರು. ಈ ಮೂಲಕ ಮೂರೂ ದೇಶಗಳ ಬಗ್ಗೆ ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ಇದು ಸಾಕಷ್ಟು ಚರ್ಚೆಗಳನ್ನು ಹುಟ್ಟು ಹಾಕಿದೆ. ರಷ್ಯಾದಿಂದ ತೈಲ ಖರೀದಿ ಮತ್ತು ಶೇ.50ರಷ್ಟು ತೆರಿಗೆ ಹಿನ್ನೆಲೆಯಲ್ಲಿ ಅಮೆರಿಕ ಮತ್ತು ಭಾರತದ ನಡುವಿನ 20 ವರ್ಷಗಳ ಆತ್ಮೀಯ ಸಂಬಂಧ ಬಹುತೇಕ ಹದಗೆಟ್ಟಿದೆ. ಆ ಬಳಿಕ ಭಾರತವು ಚೀನಾ ಜತೆಗಿನ ವಿವಾದ ಪರಿಹಾರಕ್ಕೆ ಹೆಚ್ಚಿನ ಮಹತ್ವ ನೀಡಿದೆ. ಅಮೆರಿಕ ಬೆದರಿಕೆ ಹೊರತಾಗಿಯೂ ರಷ್ಯಾ ಜತೆಗಿನ ಸಂಬಂಧ ಕಡಿದು ಕೊಳ್ಳದೇ ಇರಲು ನಿರ್ಧರಿಸಿದೆ. ಇದರ ಬೆನ್ನಲ್ಲೇ ಎಸ್‌ಒ ಶೃಂಗದಲ್ಲಿ ಪುಟಿನ್ ಕ್ಸಿಮತ್ತು ಮೋದಿ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡು ಶಕ್ತಿ ಪ್ರದರ್ಶನ ಮಾಡಿದ್ದರು. ವಿರೋಧಿಗಳ ಒಗ್ಗಟ್ಟು ಟ್ರಂಪ್ ರನ್ನು ವಿಚಲಿತ ಮಾಡಿದೆ ಎಂದು ಹೇಳಲಾಗುತ್ತಿದೆ.

**ಮೋದಿ ಗೈರು:** ಇದೇ ವೇಳೆ 80ನೇ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾಗವಹಿಸಲು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಈ ತಿಂಗಳು ನ್ಯೂಯಾರ್ಕ್‌ಗೆ ಪ್ರಯಾಣಿಸಲಿದ್ದಾರೆ. ಆದರೆ, ಪ್ರಧಾನಿ ಮೋದಿ ಅವರ ಭಾಗವಹಿಸುವಿಕೆಯ ಬಗ್ಗೆ ಇನ್ನೂ ಅನಿಶ್ಚಿತತೆ ಮುಂದುವರೆದಿದೆ. ಭಾರತದ ನಿಯೋಗದ ನೇತೃತ್ವವನ್ನು ಯಾರು ವಹಿಸುತ್ತಾರೆ ಎಂಬುದನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಇನ್ನೂ ಖಚಿತಪಡಿಸಿಲ್ಲ. ವರದಿಗಳ ಪ್ರಕಾರ, ಸೆ.26ರಂದು ಯುಎನ್‌ಜಿಎಯಲ್ಲಿ ಭಾಷಣ ಮಾಡಲು ಪ್ರಧಾನಿಗಳಿಗೆ ಒಂದು ಸಮಯವನ್ನು ಕಾಯ್ದಿರಿಸಲಾಗಿತ್ತು.

**1** ಮೋದಿ, ಬ್ರಿಕ್ಸ್ ಶೃಂಗಸಭೆಗೆ ಹಾಜರಾಗುವುದಿಲ್ಲ

**2** ಅಮೆರಿಕದ ವ್ಯಾಪಾರ ನೀತಿಗಳಿಗೆ ಸಂಬಂಧಿಸಿದಂತೆ ಚರ್ಚೆ ಮತ್ತು ಟ್ರಂಪ್ ಆಡಳಿತದ ಒತ್ತಡದ ಪರಿಣಾಮ

**3** ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮೀರ್ ಪುಟಿನ್ ಅವರೊಂದಿಗೆ ಕಾಣಿಸಿಕೊಂಡದ್ದು ಅಮೆರಿಕದ ಕಣ್ಣು ಕೆಂಪಾಗಿಸಿತ್ತು.

### ಹೊಸ ಸುಂಕ ವಿಧಾನ

ಹೊಸ ಕಾರ್ಯಕಾರಿ ಆದೇಶದ ಪ್ರಕಾರ, ಅಲ್ಯೂಮಿನಿಯಂ ಹೈಡ್ರಾಕ್ಸೈಡ್, ರಾಳಗಳು, ಮತ್ತು ಸಿಲಿಕೋನ್ ಉತ್ಪನ್ನಗಳ ಮೇಲೆ ಪರಸ್ಪರ ಸುಂಕವನ್ನು ವಿಧಿಸಲಾಗಿದೆ. ಈ ಉತ್ಪನ್ನಗಳು ಈಗ 10% ಜಾಗತಿಕ ಸುಂಕಕ್ಕೆ ಒಳಪಡಲಿದ್ದು, ಕೆಲವು ದೇಶಗಳಿಗೆ ವೈಯಕ್ತಿಕ ಸುಂಕ ದರಗಳು (11% ರಿಂದ 50%) ಅನ್ವಯವಾಗಬಹುದು. ಈ ಕ್ರಮವು ಏಪ್ರಿಲ್ 2, 2025ರಂದು ಘೋಷಿತವಾದ ಲಿಬರೇಶನ್ ಡೇ ಸುಂಕ ನೀತಿಯ ಭಾಗವಾಗಿದ್ದು, ವ್ಯಾಪಾರ ಅಸಮತೋಲನವನ್ನು ಸರಿಪಡಿಸುವ ಗುರಿಯನ್ನು ಹೊಂದಿದೆ. ಈ ಆದೇಶವು ಟ್ರೇಡ್ ಎಕ್ಸ್‌ಪಾನ್ಶನ್ ಆಕ್ಟ್ 1962ರ ಸೆಕ್ಷನ್ 232 ಅಡಿಯಲ್ಲಿ ಉಕ್ಕು, ಅಲ್ಯೂಮಿನಿಯಂ, ಮತ್ತು ಆಟೋಮೊಬೈಲ್‌ಗಳಿಗೆ ವಿಧಿಸಲಾದ 50% ಸುಂಕಕ್ಕೆ ತೊಡಕಾಗದಂತೆ ರೂಪಿಸಲಾಗಿದೆ.

**ಪ್ರಧಾನಿ ಮೋದಿ ಶನಿವಾರ ಫ್ರೆಂಚ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ವಿವಿಧ ವಲಯಗಳಲ್ಲಿ ಎರಡೂ ದೇಶಗಳು ತಮ್ಮ ನಡುವಿನ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸುವಲ್ಲಿ ಮಾಡಿದ ಪ್ರಗತಿಯ ಬಗ್ಗೆ ಅವರು ಚರ್ಚಿಸಿದರು. ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಫೆಬ್ರವರಿ 2022ರಲ್ಲಿ ಭುಗಿಲೆದ್ದ ಉಕ್ರೇನ್‌ನಲ್ಲಿನ ಯುದ್ಧವನ್ನು ಕೊನೆಗೊಳಿಸುವ ಮಾರ್ಗಗಳ ಬಗ್ಗೆ ಉಭಯ ನಾಯಕರು ಚರ್ಚಿಸಿದ್ದಾಗಿ ತಿಳಿಸಿದ್ದಾರೆ.''ಫ್ರೆಂಚ್ ಅಧ್ಯಕ್ಷ ಮ್ಯಾಕ್ರನ್‌ರೊಂದಿಗೆ ಉತ್ತಮ ಸಂಭಾಷಣೆ ನಡೆಸಿದೆ. ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದಲ್ಲಿನ ಪ್ರಗತಿಯನ್ನು ನಾವು ಪರಿಶೀಲಿಸಿದ್ದೇವೆ. ಕೆಲವು ವಿಷಯಗಳ ಬಗ್ಗೆ ಸಕಾರಾತ್ಮಕವಾಗಿ ನಿರ್ಣಯ ತೆಗೆದುಕೊಂಡಿದ್ದೇವೆ'' ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಉಕ್ರೇನ್‌ನಲ್ಲಿನ ಸಂಘರ್ಷವನ್ನು ಶೀಘ್ರವಾಗಿ ಕೊನೆಗೊಳಿಸುವ ಪ್ರಯತ್ನಗಳು ಸೇರಿದಂತೆ ಅಂತಾರಾಷ್ಟ್ರೀಯ ಮತ್ತು ಪ್ರಾದೇಶಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿ ಕೊಂಡಿದ್ದೇವೆ. ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯು ಜಾಗತಿಕ ಶಾಂತಿ ಮತ್ತು ಸ್ಥಿರತೆಯನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.'' ಎಂದು ಮೋದಿ ಹೇಳಿದ್ದಾರೆ.**

### ಪ್ರಧಾನಿ ಮೋದಿ ಟ್ವೀಟ್‌ನಲ್ಲೇನಿದೆ

**ತಮ್ಮನ್ನು ಆಪ್ತ ಸ್ನೇಹಿತ ಎಂದು ಕರೆದಿರುವ ಡೊನಾಲ್ಡ್ ಟ್ರಂಪ್ ಅವರನ್ನು ಉದ್ದೇಶಿಸಿ, ಅಧ್ಯಕ್ಷ ಟ್ರಂಪ್ ಅವರ ಭಾವನೆಗಳನ್ನು ಮತ್ತು ನಮ್ಮ ಸಂಬಂಧಗಳ ಬಗ್ಗೆ ಅವರ ಸಕಾರಾತ್ಮಕ ಮೌಲ್ಯಮಾಪನವನ್ನು ನಾವು ಆಳವಾಗಿ ಪ್ರಶಂಸಿಸುತ್ತೇವೆ . ಅಲ್ಲದೇ ಈ ಭಾವನೆಯನ್ನು ನಾವು ಸಂಪೂರ್ಣವಾಗಿ ವಿನಿಮಯ ಮಾಡಿಕೊಳ್ಳುತ್ತೇವೆ ಎಂದು ಪ್ರಧಾನಿ ಮೋದಿ ತಮ್ಮ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಮುಂದುವರೆದು, ಭಾರತ ಮತ್ತು ಅಮೆರಿಕದ ನಡುವೆ ಬಹಳ ಸಕಾರಾತ್ಮಕ ಮತ್ತು ಭವಿಷ್ಯ-ದೃಷ್ಟಿಕೋನದ ಸಮಗ್ರ ಮತ್ತು ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ ಇದೆ ಎಂದು ಪ್ರಧಾನಿ ಮೋದಿ ತಮ್ಮ ಟ್ವೀಟ್‌ನಲ್ಲಿ ಮಾರ್ಮಿಕವಾಗಿ ಹೇಳಿದ್ದಾರೆ. ಟ್ರಂಪ್-ಮೋದಿ ಗೆಳೆತನ ಮುರಿದು ಬಿದ್ದಿದೆ ಎಂಬ ವಿಶ್ಲೇಷಣೆಗಳ ನಡುವೆಯೇ, ಇಬ್ಬರೂ ನಾಯಕರು ತಮ್ಮ ನಡುವಿನ ಗೆಳೆತನ ಮತ್ತು ಭಾರತ-ಅಮೆರಿಕ ರಾಜತಾಂತ್ರಿಕ ಸಂಬಂಧಗಳ ಬಗ್ಗೆ ಸಕಾರಾತ್ಮಕವಾಗಿ ಮಾತನಾಡಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.**

# ಸೆಂಥಿಲ್ ಹೂಡಿರುವ ಮಾನನಷ್ಟ ಮೊಕದ್ದಮೆ ವಿರುದ್ಧ ಹೋರಾಡುವೆ

**ತನಿಖೆಯನ್ನು ಕೇಂದ್ರದ ಎನ್‌ಐಎ ಮತ್ತು ಸಿಬಿಐಗೆ ನೀಡಬೇಕೆಂದು ಮನವಿ ಮಾಡಿದ ರೆಡ್ಡಿ**

• ಉದಯವಾಹಿನಿ, ಬಳ್ಳಾರಿ

ಧಾರ್ಮಿಕ ಕ್ಷೇತ್ರವಾದ ಧರ್ಮಸ್ಥಳದ ಬಗ್ಗೆ ಅಪಪ್ರಚಾರದಲ್ಲಿ ಎಡಪಂಥೀಯದವರು ಭಾಗಿಯಾಗಿದ್ದಾರೆ ಎಂದು ಬೆಂಗಳೂರಿನಲ್ಲಿ ಹೇಳಿಕೆ ನೀಡಿದ್ದೆ. ಬಳ್ಳಾರಿ ಮೂಲದ ಯುಟ್ಯೂಬರ್ ಸಮೀರ್ ಎಂಡಿ ಎಂಬ ಯುವಕನಿಂದ ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡಿಸಿದ್ದಾರೆ. ಇದೊಂದು ಷಡ್ಯಂತ್ರ ಎಂದು ಮಾಜಿ ಸಚಿವ ಜಿ. ಜನಾರ್ದನ ರೆಡ್ಡಿ ಪುನರುಚ್ಚರಿಸಿದ್ದಾರೆ.

ಈ ಎಲ್ಲದಕ್ಕೂ ಮೂಲ ತಮಿಳುನಾಡಿನ ಕಾಂಗ್ರೆಸ್ ಸಂಸದ ಸಸಿಕಾಂತ್ ಸೆಂಥಿಲ್. ಮುಸುಕುಧಾರಿ (ಸಿಎನ್ ಚಿನ್ನಯ್ಯ) ಮೂಲ ಕೂಡ ತಮಿಳುನಾಡು ಆಗಿದೆ. ಬಲಪಂಥೀಯ, ಹಿಂದುಗಳ ವಿರುದ್ಧ ಮಾತನಾಡಿದ್ದ ಸೆಂಥಿಲ್ ಅವರು ಕಾಂಗ್ರೆಸ್‌ನಲ್ಲಿ ಇದ್ದಾರೆ ಎಂದು ಗಂಗಾವತಿ ಶಾಸಕರು ಹೇಳಿದ್ದಾರೆ.

**ಮಾನನಷ್ಟ ಮೊಕದ್ದಮೆ ವಿರುದ್ಧ ಹೋರಾಟ**

ಸಸಿಕಾಂತ್ ಸೆಂಥಿಲ್ ನನ್ನ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದು, ನಾನು ಇದರ ವಿರುದ್ಧ ಹೋರಾಡುವೆ. ಇಂತಹ ಅದೆಷ್ಟೋ ಮಾನನಷ್ಟ ಮೊಕದ್ದಮೆಗಳನ್ನು ಜೀವನದಲ್ಲಿ ಎದುರಿಸಿದ್ದೇನೆ. ಮಾಜಿ ಐಎಎಸ್ ಅಧಿಕಾರಿಯಾಗಿರುವ ಸೆಂಥಿಲ್ ಅವರು ಪ್ರಕರಣವನ್ನು ಸಿಬಿಐ, ಎನ್‌ಐಎಗೆ ವಹಿಸಬೇಕೆಂದು ಸಿಎಂಗೆ ಮನವಿ ಮಾಡಿದ್ದರೆ ಸಂತೋಷವಾಗುತ್ತಿತ್ತು. ಆದರೆ, ಅದು ಮಾಡಲಿಲ್ಲ ಎಂದು ಜನಾರ್ದನ ರೆಡ್ಡಿ ಬೇಸರ ವ್ಯಕ್ತಪಡಿಸಿದರು.

ಎಡಪಂಥೀಯರಾಗಿರುವ ಸಸಿಕಾಂತ್ ಸೆಂಥಿಲ್ ಅವರು ರಾಹುಲ್ ಗಾಂಧಿ ಅವರ ಬಲಗೈಯಾಗಿದ್ದು, ಅವರ ಮೂಲಕ ರಾಜ್ಯ ಸರಕಾರದ ಮೇಲೆ ಒತ್ತಡ ತಂದು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿದ್ದಾರೆ. ಈ ಮೂಲಕ ದಿಕ್ಕು ತಪ್ಪಿಸುವ ಕಾರ್ಯಕ್ಕೆ ಮುಂದಾಗಿದ್ದಾರೆ. ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರವಿದ್ದು, ಸೆಂಥಿಲ್ ಅವರನ್ನು ವಿಚಾರಣೆಗೆ ಒಳಪಡಿಸುವುದು ಅನುಮಾನ. ಹೀಗಾಗಿ, ತನಿಖೆಯನ್ನು ಕೇಂದ್ರದ ಎನ್‌ಐಎ, ಸಿಬಿಐಗೆ ನೀಡಬೇಕು. ತಮಿಳುನಾಡಿನಲ್ಲಿ ಬಿಜೆಪಿ ಬಲಿಷ್ಠವಾಗುತ್ತಿದ್ದು ಇದನ್ನು ಸಹಿಸದೆ ಅಣ್ಣಾಮಲೈ ವಿರುದ್ಧ ಸಹ ಸಸಿಕಾಂತ್ ಸೆಂಥಿಲ್ ಅವರು ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದರು.



ಜನಾರ್ದನ ರೆಡ್ಡಿ ಆರೋಪದ ಬಗ್ಗೆ ಖಾಸಗಿ ಮಾಧ್ಯಮವೊಂದಕ್ಕೆ ನೀಡಿದ್ದ ಸಂದರ್ಶನದಲ್ಲಿ ಮಾತನಾಡಿದ್ದ ಸಸಿಕಾಂತ್ ಸೆಂಥಿಲ್, ಆರೋಪ ಕೇಳಿ ಆಶ್ಚರ್ಯ ಆಗಿತ್ತು. ಬಳ್ಳಾರಿಯಲ್ಲಿ ಸಹಾಯಕ ಆಯುಕ್ತ ಆಗಿದ್ದಾಗ ರೆಡ್ಡಿ ವಿರುದ್ಧ ಸಿಬಿಐಗೆಲ್ಲ ಸಾಕ್ಷ್ಯಗಳನ್ನು ನೀಡಿದ್ದೇ ನಾನು. ಆ ದ್ವೇಷದಲ್ಲಿ ಈ ಆರೋಪ ಮಾಡಿದ್ದಾರೆ ಎಂದು ಹೇಳಿದ್ದರು. ಅಲ್ಲದೆ ಮಾನನಷ್ಟ ಮೊಕದ್ದಮೆ ಹೂಡುವುದಾಗಿಯೂ ಹೇಳಿದ್ದರು. ಅದರಂತೆ ಮೊಕದ್ದಮೆಯನ್ನೂ ಹೂಡಿದ್ದಾರೆ. ಇದನ್ನೀಗ ಎದುರಿಸುವುದಾಗಿ ಜನಾರ್ದನ ರೆಡ್ಡಿ ತಿಳಿಸಿದ್ದಾರೆ.

# ಕಾಂಗ್ರೆಸ್ ನಾಯಕರಿಗೆ ಬಿಜೆಪಿ ಬಹಿರಂಗ ಸವಾಲು


**ಇವಿಎಂ ಬದಲಿಗೆ ಮತಪತ್ರ, ಬ್ಯಾಲೆಟ್ ಪೇಪರ್ ಬಳಸಲು ರಾಜ್ಯ ಚುನಾವಣಾ ಆಯೋಗಕ್ಕೆ ತಿದ್ದುಪಡಿ ಮಾಡಲು ಮನವಿ**

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ನಾಯಕರಿಗೆ ವಿದ್ಯುನ್ಮಾನ ಮತಯಂತ್ರ (ಇವಿಎಂ)ದ ಬಗ್ಗೆ ನಂಬಿಕೆ ಇಲ್ಲದಿದ್ದರೆ ತತ್‌ಕ್ಷಣವೇ ವಿಧಾನಸಭೆಯನ್ನು ವಿಸರ್ಜಿಸಿ ಹೊಸ ಜನಾದೇಶ ಪಡೆಯಲಿ ಎಂದು ಬಿಜೆಪಿ ಬಹಿರಂಗ ಸವಾಲು ಹಾಕಿದೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ 136 ಸ್ಥಾನಗಳನ್ನು ಗೆದ್ದು ಅಧಿಕಾರಕ್ಕೆ ಬಂದಾಗ ಇವಿಎಂ ತುಂಬಾ ಚೆನ್ನಾಗಿ ಕೆಲಸ ಮಾಡಿತ್ತು. ಈಗ ಸೋಲುವ ಭೀತಿ ಎದುರಾದಾಗ ಇದೇ ಇವಿಎಂಗಳ ಮೇಲೆ ದೋಷಾರೋಪ ಮಾಡುತ್ತಿದ್ದೀರಿ. ಇದರ ಬದಲು ವಿಧಾನಸಭೆಯನ್ನು ವಿಸರ್ಜಿಸಿ ಚುನಾವಣೆಗೆ ಬನ್ನಿ ಎಂದು ಬಿಜೆಪಿ ನಾಯಕರು ಸವಾಲು ಹಾಕಿದರು.

ಪಕ್ಷದ ಕಚೇರಿಯಲ್ಲಿ ಜಂಟಿ ಸುದ್ದಿಗೋಷ್ಠಿ ನಡೆಸಿದ ಮಾಜಿ ಮುಖ್ಯಮಂತ್ರಿ, ಬಸವರಾಜ ಬೊಮ್ಮಾಯಿ, ಸಂಸದ ಗೋವಿಂದ ಕಾರಜೋಳ, ವಿಧಾನ ಪರಿಷತ್‌ನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಮತ್ತಿತರರು ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಇವಿಎಂ ಬದಲಿಗೆ ಮತಪತ್ರ(ಬ್ಯಾಲೆಟ್ ಪೇಪರ್) ಬಳಸಲು ರಾಜ್ಯ ಚುನಾವಣಾ ಆಯೋಗಕ್ಕೆ ತಿದ್ದುಪಡಿ ಮಾಡಲು ಮುಂದಾಗಿರುವ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿದರು. ಹಳ್ಳಿಯವರೇ ಇವಿಎಂಗಳನ್ನು ಅಚ್ಚುಕಟ್ಟಾಗಿ ಬಳಸುವುದನ್ನು ಕಲಿತಿದ್ದಾರೆ. ಇವಿಎಂಗಳಲ್ಲಿ ಗೊಂದಲ, ದೋಷ ಇದ್ದರೆ ಬಂದು ತೋರಿಸಿ, ದಾಖಲೆ ಕೊಡಿ ಎಂದರೂ ಯಾರೂ ಮುಂದೆ ಬರಲಿಲ್ಲ. ಈಗ ಇವಿಎಂಗಳ ಬದಲು ಬ್ಯಾಲೆಟ್ ಪೇಪರ್‌ಗಳನ್ನು ಅನುಭವದ ಮೇಲೆ ತರುತ್ತಿದ್ದಾರೆಂದ ಸಿಎಂ ಹೇಳಿದ್ದಾರೆ. ಯಾವ ಅನುಭವ ಇದೆ ಇವರಿಗೆ..? ನಿಮಗೆ ಇವಿಎಂಗಳ ಮೇಲೆ ನಂಬಿಕೆ ಇಲ್ಲದಿದ್ದರೆ ರಾಜೀನಾಮೆ ಕೊಡಿ. ರಾಜೀನಾಮೆ ಕೊಟ್ಟು ಇವಿಎಂ ಸರಿಯಿಲ್ಲ ಎಂದು ಹೇಳಿ ಎಂದು ಸವಾಲು ಹಾಕಿದರು. ಸರ್ಕಾರದ ಒಳಮೀಸಲಾತಿ ಹಂಚಿಕೆ ಸರಿಯಿಲ್ಲ. ಸರ್ಕಾರ ಗೊಂದಲಗಳನ್ನು ಸರಿಪಡಿಸಿಕೊಳ್ಳಲಿ. ಅನ್ಯಾಯಕ್ಕೊಳಗಾದ ಸಮುದಾಯಗಳ ಜತೆ ಬಿಜೆಪಿ ಇದೆ. ಮೊದಲು ಸರ್ಕಾರ ಗೊಂದಲ ಸರಿಪಡಿಸಿಕೊಳ್ಳಲು ಅವಕಾಶ ಕೊಡುತ್ತೇವೆ. ಸರ್ಕಾರ ಯಾವ ಕ್ರಮವನ್ನೂ ತೆಗೆದುಕೊಳ್ಳದಿದ್ದರೆ ನಾವು ಮುಂದೆ ಕಾನೂನು ಹೋರಾಟ ಮಾಡುತ್ತೇವೆ ಎಂದರು.ಮತಪತ್ರ ಇದ್ದಾಗ ಆಗಿರುವ ಅಕ್ರಮಗಳು ಬೇಕಾದಷ್ಟು ಇವೆ. ಮತಪತ್ರಗಳ ಬಗ್ಗೆ ಉತ್ಸಾಹದಿಂದ ಮಾತನಾಡಿರುವ ರಾಜ್ಯ ಚುನಾವಣಾ ಆಯೋಗದ ಆಯುಕ್ತರು ಅಕ್ರಮಗಳ ಬಗ್ಗೆ ಹಿಂತಿರುಗಿ ನೋಡಬೇಕು ಎಂದು ಬೊಮ್ಮಾಯಿ ಹೇಳಿದರು. ಪ್ರಧಾನಿ ನರೇಂದ್ರಮೋದಿಯವರು ಸಾಮಾಜಿಕ ನ್ಯಾಯಕ್ಕೆ ಹೆಸರಾದವರು.

ಸಿದ್ದರಾಮಯ್ಯ ಥರ ಬೊಗಳೆ ಬಿಟ್ಕೊಂಡು ಓಡಾಡುವುದಿಲ್ಲ. ಸುಪ್ರೀಂಕೋರ್ಟ್‌ನಲ್ಲಿ 2024ರ ಡಿಸೆಂಬರ್‌ನಲ್ಲಿ ಒಳಮೀಸಲಾತಿ ಬಗ್ಗೆ ಮಹತ್ವದ ತೀರ್ಪು ಬಂತು. ಅಸಮಾನರನ್ನು ಪ್ರಬಲರ ಜತೆ ಸೇರಿಸಿ ಮೀಸಲಾತಿ ಹಂಚಬಾರದು ಎಂದು ನ್ಯಾಯಾಲಯ ಹೇಳಿತ್ತು. ನಂತರ ಈ ಸರ್ಕಾರ ಮತ್ತೆ ನಾಗಮೋಹನ ದಾಸ್ ನೇತೃತ್ವದ ಆಯೋಗ ರಚಿಸಿದರು. ಒಳಮೀಸಲಾತಿ ಬಗ್ಗೆ ನಾಗಮೋಹನ ದಾಸ್ ಶಿಫಾರಸ್ಸು ಇದ್ದಿದ್ದು ಕೈಬಿಟ್ಟು 6+6+5 ಒಳಮೀಸಲಾತಿ ಹಂಚಿದರು. ಈ ಮೂಲಕ ಎಸ್ಸಿ ಸಮುದಾಯಗಳಿಗೆ ಕಾಂಗ್ರೆಸ್ ಸಾಮಾಜಿಕ ಅನ್ಯಾಯ ಮಾಡಿದೆ. ಎಕೆ, ಎಡಿ, ಎಎ ವರ್ಗಗಳಿಗೆ ಸರ್ಕಾರದಿಂದ ವಂಚನೆಯಾಗಿದೆ. ಈ ಶ್ರೇಣಿಯಲ್ಲಿ ತಳಮಟ್ಟದಲ್ಲಿರುವ ಅಲೆಮಾರಿಗಳು, ಈ ಸಮುದಾಯಗಳಿಗೆ ಇವತ್ತು ಯಾವುದೇ ಮೀಸಲಾತಿ ಸಿಗದಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಒಳಮೀಸಲಾತಿಯಲ್ಲಿ ಈ ಸರ್ಕಾರ ಸಂಪೂರ್ಣ ಗೊಂದಲ ಸೃಷ್ಟಿ ಮಾಡಿದೆ. ಯಾರೇ ಹೋಗಿ ಸರ್ಕಾರದ ಬಳಿ ಹೋಗಿ ಕೇಳಿದ್ರೂ ಕೋರ್ಟ್‌ಗೆ ಹೋಗಿ ಅಂತಿದ್ದಾರೆ. ಕಾಂಗ್ರೆಸ್ ಒಳಮೀಸಲಾತಿ ವಿಚಾರದಲ್ಲಿ ರಾಜಕೀಯ ನಡೆ ಇಟ್ಟಿದೆ. ಒಳಸಮುದಾಯಗಳ ಮಧ್ಯೆ ಜಗಳ ಹಚ್ಚುವ ಅಪಖ್ಯಾತಿ ಸಿದ್ದರಾಮಯ್ಯ ಮೇಲೆ ಬರಲಿದೆ ಎಂದು ಬೊಮ್ಮಾಯಿ ಆರೋಪಿಸಿದರು.



**ರಾಜ್ಯ ಸರ್ಕಾರದಿಂದ ವಂಚನೆ**

### ಸುಪ್ರೀಂಕೋರ್ಟ್ ಆದೇಶದ ಪಾಲನೆಯೂ ಮಾಡಲಿಲ್ಲ

**ಬ್ಯಾಲೆಟ್ ಪೇಪರ್‌ಗಳಲ್ಲಿ ಅಕ್ರಮ, ಗೊಂದಲವಾಗುತ್ತಿತ್ತು. ಇದನ್ನು ತಪ್ಪಿಸಲು ಇವಿಎಂಗಳು ಬಂದವು. 2004, 2009ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ನವರಿಗೆ ಇವಿಎಂ ಬಗ್ಗೆ ತಕರಾರು ಇರಲಿಲ್ಲ. ಸಿದ್ದರಾಮಯ್ಯ ಗೆದ್ದಿದ್ದೇ ಇದೇ ಇವಿಎಂನಿಂದ. ಇವರು ಗೆಲ್ಲಲು ಇವಿಎಂ ಬೇಕಾಗಿತ್ತು. ಈಗ ಬೆಂಗಳೂರಿನವರಿಗೆ 25 ವರ್ಷ ಹಿಂದೆ ಹೋಗಿ ಮತಪತ್ರದಲ್ಲಿ ಮತದಾನ ಮಾಡಿ ಅಂತಿದ್ದಾರೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಎಂದು ವ್ಯಂಗ್ಯವಾಡಿದರು. ನಾಗಮೋಹನದಾಸ್ ಆಯೋಗ ಕೊಟ್ಟಿದ್ದ ಶಿಫಾರಸ್ಸನ್ನು ಕಾಂಗ್ರೆಸ್ ಸರ್ಕಾರ ಗಾಳಿಗೆ ತೂರಿದರು. ಹಿಂದೆ ವರದಿ ಕೊಟ್ಟಿದ್ದ ಸದಾಶಿವ ಆಯೋಗ, ಮಾಧುಸ್ವಾಮಿ ಸಮಿತಿ ಕೊಟ್ಟಿದ್ದ ಶಿಫಾರಸುಗಳನ್ನು ಕಾಂಗ್ರೆಸ್ ಗಾಳಿಗೆ ತೂರಿದೆ. ಸುಪ್ರೀಂಕೋರ್ಟ್ ಆದೇಶದ ಪಾಲನೆಯೂ ಮಾಡಲಿಲ್ಲ ಎಂದು ಕಿಡಿಕಾರಿದರು.**

| ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,849/Gram24ct ₹9,945/Gram22ct | ಬೆಳ್ಳಿ: ₹128.00/Gram |
|---|---|---|---|---|

# ಅಪಾರ್ಟ್‌ಮೆಂಟ್, ಪಿಜಿಗಳಿಗೆ ಕಾವೇರಿ ನೀರಿನ ದರ ಕಡಿತ


• ಉದಯವಾಹಿನಿ, ಬೆಂಗಳೂರು

ಕಳೆದ ಏಪ್ರಿಲ್‌ನಲ್ಲಿ ನೀರು, ಒಳಚರಂಡಿ ಸ್ವಚ್ಛತೆಯ ದರ ಹೆಚ್ಚಿಸಿದ್ದ ಬೆಂಗಳೂರು ಜಲಮಂಡಳಿ, ಬಲ್ಕ್ ವಾಟರ್ ಬಳಕೆದಾರರಾದ ಅಪಾರ್ಟ್‌ಮೆಂಟ್ ಹಾಗೂ ಪೇಯಿಂಗ್ ಗೆಸ್ಟ್ (ಪಿಜಿ)ಗಳಿಗೆ ನಿಗದಿಪಡಿಸಿರುವ ದರವನ್ನು ಬದಲಿಸಿ, ಕೊಂಚ ಇಳಿಕೆ ಮಾಡಿದೆ.

ಜಲಮಂಡಳಿ ಏಪ್ರಿಲ್‌ನಲ್ಲಿ ಮಾಡಿದ ದರ ಪರಿಷ್ಕರಣೆಯಲ್ಲಿ ವಸತಿ ಸಮುಚ್ಚಯಗಳ ಫ್ಲ್ಯಾಟ್‌ಗಳನ್ನು ಲೆಕ್ಕಿಸದೆ, ಕೇವಲ ನೀರಿನ ಬಳಕೆಯನ್ನು ಮಾತ್ರ ಪರಿಗಣಿಸಿ, ದರ ಹೆಚ್ಚಿಸಲಾಗಿದೆ ಎಂದು ಅಪಾರ್ಟ್‌ಮೆಂಟ್ ಮಾಲೀಕರ ಸಂಘ ಮತ್ತು ಪಿಜಿಗಳ ಮಾಲೀಕರು ಆಕ್ಷೇಪ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿದರ ಇಳಿಕೆ ಮಾಡಿ ಮಂಡಳಿ ಆದೇಶಿಸಿದ್ದು, ಈ ತಿಂಗಳಿಂದ 2,000 ಮನೆಗಳಿಗಿಂತ ಕಡಿಮೆ ಇರುವ ವಸತಿ ಸಮುಚ್ಚಯಗಳಿಗೆ ನೀರಿನ ದರ ತಗ್ಗಲಿದೆ.

**ಎಷ್ಟೆಷ್ಟು ಇಳಿಕೆ?:** ಏಪ್ರಿಲ್‌ನ ಪರಿಷ್ಕರಣೆಯಂತೆ ಬಲ್ಕ್ ವಾಟರ್ ಬಳಕೆದಾರರಿಗೆ ಪ್ರತಿ ಕಿಲೋ ಲೀಟರ್‌ಗೆ 22 ರೂ. ಇದ್ದು, ಬದಲಾವಣೆಗೊಂಡ ಪಟ್ಟಿಯಲ್ಲಿ 4 ಸ್ಲ್ಯಾಬ್‌ಗಳನ್ನಾಗಿ ವಿಂಗಡಿಸಿ, ದರ ನಿಗದಿಪಡಿಸಿದೆ. 200 ಫ್ಲ್ಯಾಟ್‌ಗಳಿಗಿಂತ ಕಡಿಮೆ ಇರುವ ವಸತಿ ಸಮುಚ್ಚಯಗಳಲ್ಲಿ0-200 ಕಿಲೋ ಲೀಟರ್‌ವರೆಗೆ 25 ರೂ., 200-500 ಕಿ.ಲೀ.ವರೆಗೆ 28 ರೂ., 500-1000 ಕಿ.ಲೀ.ವರೆಗೆ 32 ರೂ. ಹಾಗೂ 1000 ಕಿ.ಲೀ.ಗೂ ಮೇಲ್ಪಟ್ಟು ಬಳಕೆಗೆ 55 ರೂ. ದರ ನಿಗದಿಪಡಿಸಿದೆ. 300ರಿಂದ 2000 ಫ್ಲ್ಯಾಟ್‌ಗಳನ್ನು ಹೊಂದಿರುವ ವಸತಿ ಸಮುಚ್ಚಯಗಳಲ್ಲಿ ಪ್ರತಿ ಕಿಲೋ ಲೀಟರ್ ಬಳಕೆ 32 ರೂ. ದರ ನಿಗದಿಪಡಿಸಿದೆ. 2000ಕ್ಕೂ ಹೆಚ್ಚು ಫ್ಲ್ಯಾಟ್‌ಗಳನ್ನು ಹೊಂದಿರುವ ವಸತಿ ಸಮುಚ್ಚಯಗಳು ಪ್ರತಿ ಕಿಲೋ ಲೀಟರ್ ಬಳಕೆಗೆ 55 ರೂ. ಪಾವತಿಸಬೇಕಿದೆ.

**ಏನಿದು ಸಂಚಾರಿ ಕಾವೇರಿ:** ಬೆಂಗಳೂರು ಜಲಮಂಡಳಿಯ ಮಹತ್ವದ ಯೋಜನೆಯಾದ ಸಂಚಾರಿ ಕಾವೇರಿ ಭಾರತದಲ್ಲಿ ಹೊಸ ಕ್ರಾಂತಿ ಮಾಡಿದೆ. ಖಾಸಗಿ ವಾಟರ್ ಟ್ಯಾಂಕರ್‌ಗಳಿಂದ ಬೇಸತ್ತಿದ್ದ ಬೆಂಗಳೂರು ಜನತೆಗೆ ಕಡಿಮೆ ದರದಲ್ಲಿ BIS ಪ್ರಮಾಣೀಕೃತ ಶುದ್ಧ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ಸಂಚಾರಿ ಕಾವೇರಿ ಒದಗಿಸುತ್ತಿದೆ. ಈ ಯೋಜನೆಗೆ ಜನರು ಉತ್ತಮವಾಗಿ ಸ್ಪಂದಿಸುತ್ತಿದ್ದಾರೆ ಎಂದು ಬೆಂಗಳೂರು ಜಲಮಂಡಳಿ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ.



### ಪಿಜಿಯ ಸ್ವಚ್ಛತಾ ಶುಲ್ಕ ಇಷ್ಟಿದೆ

**ಪಿಜಿ ಮಾಲೀಕರ ಸಂಘದ ಮನವಿ ಮೇರೆಗೆ ಸ್ವಚ್ಛತಾ ಶುಲ್ಕವನ್ನು ಶೇ.60ರಷ್ಟು ಕಡಿಮೆ ಮಾಡಲಾಗಿದೆ. 20 ಕೊಠಡಿಗಳನ್ನು ಹೊಂದಿರುವ ಪಿಜಿಗಳಿಗೆ ನಿಗದಿಪಡಿಸಿದ್ದ 5000 ರೂ. ಮಾಸಿಕ ಶುಲ್ಕವನ್ನು 2000 ರೂ.ಗೆ ಮತ್ತು 20ಕ್ಕಿಂತ ಹೆಚ್ಚು ಕೊಠಡಿಗಳನ್ನು ಹೊಂದಿರುವ ಪಿಜಿಗಳಿಗೆ ನಿಗದಿಪಡಿಸಿದ್ದ 7500 ರೂ. ಮಾಸಿಕ ಶುಲ್ಕವನ್ನು 3000 ರೂ. ಇಳಿಸಿದೆ. ಇನ್ನು ಗೃಹ ಬಳಕೆಯೇತರ ನೀರು ಸರಬರಾಜು ಹೊಂದಿರುವ ಹಾಸ್ಟೆಲ್‌ಗಳಿಗೆ ನಿಗದಿಪಡಿಸಿದ್ದ 5000 ರೂ. ಮಾಸಿಕ ಶುಲ್ಕವನ್ನು 3000 ರೂ.ಗೆ ಕಡಿಮೆ ಮಾಡಿದೆ. ನಮ್ಮ ಮನವಿಗೆ ಸ್ಪಂದಿಸಿ ಮಂಡಳಿಯ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಅವರು ಸ್ವಚ್ಛತಾ ಶುಲ್ಕವನ್ನು ಶೇ.60 ಕಡಿಮೆ ಮಾಡಿರುವುದು ಸಂತಸ ತಂದಿದೆ, ಎಂದು ಪಿಜಿ ಮಾಲೀಕರ ಕ್ಷೇಮಾಭಿವೃದ್ಧಿ ಸಂಘದ ಡಿ.ಟಿ.ಅರುಣ್ ಕುಮಾರ್ ತಿಳಿಸಿದ್ದಾರೆ.**

## ಕಲೆ ಮಾನವೀಯ ಮೌಲ್ಯಗಳನ್ನು ಕಲಿಸುತ್ತದೆ: ಡಾ.ಜೋಗಿಲ ಸಿದ್ದರಾಜು

• ಉದಯವಾಹಿನಿ, ಬೆಂಗಳೂರು

ಮಲ್ಲೇಶ್ವರದ 14ನೇ ಅಡ್ಡರಸ್ತೆಯಲ್ಲಿರುವ ಸೇವಾ ಸದನದಲ್ಲಿ ಸಂಗೀತ ನೃತ್ಯ ಭಾರತೀಯ ಅಕಾಡೆಮಿ ವತಿಯಿಂದ ಸೆಪ್ಟೆಂಬರ್ ಐದು ರಂದು ಹಮ್ಮಿಕೊಂಡಿದ್ದ ನಾಲ್ಕು ಪುಟ್ಟ ಕಿಶೋರಿಗಳಾದ ಶ್ರೀನಿಧಿ ಕೆ.ಎಸ್., ವಿಭಾ ವಿಕ್ರಂ, ಸ್ತೋತ್ರಿಕಾ ಮಹಾದೇವ್, ಸಾನ್ವಿ ರಾಜಶೇಖರ್ ಇವರುಗಳ ಗೆಜ್ಜೆಪೂಜೆ ಕಾರ್ಯಕ್ರಮದಲ್ಲಿ



ಮುಖ್ಯ ಅತಿಥಿಗಳಾಗಿ ಮಾತನಾಡಿದ ಡಾ. ಜೋಗಿಲ ಸಿದ್ದರಾಜುರವರು ಜನಪದ, ಶಾಸ್ತ್ರೀಯ ನೃತ್ಯ, ನಾಟಕ ಯಾವುದೇ ಆಗಲಿ ಒಂದು ಕಲೆಯನ್ನು ಕಲಿತರೂ ಕೂಡ ಆ ಕಲೆಯು ಆ ವ್ಯಕ್ತಿಗೆ ಮಾನವೀಯ ಮೌಲ್ಯಗಳು ಕಲಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಮತ್ತೊಬ್ಬ ಮುಖ್ಯ ಅತಿಥಿಯಾಗಿ ಭಾಗವಹಿಸಿದ ವಿದುಷಿ ಉಷಾ ಬಸಪ್ಪನವರು ಮುಖ್ಯವಾಗಿ ಭರತನಾಟ್ಯ ಕಲೆಯು ಕಲಾವಿದರ ಆರೋಗ್ಯ, ಆತ್ಮಸ್ಥೈರ್ಯ ಮತ್ತು ವ್ಯಕ್ತಿತ್ವ ವಿಕಸನವನ್ನು ಮಾಡುತ್ತದೆ ಎಂದು ತಮ್ಮ ಅನಿಸಿಕೆಗಳನ್ನ ಹಂಚಿಕೊಂಡರು ಸಂಗೀತ ನೃತ್ಯ ಭಾರತೀಯ ಅಕಾಡೆಮಿಯ ಸಂಸ್ಥಾಪಕರಾದ ಪದ್ಮ ಹೇಮಂತ್, ಹೇಮಂತ್ ಮತ್ತು ಶೀತಲ್ ರವರು ನಾಲ್ಕು ಜನ ವಿದ್ಯಾರ್ಥಿಗಳಿಗೆ ತರಬೇತಿಯನ್ನು ನೀಡಿ ಗೆಜ್ಜೆಪೂಜೆಯನ್ನು ಆಯೋಜಿಸಿದ್ದರು. ನಾಲ್ಕು ಜನ ವಿದ್ಯಾರ್ಥಿಗಳು ಬಹಳ ಅಚ್ಚುಕಟ್ಟಾಗಿ ತಾವು ಕಲಿತ ಪ್ರಸ್ತುತಿಗಳನ್ನು ಪ್ರದರ್ಶನಗೊಳಿಸಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು.

## ಆಟಿಕೆ ಪಿಸ್ತೂಲ್ ತೋರಿಸಿ ಚಿನ್ನದಂಗಡಿ ದರೋಡೆ: ಮೂವರು ಆರೋಪಿಗಳ ಬಂಧನ

• ಉದಯವಾಹಿನಿ, ಬೆಂಗಳೂರು

ಜುಲೈ 24 ರಂದು ಮಾಚೋಹಳ್ಳಿ ಗೇಟ್ ಬಳಿಯ ಶ್ರೀರಾಮ ಜ್ಯುವೆಲ್ಲರ್ಸ್‌ನಲ್ಲಿ ಆಟಿಕೆ ಪಿಸ್ತೂಲಿನಿಂದ ಬೆದರಿಸಿ ಚಿನ್ನಾಭರಣ ದೋಚಿ ಪರಾರಿಯಾಗಿದ್ದ ಮೂವರು ದರೋಡೆಕೋರರನ್ನು ಮಾದನಾಯಕನಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತರನ್ನು ಮೊಹಮ್ಮದ್ ರಫೀಕ್, ನೌಶಾದ್ ಮೊಹಮ್ಮದ್ ಇಬ್ಟೇಕರ್ ಎಂದು ಗುರ್ತಿಸಲಾಗಿದೆ. ಆರೋಪಿಗಳು ಬಿಹಾರ, ಉಡುಪಿ, ಕೊಡಗು ಮತ್ತು ಒಡಿಶಾದವರು ಎಂದು ತಿಳಿದುಬಂದಿದೆ.

ಮತ್ತೊಬ್ಬ ಆರೋಪಿ ರಾಮ್‌ಶಾದ್ ಎಂಬಾತನಿಗಾಗಿ ಪೊಲೀಸರು ಹುಡುಕಾಟ ಮುಂದುವರೆಸಿದ್ದಾರೆ. ಸಂಪೂರ್ಣ ಘಟನೆಯ ವಿಡಿಯೋ ಅಂಗಡಿಯ ಸಿಸಿಟಿವಿ ಕ್ಯಾಮೆರಾಗಳಲ್ಲಿ ಪತ್ತೆಯಾಗಿತ್ತು. ಆರೋಪಿಗಳು 18 ಸೆಕೆಂಡುಗಳಲ್ಲಿ ದರೋಡೆ ಮಾಡಿ ಪರಾರಿ ಯಾಗಿರುವುದು ಕಂಡುಬಂದಿತ್ತು. ಜನವರಿಯಲ್ಲಿ ಜಯನಗರ 2 ನೇ ಬ್ಲಾಕ್‌ನಲ್ಲಿ 62 ವರ್ಷದ ಮಹಿಳೆಯ ಚಿನ್ನದ ಸರವನ್ನು ದರೋಡೆ ಮಾಡಿದ್ದ ಪ್ರಕರಣದಲ್ಲಿ ರಫೀಕ್ ನನ್ನು ಸಿದ್ದಾಪುರ ಪೊಲೀಸರು ಬಂಧಿಸಿದ್ದರು. ಈ ನಡುವೆ ಆಭರಣ ಮಳಿಗೆಯಲ್ಲಿ ನಡೆದ ದರೋಡೆಯಲ್ಲೂ ಈತ ಭಾಗಿಯಾಗಿರುವುದು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ ಪತ್ತೆಯಾಗಿತ್ತು. ಜುಲೈ 24 ರಂದು ರಾತ್ರಿ 9 ಗಂಟೆ ಸುಮಾರಿಗೆ ಅಂಗಡಿ ಬಂದ್ ಮಾಡುವ ವೇಳೆ, ಮಾಲೀಕರು ಆಭರಣಗಳನ್ನು ಸುರಕ್ಷಿತ ಸ್ಥಳದಲ್ಲಿ ಇಡುತ್ತಿದ್ದಾಗ ಇದ್ದಕ್ಕಿದ್ದಂತೆ ಆರೋಪಿಗಳು ಅಂಗಡಿಗೆ ನುಗ್ಗಿದ್ದರು. ಬಳಿಕ ಪಿಸ್ತೂಲ್ ತೋರಿಸಿ, 150 ಗ್ರಾಂ ಚಿನ್ನದ ಆಭರಣಗಳನ್ನು ಹೊತ್ತೊಯ್ದಿದ್ದರು. ಬಳಿಕ ಮಾಲೀಕ ಕನ್ನಯ್ಯ ಲಾಲ್ ಅವರು ಪೊಲೀಸರಿಗೆ ದೂರು ನೀಡಿದ್ದರು.

## ಕಾನ್ಸ್‌ಟೇಬಲ್ ಮೇಲೆ ಪತ್ನಿ ಮಚ್ಚಿನಿಂದ ಹಲ್ಲೆ, ಕೇಸು ದಾಖಲು

• ಉದಯವಾಹಿನಿ, ಬೆಂಗಳೂರು

ಕಗ್ಗಲಿಪುರದ ಕೃಷ್ಣಪ್ಪ ಲೇಔಟ್‌ನಲ್ಲಿ 28 ವರ್ಷದ ಪೊಲೀಸ್ ಕಾನ್ಸ್‌ಟೇಬಲ್ ಮೇಲೆ ಅವರ ಪತ್ನಿಯೇ ಮಚ್ಚಿನಿಂದ ಹಲ್ಲೆ ನಡೆಸಿರುವ ಘಟನೆ ನಡೆದಿದೆ. ಕಗ್ಗಲಿಪುರ ಪೊಲೀಸ್ ಠಾಣೆಗೆ ಸೇರಿದ ಕಾನ್ಸ್‌ಟೇಬಲ್ ಆರ್. ಗಗನ್ ಕುಮಾರ್ ತಲೆಗೆ ಗಾಯವಾಗಿ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರ ಪತ್ನಿ ವಿ. ಪ್ರಿಯಾಂಕಾ ಅವರನ್ನು ಇನ್ನೂ ಬಂಧಿಸಲಾಗಿಲ್ಲ. ಘಟನೆಯ ನಂತರ, ಪ್ರಿಯಾಂಕಾ ತಮ್ಮ 3ವರ್ಷದ ಮಗನೊಂದಿಗೆ ಮನೆ ಬಿಟ್ಟು ಹೋಗಿದ್ದಾಳೆ. ಪ್ರಿಯಾಂಕಾ ಮನೆಯ ಮುಂಭಾಗದ ಬಾಗಿಲಿಗೆ ಬೀಗ ಹಾಕಿದ್ದರಿಂದ ಗಗನ್ ಸಹಾಯಕ್ಕಾಗಿ ಪೊಲೀಸ್ ಸಬ್-ಇನ್ಸ್‌ಪೆಕ್ಟರ್‌ಗೆ ಕರೆ ಮಾಡಿದರು. ದಂಪತಿಗಳ ನಡುವಿನ ಭಿನ್ನಾಭಿಪ್ರಾಯವೇ ಘಟನೆಗೆ ಕಾರಣ ಎಂದು ಹೇಳಲಾಗಿದೆ. ಗಗನ್ ಫೇಸ್‌ಬುಕ್‌ನಲ್ಲಿ ಪರಿಚಿತರಾದ ಹಾಸನ ಜಿಲ್ಲೆಯ ಆಲೂರಿನ ಪ್ರಿಯಾಂಕಾ ಅವರನ್ನು ನಾಲ್ಕು ವರ್ಷಗಳ ಹಿಂದೆ ವಿವಾಹವಾದರು. ಗಗನ್ ಅವರ ಹೆತ್ತವರಿಗೆ ಅವರ ಊರಿನಲ್ಲಿ ಮನೆ ಕಟ್ಟಲು ಆರ್ಥಿಕವಾಗಿ ಸಹಾಯ ಮಾಡಿದ್ದಕ್ಕಾಗಿ ಪ್ರಿಯಾಂಕಾ ಆಗಾಗ್ಗೆ ಜಗಳವಾಡುತ್ತಿದ್ದಳು. ಅತ್ತೆ-ಮಾವಂದಿರನ್ನು ನಿಂದಿಸುತ್ತಿದ್ದರು. ನಿನ್ನೆ ಬೆಳಗ್ಗೆ, ಪ್ರಿಯಾಂಕಾ ತಮ್ಮ ಮಗನನ್ನು ಶಾಲೆಗೆ ಬಿಡಲು ಹೇಳಿದಾಗ ಗಗನ್ ಜೊತೆ ಜಗಳವಾಡಿ ಮಚ್ಚಿನಿಂದ ಹಲ್ಲೆ ಮಾಡಿದ್ದಾಳೆ. ತಲೆಗೆ ಗಾಯಗಳಾಗಿದ್ದ ಗಗನ್ ಸಹಾಯಕ್ಕಾಗಿ ಕಿರುಚಲು ಪ್ರಾರಂಭಿಸಿದರು. ಆಗ ಪ್ರಿಯಾಂಕಾ ಮಗನೊಂದಿಗೆ ಮನೆಯಿಂದ ಹೊರಟುಹೋಗಿದ್ದಾಳೆ ಎಂದು ಗಗನ್ ಹೇಳಿಕೆಯನ್ನು ಉಲ್ಲೇಖಿಸಿ ಪೊಲೀಸರು ಪ್ರಿಯಾಂಕಾ ವಿರುದ್ಧ ಕೊಲೆ ಯತ್ನ ಪ್ರಕರಣ ದಾಖಲಿಸಿದ್ದಾರೆ.

## ಕಾರಿಗೆ ಸೈಡ್ ಬಿಡಲಿಲ್ಲ ಅಂತ ಬಸ್ ಚಾಲಕನ ಮೇಲೆ ಪೊಲೀಸ್ ಸಿಬ್ಬಂದಿ ಹಲ್ಲೆ

• ಉದಯವಾಹಿನಿ, ಬೆಂಗಳೂರು

ತನ್ನ ಕಾರಿಗೆ ಸೈಡ್ ಬಿಡಲಿಲ್ಲ ಅಂತ ಬಸ್ ಚಾಲಕನ ಮೇಲೆ ಜಿಗಣಿ ಠಾಣೆಯ ಪೊಲೀಸ್ ಸಿಬ್ಬಂದಿಯೊಬ್ಬರು ಹಲ್ಲೆ ಮಾಡಿರುವ ಘಟನೆ ನಡೆದಿದೆ. ರಾತ್ರಿ 11 ಗಂಟೆ ಸುಮಾರಿ ಘಟನೆ ನಡೆದಿದೆ. ಎಣ್ಣೆ ಮತ್ತಲ್ಲಿ ಬಸ್ ಡಿಪೋ ಒಳಗೆ ಕಾರು ನುಗ್ಗಿಸಿ ಬಸ್ ಚಾಲಕನನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಅಲ್ಲದೇ, ಹಲ್ಲೆ ಕೂಡ ನಡೆಸಿದ್ದಾರೆಂದು ಆರೋಪಿಸಲಾಗಿದೆ. ಬಸ್ ಚಾಲಕ ಸುನೀಲ್ ಮೇಲೆ ಹಲ್ಲೆ ಮಾಡಿ ಪೊಲೀಸ್ ಸಿಬ್ಬಂದಿ ದರ್ಪ ತೋರಿದ್ದಾರೆ. ಹಲ್ಲೆ ಖಂಡಿಸಿ ಡಿಪೋದಿಂದ ಬಸ್‌ಗಳನ್ನು ಹೊರ ತೆಗೆಯುವುದಿಲ್ಲ ಎಂದು ಬಿಎಂಟಿಸಿ ಚಾಲಕರು ಪ್ರತಿಭಟಿಸಿದ್ದಾರೆ. ಹಲ್ಲೆ ಮಾಡಿದ ಪೊಲೀಸ್ ಸಿಬ್ಬಂದಿಯನ್ನ ಬಂಧಿಸುವ ತನಕ ಬಸ್ ಓಡಿಸಲ್ಲ, ಕರ್ತವ್ಯಕ್ಕೆ ಹಾಜರಾಗಲ್ಲ ಎಂದು ಜಿಗಣಿ ಬಸ್ ಡಿಪೋ 27ರ ಸಿಬ್ಬಂದಿ ಪಟ್ಟು ಹಿಡಿದಿದ್ದರು. ಪೊಲೀಸ್ ಸಿಬ್ಬಂದಿ ಮತ್ತು ಚಾಲಕನ ನಡುವಿನ ಗಲಾಟೆಯ ದೃಶ್ಯವನ್ನು ವಿಡಿಯೋ ಮಾಡಿಕೊಳ್ಳಲಾಗಿದೆ.

# ಸಂಚಾರಿ ಕಾವೇರಿಯಿಂದ 1.5 ಕೋಟಿ ರೂ. ಆದಾಯ

**ಜಲಮಂಡಳಿಯಿಂದಲೇ ನಿಗದಿತ ದರದಲ್ಲಿ ಶುದ್ಧ ನೀರು ಒದಗಿಸಲು ಮೇ 9ರಂದು ಸಂಚಾರಿ ಕಾವೇರಿ ಯೋಜನೆಗೆ ಚಾಲನೆ**

• ಉದಯವಾಹಿನಿ, ಬೆಂಗಳೂರು

ಟ್ಯಾಂಕರ್ ಮೂಲಕ ರಾಜಧಾನಿಯ ಜನರಿಗೆ ಶುದ್ಧ ಕಾವೇರಿ ಕುಡಿಯುವ ನೀರನ್ನು ಪೂರೈಸುವ ಸದುದ್ದೇಶದಿಂದ ಬೆಂಗಳೂರು ಜಲಮಂಡಳಿ ಜಾರಿಗೊಳಿಸಿರುವ ಸಂಚಾರಿ ಕಾವೇರಿ ಯೋಜನೆಯಡಿ ಸುಮಾರು 1.48 ಕೋಟಿ ರೂ. ಸೆ.1ರವರೆಗೆ ಆದಾಯ ಸಂಗ್ರಹವಾಗಿದೆ.

ಪ್ರತಿ ವರ್ಷ ಬೇಸಿಗೆಯಲ್ಲಿ ಉಂಟಾಗುವ ನೀರಿನ ಅಭಾವ, ಪರಿಣಾಮವಾಗಿ ಗರಿಗೆದರುವ ಖಾಸಗಿ ಟ್ಯಾಂಕರ್ ಹಾವಳಿಗೆ ಕಡಿವಾಣ ಹಾಕಲು, ಅಂತರ್ಜಲದ ಮೇಲಿನ ಅವಲಂಬನೆ ಕಡಿಮೆ ಮಾಡುವ ಉದ್ದೇಶದಿಂದ ಜಲಮಂಡಳಿಯಿಂದಲೇ ನಿಗದಿತ ದರದಲ್ಲಿ ಶುದ್ಧ ನೀರು ಒದಗಿಸಲು ಮೇ 9ರಂದು ಸಂಚಾರಿ ಕಾವೇರಿ ಯೋಜನೆಗೆ ಚಾಲನೆ ನೀಡಲಾಗಿತ್ತು. ಸುಮಾರು ಮೂರೂವರೆ ತಿಂಗಳಲ್ಲಿ 14,530 ಲೋಡ್ ನೀರು ಸರಬರಾಜಾಗಿದೆ.

ಬಾಡಿಗೆ ಜಲಮಂಡಳಿಯ ಅಧೀನದ ಟ್ಯಾಂಕರ್‌ಗಳೂ ಸೇರಿ ಒಟ್ಟು 200 ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಆರಂಭಿಸಲಾಗಿತ್ತು. ಲೀಟರ್ ಪ್ರಮಾಣವನ್ನು ಆಧರಿಸಿ, ನಾಲ್ಕು



☛ ಉದಯವಾಹಿನಿ ಚಿತ್ರ



ವರ್ಗಗಳಲ್ಲಿದರ ನಿಗದಿಪಡಿಸಲಾಗಿತ್ತು. ಪ್ರಾರಂಭದ ಎರಡು ತಿಂಗಳು ನಗರದಾದ್ಯಂತ ಯೋಜನೆಗೆ ಉತ್ತಮ ಸ್ಪಂದನೆ ದೊರೆಯಿತು. ಈಗ ಕೊಂಚ ತಗ್ಗಿದೆ. ಹಾಗಾಗಿ, ಸದ್ಯ 160 ಟ್ಯಾಂಕರ್‌ಗಳು ನೀರು ಸರಬರಾಜು ಕಾರ್ಯಾಚರಣೆಯಲ್ಲಿವೆ. ವೈಯಕ್ತಿಕ ಮನೆಗಳು, ಅಪಾರ್ಟ್‌ಮೆಂಟ್‌ಗಳು, ಹೋಟೆಲ್, ಕಂಪನಿಗಳಿಂದ ಅಭೂತಪೂರ್ವ ಸ್ಪಂದನೆ ದೊರೆಯಿತು. ಆದರೆ, ಕಳೆದ ಒಂದೂವರೆ ತಿಂಗಳಿಂದ ನಗರದಲ್ಲಿ ಹೆಚ್ಚು ಮಳೆಯಾಗುತ್ತಿರುವ ಪರಿಣಾಮ ಅಂತರ್ಜಲ ಮಟ್ಟದಲ್ಲಿ ಸಾಕಷ್ಟು ಸುಧಾರಣೆ ಕಂಡು ಬಂದಿದ್ದು, ವೈಯಕ್ತಿಕ ಕೊಳವೆ ಬಾವಿ ಹೊಂದಿರುವ ಮನೆಗಳಿಂದ ನೀರಿನ ಬೇಡಿಕೆ ಕಡಿಮೆಯಾಗಿದೆ. ಆದರೆ, ನಗರದ ಹೊರವಲಯದಲ್ಲಿ ಬೇಡಿಕೆ ಯಥಾಸ್ಥಿತಿ ಇದೆ.

### ನಿತ್ಯ 180 ಲೋಡ್ ನೀರು ಸರಬರಾಜು

**ಸಂಚಾರಿ ಕಾವೇರಿ ಯೋಜನೆಯಿಂದ ಖಾಸಗಿ ಟ್ಯಾಂಕರ್ ದಂಧೆಗೆ ಕಡಿವಾಣ ಬಿದ್ದಿದೆ. ನಗರದ ಹೊರವಲಯದ ಸಾಕಷ್ಟು ಅಪಾರ್ಟ್‌ಮೆಂಟ್‌ಗಳು, ಕಂಪನಿ, ಕೈಗಾರಿಕೆಗಳು ಜಲಮಂಡಳಿಯನ್ನೇ ಈಗ ಅವಲಂಬಿಸಿದ್ದಾರೆ. ಖಾಸಗಿ ಟ್ಯಾಂಕರ್‌ಗಳ ನೀರಿನ ಶುದ್ಧತೆ ಬಗ್ಗೆ ಗ್ರಾಹಕರಿಗೆ ಖಾತ್ರಿ ಇರಲಿಲ್ಲ. ಅನಿವಾರ್ಯವಾಗಿ ಹಾಕಿಸಿಕೊಳ್ಳುತ್ತಿದ್ದರು. ನಾವು ಶುದ್ಧ ಕಾವೇರಿ ನೀರನ್ನೇ ನೀಡುತ್ತಿದ್ದೇವೆ. ಈಗಲೂ ನಿತ್ಯ 150ರಿಂದ 180 ಲೋಡ್ ನೀರು ಸರಬರಾಜು ಆಗುತ್ತಿದೆ ಎನ್ನುತ್ತಾರೆ ಮಂಡಳಿಯ ಅಧಿಕಾರಿಯೊಬ್ಬರು.**

ಯೋಜನೆ ಆರಂಭವಾದಾಗಿನಿಂದ ಸೆ.1ರವರೆಗೆ 14,530 ಲೋಡ್ ನೀರು ಮಾರಾಟವಾಗಿದ್ದು, ಅಂದಾಜು 105 ದಶಲಕ್ಷ ಲೀಟರ್‌ಗೂ ಅಧಿಕ ನೀರು ಮಾರಾಟವಾಗಿದೆ ಎನ್ನುತ್ತವೆ ಜಲಮಂಡಳಿಯ ಮೂಲಗಳು.

**ಜಿಪಿಎಸ್, ಬ್ರ್ಯಾಂಡಿಂಗ್‌ಗೆ 1.84 ಕೋಟಿ ರೂ. ವೆಚ್ಚ:**

### ಪೂರ್ವ ವಲಯದಲ್ಲಿ ಬೇಡಿಕೆ ಹೆಚ್ಚು

**ಪೂರ್ವ ವಲಯದಲ್ಲಿ ಟ್ಯಾಂಕರ್ ನೀರಿಗೆ ಹೆಚ್ಚಿನ ಬೇಡಿಕೆ ಕಂಡು ಬಂದಿದೆ. 1.48 ಕೋಟಿ ರೂ. ಆದಾಯದಲ್ಲಿ 70.57 ಲಕ್ಷ ರೂ. ಪೂರ್ವ ವಲಯದಿಂದಲೇ ಬಂದಿದೆ. ಈ ಭಾಗದಲ್ಲಿ ಕಾವೇರಿ 5ನೇ ಹಂತದ ಯೋಜನೆಯಡಿ ನೀರು ಸಂಪರ್ಕ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ನಾನಾ ಕಾರಣಗಳಿಂದ ಇಲ್ಲಿನ ಮನೆಗಳು, ಅಪಾರ್ಟ್‌ಮೆಂಟ್‌ಗಳು, ಕಂಪನಿ, ಕೈಗಾರಿಕೆಗಳಿಗೆ ನೀರಿನ ಸಂಪರ್ಕ ಪಡೆಯಲು ಸಾಧ್ಯವಾಗಿಲ್ಲ.**

ಯೋಜನೆಯಡಿ ನೀರು ಸರಬರಾಜು ಮಾಡುವ 160 ಟ್ಯಾಂಕರ್‌ಗಳಿಗೆ ಜಿಪಿಎಸ್ ಟ್ರ್ಯಾಕಿಂಗ್ ವ್ಯವಸ್ಥೆ ಮತ್ತು ಬ್ರ್ಯಾಂಡಿಂಗ್ ಕೂಡ ಮಾಡಲಾಗಿದೆ. ಆನ್‌ಲೈನ್ ಬುಕ್ಕಿಂಗ್ ಸೌಲಭ್ಯ ಕಲ್ಪಿಸಿದ್ದು, ಇದಕ್ಕಾಗಿ ಮೊಬೈಲ್ ಆ್ಯಪ್ ರೂಪಿಸಲಾಗಿದೆ. ಒಟ್ಟಾರೆ ಯೋಜನೆಗೆ ತಂತ್ರಜ್ಞಾನ ಅಳಡಿಸಿಕೊಳ್ಳಲು ಮತ್ತು ಇದನ್ನು ಶಾಶ್ವತ ಯೋಜನೆಯಾಗಿಸುವ ಉದ್ದೇಶದಿಂದ ಸುಮಾರು 1.84 ಕೋಟಿ ರೂ. ವೆಚ್ಚ ಮಾಡಲಾಗಿದೆ.

## ಸಿಎಂನವರೇ ಇನ್ನೆಷ್ಟು ದಿನ ಈ ಭಂಡ ಬಾಳು, ರಾಜೀನಾಮೆ ಕೊಟ್ಟು ರಾಜ್ಯ ಉಳಿಸಿ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯನವರೇ ಇನ್ನೆಷ್ಟು ಸಿನ ಈ ಭಂಡ ಬಾಳು, ರಾಜೀನಾಮೆ ಕೊಟ್ಟು ರಾಜ್ಯವನ್ನು ಉಳಿಸಿ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಟೀಕಿಸಿದ್ದಾರೆ.

ಅನುದಾನಕ್ಕಾಗಿ ಸಚಿವ ಚಲುವರಾಯಸ್ವಾಮಿ ಸಿಎಂಗೆ ಮನವಿ ವಿಚಾರದ ಕುರಿತು ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿದ ಅವರು, ರಾಜ್ಯ ಸರ್ಕಾರದ ಕೃಷಿ ಸಚಿವರು, 4ನೇ ಬಾರಿಗೆ ಶಾಸಕರಾಗಿ ಆರಿಸಿ ಬಂದಿರುವವರು ತಮ್ಮ ಕ್ಷೇತ್ರದ ಪರಿಶಿಷ್ಟ ಪಂಗಡಗಳ ಕಾಲೋನಿ ಅಭಿವೃದ್ಧಿಗೆ ಕೇವಲ 2 ಕೋಟಿ ರೂಪಾಯಿ ಅನುದಾನ ಪಡೆಯಲು ಮುಖ್ಯಮಂತ್ರಿಗಳ ಬಳಿ ಅಂಗಲಾಚಬೇಕು ಅಂದರೆ ಕರ್ನಾಟಕ ಸರ್ಕಾರ ಎಷ್ಟು ದಿವಾಳಿ ಆಗಿದೆ ಅನ್ನುವುದನ್ನ ನೀವೇ ಊಹಿಸಿಕೊಳ್ಳಿ ಎಂದು ಲೇವಡಿ ಮಾಡಿದರು.

ಇನ್ನು ಶಾಸಕರಾದ ಬಿ.ಆರ್. ಪಾಟೀಲರು, ರಾಜು ಕಾಗೆ



☛ ಉದಯವಾಹಿನಿ ಚಿತ್ರ

ಅವರು ಸೇರಿದಂತೆ ಅನೇಕ ಶಾಸಕರು ಅನುದಾನವಿಲ್ಲದೆ ತಮ್ಮ ಕ್ಷೇತ್ರಗಳಲ್ಲಿ ತಲೆ ಎತ್ತಿಕೊಂಡು ಓಡಾಡಲೂ ಆಗುತ್ತಿಲ್ಲ ಅಂತಾರೆ. ಈ ಬಗ್ಗೆ ಸೂಪರ್ ಸಿಎಂ ಸುರ್ಜೆವಾಲಾ ಅವರಿಗೆ ದೂರು ಕೊಟ್ಟಿರುವುದನ್ನ ಮಾಧ್ಯಮಗಳು ಬಿತ್ತರಿಸಿವೆ. ಇನ್ನೆಷ್ಟು ದಿನ ಸಿಎಂ ಸಿದ್ದರಾಮಯ್ಯನವರೇ ಈ ಭಂಡ ಬಾಳು. ರಾಜೀನಾಮೆ ಕೊಟ್ಟು ರಾಜ್ಯವನ್ನು ಉಳಿಸಿ ಎಂದು ಬರೆದುಕೊಂಡಿದ್ದಾರೆ.

### ಎಕ್ಸ್‌ನಲ್ಲಿ ಏನಿದೆ?

**ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಅವರು ಅನುದಾನಕ್ಕಾಗಿ ಮುಖ್ಯಮಂತ್ರಿಗಳ ಕಾಲಿಗೆ ಬೀಳಬೇಕು' ಎನ್ನುತ್ತಾರೆ. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರಾದ ಬಸವರಾಜ ರಾಯರೆಡ್ಡಿ ಅವರು 'ನಿಮಗೆ ರಸ್ತೆ ಬೇಕಾದ್ರೆ ಗ್ಯಾರಂಟಿ ಯೋಜನೆ ಬಂದ್ ಮಾಡ್ತೀವಿ ಎನ್ನುತ್ತಾರೆ. ಶಾಸಕ ಗವಿಯಪ್ಪನವರಂತೂ ಪಾಪ ಒಂದು ಹೆಜ್ಜೆ ಮುಂದೆ ಹೋಗಿ 'ಇದೇ ರೀತಿ ಮುಂದುವರಿದರೆ ಮುಂದಿನ ದಿನಗಳಲ್ಲಿ ವಿಧಾನಸೌಧದ ಮುಂದೆ ಆತ್ಮಹತ್ಯೆ ಮಾಡಿಕೊಳ್ಳಬೇಕಾಗುತ್ತದೆ' ಎಂದು ತಮ್ಮ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.**

## ಕ್ಯಾಂಟೀನ್‌ಗೆ ಜಿಲ್ಲಾಧಿಕಾರಿ ದಿಢೀರ್ ಭೇಟಿ: ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ನಗರ ಜಿಲ್ಲೆಯ ಜಿಲ್ಲಾಧಿಕಾರಿ ಜಿ.ಜಗದೀಶ್ ಅವರು ಡಿಸಿ ಕ್ಯಾಂಟೀನ್‌ಗೆ ದಿಢೀರ್ ಭೇಟಿ ನೀಡಿ ಆಹಾರ ತಯಾರಿಕೆ ಮತ್ತು ಗ್ರಾಹಕರಿಗೆ ಸುರಕ್ಷಿತ ಆಹಾರ ಪೂರೈಕೆ ಕುರಿತು ಪರಿಶೀಲನೆ ನಡೆಸಿದರು. ಗ್ರಾಹಕರನ್ನು ಮಾತನಾಡಿಸಿದ ಜಿಲ್ಲಾಧಿಕಾರಿ, ಕ್ಯಾಂಟೀನ್‌ನಿಂದ ವಿತರಿಸಿದ ತಿಂಡಿಗಳ ಗುಣಮಟ್ಟದ ಬಗ್ಗೆ ಹಾಗೂ ಆಹಾರಕ್ಕೆ ಮಾಲೀಕರು ನಿಗದಿಪಡಿಸಿರುವ ದರಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಕೆಲವು ಗ್ರಾಹಕರು ಆಹಾರ ದರ ಪಟ್ಟಿಯ ಸೂಚನಾ ಫಲಕಅಳವಡಿಸದಿರುವ ಬಗ್ಗೆ ಗಮನ ಸೆಳೆದರೆ, ಮತ್ತೆ ಕೆಲವರು ಆಹಾರದ ಅಳತೆ ಪ್ರಮಾಣ ಕಡಿಮೆ ಎಂದು ದೂರಿದರು. ಈ ಕುರಿತು ಇಲಾಖೆ ಗಮನಹರಿಸಲಿದೆ ಎಂದು ಜಿಲ್ಲಾಧಿಕಾರಿ ಗ್ರಾಹಕರಿಗೆ ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಜಗದೀಶ್ ನಾಯಕ್, ತಹಶೀಲ್ದಾರ್ ಪ್ರಶಾಂತ್ ಖಾನಗೌಡ ಪಾಟೀಲ್ ಹಾಜರಿದ್ದರು.

## ಡಿಕೆಶಿ ನಿವಾಸದಲ್ಲಿ ನಾಗರಹಾವಿನ ಮರಿ!

• ಉದಯವಾಹಿನಿ, ಬೆಂಗಳೂರು

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧಿಕೃತ ನಿವಾಸದಲ್ಲಿ ಮಧ್ಯಾಹ್ನ ನಾಗರಹಾವಿನ ಮರಿ ಪತ್ತೆಯಾಗಿದೆ.

ಸುಮಾರು ಒಂದೂವರೆ ಅಡಿ ಉದ್ದದ ಹಾವಿನ ಮರಿಯನ್ನು ಕಂಡು ಗಾಬರಿಗೊಂಡ ಸಿಬ್ಬಂದಿ, ಕೂಡಲೇ ವನ್ಯಜೀವಿ ತಜ್ಞ ಪ್ರಸನ್ನ ಕುಮಾರ್ ಅವರಿಗೆ ಮಾಹಿತಿ ನೀಡಿದ್ದರು. ಕೂಡಲೇ ಸ್ಥಳಕ್ಕೆ ಬಂದ ಅವರು ಅದನ್ನು ರಕ್ಷಣೆ ಮಾಡಿದ್ದಾರೆ. ಈ ವೇಳೆ ಡಿ.ಕೆ. ಶಿವಕುಮಾರ್ ಅವರು ನಿವಾಸದಲ್ಲಿ ಇರಲಿಲ್ಲ. ಅದೃಷ್ಟವಶಾತ್ ಯಾರಿಗೂ, ಯಾವುದೇ ರೀತಿಯ ಅಪಾಯ ಸಂಭವಿಸಿಲ್ಲ. ಮಾತನಾಡಿದ ಪ್ರಸನ್ನ ಕುಮಾರ್, 2 ತಿಂಗಳ ಹಿಂದೆಯೂ ಇಲ್ಲಿ ಬೇರೊಂದು ಹಾವು ಪತ್ತೆಯಾಗಿತ್ತು ಎಂದಿದ್ದಾರೆ.

ಮಾನವ ವನ್ಯಜೀವಿ ಸಂಘರ್ಷದ ವಿಚಾರದಲ್ಲಿ





☛ ಉದಯವಾಹಿನಿ ಚಿತ್ರ


ಜನರು ಹೆಚ್ಚಾಗಿ ಸಾವಿಗೀಡಾಗುತ್ತಿರುವುದು ಹಾವುಗಳ ಕಡಿತದಿಂದಲೇ. ಅಧಿಕೃತ ಮಾಹಿತಿ ಪ್ರಕಾರ, 2024ರಿಂದ ಈಚೆಗೆ ರಾಜ್ಯದಲ್ಲಿ ಸುಮಾರು 13,000ಕ್ಕೂ ಅಧಿಕ ಹಾವು ಕಡಿತ ಪ್ರಕರಣಗಳು ವರದಿಯಾಗಿವೆ. ಇದರಲ್ಲಿ, 100ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಅಂಗಾಂಗ ವೈಫಲ್ಯ ಸಮಸ್ಯೆಯೂ ಕಾಡುತ್ತಿದೆ' ಎಂದು ಹೇಳಿದ್ದಾರೆ.

## ಬೆಂಗಳೂರಿನಲ್ಲಿ ಸೆ. 6ರಂದು ಸಂಜೆ ಭಾರೀ ಮಳೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಸಂಜೆ ಸುರಿದ ಭಾರೀ ಮಳೆಯಿಂದಾಗಿ ನಗರದೆಲ್ಲೆಡೆ ಜನಜೀವನ ಅಸ್ತವ್ಯಸ್ತವಾಗಿದೆ. ಹಲವಾರು ಕಡೆ ರಸ್ತೆಗಳಲ್ಲಿ ಮಳೆ ನೀರು ನಿಂತು ಕೆರೆಗಳಂತಾಗಿದ್ದು ವಾಹನಗ ಸಂಚಾರವೇ ದುಸ್ತರವಾಗಿದೆ. ಬೆಂಗಳೂರು ಟ್ರಾಫಿಕ್ ಪೊಲೀಸರು ವಾಹನಗಳ ಸುಗಮ ಸಂಚಾರಕ್ಕೆ ಹರಸಾಹಸ ಪಡುವಂತಾಯಿತು. ಬೆಂಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ ಕ್ಷೇತ್ರಗಳಲ್ಲಿ ಹಲವಾರು ಪ್ರಾಂತ್ಯಗಳಲ್ಲಿ ಸುರಿದ ಮಳೆಯಿಂದಾಗಿ ರಸ್ತೆಯಲ್ಲಿನ ವಾಹನಗಳು ಮಾತ್ರವಲ್ಲ ನಡೆದಾಡುವ ಜನರೂ ಸಹ ರಸ್ತೆ ದಾಟಲು ಪರದಾಡುವಂತಾಯಿತು.

ಬೆಂಗಳೂರು ದಕ್ಷಿಣದಲ್ಲಿ ಬಹುಮುಖ್ಯವಾಗಿ ವಿಜಯನಗರ, ರಾಜಾಜಿನಗರ, ಚಂದ್ರಾ ಲೇಔಟ್, ನಾಗರಭಾವಿ, ಕೆಂಗೇರಿ ಉಪನಗರ, ಮೈಸೂರು ರಸ್ತೆ, ರಾಜರಾಜೇಶ್ವರಿ ನಗರ ಮುಂತಾದ ಕಡೆಗಳಲ್ಲಿ ಭಾರೀ ಟ್ರಾಫಿಕ್ ಜಾಮ್ ಉಂಟಾಗಿತ್ತು. ಶನಿವಾರವಾಗಿದ್ದರಿಂದ



☛ ಉದಯವಾಹಿನಿ ಚಿತ್ರ

ರಸ್ತೆಯಲ್ಲಿ ವಾಹನಗಳ ಸಂಖ್ಯೆ ಕಡಿಮೆಯೇನೋ ಇತ್ತು, ಆದರೆ, ಮಳೆಯಿಂದಾಗಿ ವಾಹನಗಳ ಸಂಚಾರ ಮಂದಗತಿಯಲ್ಲಿ ಸಾಗುತ್ತಿದ್ದರಿಂದ ಟ್ರಾಫಿಕ್ ಜಾಮ್ ಸೃಷ್ಟಿಯಾಯಿತು.

**ಟ್ರಾಫಿಕ್ ಪೊಲೀಸರಿಂದ ಎಚ್ಚರಿಕೆ:** ಮಳೆ ಶುರುವಾಗುತ್ತಲೇ ನಗರದ ಹಲವಾರು ಕಡೆಗಳಲ್ಲಿ ಸಂಭವಿಸಿದ ಟ್ರಾಫಿಕ್ ಜಾಮ್ ಮುಂತಾದ ಮಳೆ ಸಂಬಂಧಿತ ಸಮಸ್ಯೆಗಳ ಬಗ್ಗೆ ಬೆಂಗಳೂರು ಟ್ರಾಫಿಕ್ ಪೊಲೀಸರು ತಮ್ಮ ಎಕ್ಸ್ ಸಾಮಾಜಿಕ ಜಾಲತಾಣದ ಖಾತೆಯ ಮೂಲಕ ಮಾಹಿತಿ ನೀಡಿದರು. ಯಾವ ಕಡೆ ಟ್ರಾಫಿಕ್ ಜಾಮ್ ಆಗಿದೆ, ಇತರ ವಾಹನಗಳು ಯಾವ ಕಡೆಗೆ ಹೋಗಬಹುದು ಇತ್ಯಾದಿ ಮಾಹಿತಿಗಳನ್ನು ಹಂಚಿಕೊಂಡರು. ವಿಲ್ಸನ್ ಗಾರ್ಡನ್ 8ನೇ ಮುಖ್ಯ ರಸ್ತೆಯ ಬಳಿ ವಾಹನ ಕೆಟ್ಟು ನಿಂತಿರುವುದರಿಂದ ಶಾಂತಿನಗರ ಬಸ್ ನಿಲ್ದಾಣದ ಕಡೆಗೆ ನಿಧಾನಗತಿಯ ಸಂಚಾರವಿರುತ್ತದೆ ಎಂದು ತಿಳಿಸಿದ ಪೊಲೀಸರು, ಗೋವಿಂದ ಶೆಟ್ಟಿ ಪಾಳ್ಯ ಸರ್ವಿಸ್ ರಸ್ತೆ ಬಳಿ ವಾಹನ ಕೆಟ್ಟು ನಿಂತಿರುವುದರಿಂದ ಹೊಸೂರು ರಸ್ತೆಯ ಕಡೆಗೆ ನಿಧಾನಗತಿಯ ಸಂಚಾರವಿರುತ್ತದೆ ಎಂದು ಕೆಟ್ಟು ಹೋದ ವಾಹನದ ಫೋಟೋ ಸಮೇತ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ನೀಡಿದರು. ಅಲ್ಲದೆ, ಗೊರಗುಂಟೆಪಾಳ್ಯದಿಂದ ನಗರದ ಕಡೆಗೆ ಹೋಗುವಾಗ ವಾಹನಗಳ ದಟ್ಟಣೆ ಇರುವ ಸಮಯ(ಪೀಕ್ ಅವರ್ಸ್) ಇರುವುದರಿಂದ ತೀವ್ರ ವಾಹನ ದಟ್ಟಣೆ ಉಂಟಾಗಿದೆ ಎಂದು ಸೂಚಿಸಿದರು.

# ಇವಿಎಂ ವಿಶ್ವಾಸಾರ್ಹತೆ ಕಳೆದುಕೊಂಡಿದೆ, ಅದಕ್ಕಾಗಿ ಬ್ಯಾಲೆಟ್ ಪೇಪರ್ ಜಾರಿ

**ಇವಿಎಂ ಬಗ್ಗೆ ಕರ್ನಾಟಕ ಮಾತ್ರವಲ್ಲ ದೇಶದ ಅನೇಕ ರಾಜ್ಯಗಳು ಇವಿಎಂ ಅಕ್ರಮ ಆಗುತ್ತಿದೆ ಎಂದು ಅನುಮಾನ ಇದೆ**

• ಉದಯವಾಹಿನಿ, ಬೆಂಗಳೂರು

ಇವಿಎಂ ತನ್ನ ವಿಶ್ವಾಸಾರ್ಹತೆ ಕಳೆದುಕೊಂಡಿದೆ. ಹೀಗಾಗಿ ರಾಜ್ಯ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆಗೆ ನಿರ್ಧಾರ ಮಾಡಿದೆ ಎಂದು ಕಾನೂನು ಸಚಿವ ಹೆಚ್.ಕೆ ಪಾಟೀಲ್ ಬ್ಯಾಲೆಟ್ ಪೇಪರ್ ನಿರ್ಧಾರ ಸಮರ್ಥನೆ ಮಾಡಿಕೊಂಡಿದ್ದಾರೆ.

ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆಗೆ ಕ್ಯಾಬಿನೆಟ್ ನಿರ್ಧಾರ ವಿಚಾರಕ್ಕೆ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಇವಿಎಂ ಬಗ್ಗೆ ಕರ್ನಾಟಕ ಮಾತ್ರವಲ್ಲ ದೇಶದ ಅನೇಕ ರಾಜ್ಯಗಳು ಇವಿಎಂ ಅಕ್ರಮ ಆಗುತ್ತಿದೆ ಎಂದು ಅನುಮಾನ ಇದೆ. ಹ್ಯಾಕ್ ಮಾಡುತ್ತಾರೆ ಎಂಬುದರ ಬಗ್ಗೆ ಅನುಮಾನ ಇದೆ. ಮಹಾರಾಷ್ಟ್ರ ಚುನಾವಣೆಯಲ್ಲಿ ಕೊನೆಯ 1 ಗಂಟೆಯಲ್ಲಿ 5 ಗಂಟೆಯಷ್ಟು ಹಾಕಲಾಗದ ಮತ ಹಾಕುವ ವ್ಯವಸ್ಥೆ ಕೊನೆ ಘಳಿಗೆಯಲ್ಲಿ ಆಗಿದೆ. ಇವಿಎಂ ತಮ್ಮ ವಿಶ್ವಾಸಾರ್ಹತೆ ಕಳೆದುಕೊಂಡಿದೆ.

### ಚುನಾವಣೆ ಆಯೋಗದ ವಿರುದ್ಧ ಕಿಡಿ

2018ರಲ್ಲಿ ನಮ್ಮ ವಿಧಾನಸಭೆಯಲ್ಲಿ ಸರ್ವಾನುಮತದ ನಿರ್ಣಯ ಇವಿಎಂ ವಿರುದ್ಧ ಮಾಡಿತ್ತು. ಅವತ್ತು ನಾನು ಬಳಿಕ ಮಾಹಿತಿ ಪುರಾವೆ ಸಲ್ಲಿಕೆ ಮಾಡಿದ್ದೇನೆ.

ಅಂದಿನ ಸಭಾಪತಿಗಳಾಗಿದ್ದವರು ಕಾಗೇರಿ ಅವರು. ಚರ್ಚೆ ಆದ ಮೇಲೆ ಚುನಾವಣೆ ಆಯೋಗಕ್ಕೆ ಸ್ಪೀಕರ್ ಕಾಗೇರಿ ಪತ್ರ



☛ ಉದಯವಾಹಿನಿ ಚಿತ್ರ

ಬರೆದರು. ಆಗ ಚುನಾವಣೆ ಆಯೋಗ ನಮ್ಮ ಬಗ್ಗೆ ಸದನದಲ್ಲಿ ಚರ್ಚೆ ಮಾಡಬಾರದು ಅಂತ ವಾಪಸ್ ಬರೆದರು. ಆದರೆ ಇವಿಎಂ ಅನುಮಾನದ ಬಗ್ಗೆ ಆಯೋಗ ವಿವರಣೆ ಕೊಡಲಿಲ್ಲ. ಪ್ರಜಾಪ್ರಭುತ್ವದಲ್ಲಿ ಒಂದು ಸಂಸ್ಥೆಯಲ್ಲಿ ಆ ಕಾರ್ಯದಲ್ಲಿ ಅನುಮಾನ ಬಂದಾಗ ಪಾರದರ್ಶಕವಾಗಿ ಪರಿಹಾರ ಮಾಡಬೇಕು. ಆದರೆ ನಮಗೆ ರಕ್ಷಣೆ ಇದೆ ಅಂತ ಆಯೋಗ ಮಾತಾಡೋದು ಸರಿಯಲ್ಲ ಎಂದು ಚುನಾವಣೆ ಆಯೋಗದ ವಿರುದ್ಧ ಕಿಡಿಕಾರಿದರು.

ಇವಿಎಂ ಪರಿಣಾಮದ ಬಗ್ಗೆ ಹಿಂದೆಯೇ ಹೇಳಿದ್ದೆವು. ಕರ್ನಾಟಕದಲ್ಲಿ ಇವಿಎಂ ಬಗ್ಗೆ ಅನುಮಾನ ಇದೆ. ಹೀಗಾಗಿ ನಮ್ಮ ಸರ್ಕಾರಕ್ಕೆ ಇರುವ ಅಧಿಕಾರದಲ್ಲಿ ಬ್ಯಾಲೆಟ್ ಪೇಪರ್ ಚುನಾವಣೆ ಆಗೋ ನಿರ್ಧಾರ ಮಾಡಿದ್ದೇವೆ. ಚುನಾವಣೆ ಆಯೋಗದ ಮ್ಯಾನುಯಲ್‌ನಲ್ಲಿ 15 ವರ್ಷ ಆದ ಮೇಲೆ ಇವಿಎಂ ನಿರ್ನಾಮ ಮಾಡಬೇಕು. ಹೇಗೆ ಮಾಡಬೇಕು ಅಂತ ಪದ್ದತಿ ಇದೆ. ಆದರೆ ಆಯೋಗ ಇದನ್ನ ಲೆಕ್ಕಕ್ಕೆ ತೆಗೆದುಕೊಂಡಿಲ್ಲ. ಅನೇಕ ರಾಜ್ಯದಲ್ಲಿ ಟ್ರಕ್ ಗಟ್ಟಲೆ ಇವಿಎಂ ಹೋಗೋದು ನೋಡಿದ್ದೇವೆ. ಅನೇಕ ಪ್ರದೇಶದಲ್ಲಿ ಇವಿಎಂ ಮಿಷನ್ ಬಿದ್ದಿರೋದು ನೋಡಿದ್ದೇವೆ. ಚುನಾವಣೆ ಆಯೋಗ ನಿಯಮ ಗಾಳಿಗೆ ತೂರಿ ಕೆಲಸ ಮಾಡುತ್ತಿದೆ. ಚುನಾವಣೆ ಆಯೋಗ ವಿಶ್ವಾಸಾರ್ಹತೆ ಕಳೆದುಕೊಂಡಿದೆ.

ಹೀಗಾಗಿ ಅನುಮಾನ ಹೋಗಲಾಡಿಸಲು ಬ್ಯಾಲೆಟ್ ಪೇಪರ್‌ನಲ್ಲಿ ಚುನಾವಣೆ ಮಾಡಲು ಸರ್ಕಾರ ನಿರ್ಧಾರ ಮಾಡಿದೆ. ಕ್ಯಾಬಿನೆಟ್‌ನಲ್ಲಿ ನಿರ್ಣಯ ಮಾಡಿದೆ ಎಂದರು.

**ಮಹಾರಾಷ್ಟ್ರ ಚುನಾವಣೆಯಲ್ಲಿ ಕೊನೆ ಘಳಿಗೆಯಲ್ಲಿ ಅಕ್ರಮದ ವೋಟಿಂಗ್ ಆಯಿತು. ಇಂತಹ ಅಕ್ರಮ 10% ಕೂಡಾ ಹಿಂದಿನ ಬ್ಯಾಲೆಟ್ ಪೇಪರ್ ವ್ಯವಸ್ಥೆ ಇದ್ದಾಗ ಆಗಿರಲಿಲ್ಲ. ಬ್ಯಾಲೆಟ್ ಪೇಪರ್ ತರಲು ಕಾನೂನು ತಿದ್ದುಪಡಿ ಮಾಡುತ್ತೇನೆ. ರಾಜ್ಯಪಾಲರು ಕಾನೂನಿನ ಪರ ಇರಬೇಕು, ಸಂವಿಧಾನದ ಪರ ಇರಬೇಕು. ಸಂವಿಧಾನ ಪರ ಮಾಡೋ ಕೆಲಸ ಯಾರು ತಡೆಯೋಕೆ ಆಗಲ್ಲ. ರಾಜ್ಯಪಾಲ ಬಿಲ್ ಪಾಸ್ ಮಾಡಬೇಕಾಗುತ್ತದೆ ಎಂದು ಒತ್ತಾಯಿಸಿದರು.**

**ಬಸವರಾಜ್ ಬೊಮ್ಮಾಯಿ ಅವರ ಮೇಲೆ ವಿಶೇಷ ಅಭಿಪ್ರಾಯ ಇದೆ. ಅವರ ಜೊತೆ ಚುನಾವಣೆ ರಿಫಾರ್ಮ್ಸ್ ಬಗ್ಗೆ ಚರ್ಚೆ ಮಾಡಿದ್ದೇವೆ. ಕರ್ನಾಟಕದಲ್ಲಿ ಹ್ಯಾಕಥಾನ್ ಮಾಡಿ ಅಂತ ಚುನಾವಣೆ ಆಯೋಗಕ್ಕೆ ಹೇಳಿದ್ದೆವು. ಆದರೆ ಆಯೋಗ ಮಾಡಲಿಲ್ಲ. ಚುನಾವಣೆ ಆಯೋಗ ಯಾವುದೇ ಪರೀಕ್ಷೆಗೆ ಒಪ್ಪಲಿಲ್ಲ. ಬಿಜೆಪಿ ರಾಜಕೀಯವಾಗಿ ಈಗ ಹೇಳುತ್ತಿದೆ. ಅಧಿವೇಶನದಲ್ಲಿ ಸರ್ವಾನುಮತದಿಂದ ಇದರ ಬಗ್ಗೆ ನಿರ್ಣಯ ಆಗಿದೆ ಎಂದು ತಿಳಿಸಿದರು.**

ಬ್ಯಾಲೆಟ್ ಪೇಪರ್ ಜಾರಿ ಮಾಡಲು ಅಗತ್ಯ ಇರೋ ಕಾನೂನು ತಿದ್ದುಪಡಿ ಬೇಕಾದರೆ ಮಾಡುತ್ತೇವೆ. ನಿಯಮ ಬದಲಾವಣೆ ಇದ್ದರೆ ನಿಯಮ ಬದಲಾವಣೆ ಮಾಡುತ್ತೇವೆ ಎಂದು ತಿಳಿಸಿದರು.

ಇವಿಎಂ ಮೇಲೆ ಅನುಮಾನ ಇದ್ದರೆ ಕರ್ನಾಟಕದಲ್ಲಿ ಸರ್ಕಾರ ವಿಸರ್ಜನೆ ಮಾಡಿ ಚುನಾವಣೆ ಎದುರಿಸಲಿ ಎಂಬ ಬಿಜೆಪಿ ಆಗ್ರಹಕ್ಕೆ ತಿರುಗೇಟು ಕೊಟ್ಟ ಅವರು, ಎಂಪಿ, ವಿಧಾನಸಭೆ ಚುನಾವಣೆ ಬ್ಯಾಲೆಟ್ ಪೇಪರ್ ಮಾಡೋಣ ಅಂತ ಬಿಜೆಪಿ ಹೇಳಲಿ. ಕೇಂದ್ರ ಸರ್ಕಾರ ಬ್ಯಾಲೆಟ್ ಪೇಪರ್ ವ್ಯವಸ್ಥೆ ಘೋಷಣೆ ಮಾಡಲಿ. ಆಮೇಲೆ ಕರ್ನಾಟಕದಲ್ಲಿ ನಾವು ಚುನಾವಣೆ ಮತ್ತೆ ಎದುರಿಸುತ್ತೇವೆ ಎಂದು ತಿರುಗೇಟು ಕೊಟ್ಟರು.

ಅಂತರಾಳದಿಂದ..
EDITORIAL

# ಜಾಮೀನಿನ ನಿರಂತರ ನಿರಾಕರಣೆ: ನ್ಯಾಯದಾನದ ತತ್ತ್ವಕ್ಕೆ ವಿರುದ್ಧ



ವಿದ್ಯಾರ್ಥಿ ಕಾರ್ಯಕರ್ತ ಉಮರ್ ಖಾಲಿದ್ ಸೇರಿದಂತೆ ಒಟ್ಟು ಒಂಬತ್ತು ಮಂದಿಗೆ ದೆಹಲಿ ಹೈಕೋರ್ಟ್ ಜಾಮೀನು ನಿರಾಕರಣೆ ಮಾಡಿರುವುದು ನ್ಯಾಯದಾನದ ವಿಚಾರವಾಗಿ, ಕಾನೂನಿನ ಪ್ರಕ್ರಿಯೆಗಳ ಪಾಲನೆಯ ವಿಚಾರವಾಗಿ, ವೈಯಕ್ತಿಕ ಸ್ವಾತಂತ್ರ್ಯದ ಮಿತಿಗಳು ಹಾಗೂ ನಾಗರಿಕರ ಹಕ್ಕುಗಳನ್ನು ರಕ್ಷಿಸಲು ಸರ್ಕಾರಗಳು ಹೊಂದಿರುವ ಬದ್ಧತೆಯ ವಿಚಾರವಾಗಿ ಹಲವು ಕಹಿ ಪ್ರಶ್ನೆಗಳನ್ನು ಮೂಡಿಸುವಂತಿದೆ.

**ಸುಪ್ರೀಂ ಕೋರ್ಟ್ ಕೂಡ ಅವರ ಅರ್ಜಿಯನ್ನು ಮತ್ತೆ ಮತ್ತೆ ಮುಂದಕ್ಕೆ ಹಾಕಿದೆ. ಆರೋಪಿಗಳಿಗೆ ಜಾಮೀನು ನಿರಾಕರಿಸಿರುವುದಕ್ಕೆ ಕಾರಣ ಏನು ಎಂಬುದಕ್ಕೆ ಕೋರ್ಟ್ ತೃಪ್ತಿಕರ ವಿವರಣೆ ನೀಡಿಲ್ಲ. ಜಾಮೀನು ನಿರಾಕರಣೆಯು ನ್ಯಾಯದ ಮೂಲತತ್ತ್ವವಾದ ಅಪರಾಧಿ ಎಂದು ಸಾಬೀತಾಗುವವರೆಗೂ ಆರೋಪಿಯು ಅಮಾಯಕ ಎಂದೇ ಪರಿಗಣಿತನಾಗಿರುತ್ತಾನೆ ಎಂಬುದಕ್ಕೆ ಅನುಗುಣವಾಗಿ ಇಲ್ಲ. ಜಾಮೀನು ನೀಡಬೇಕಿರುವುದು ಸಹಜ, ಜಾಮೀನು ನಿರಾಕರಣೆಯು ಅಪವಾದ ಎಂಬ ಒಪ್ಪಿತ ನಿಯಮಕ್ಕೂ ಇದು ಅನುಗುಣವಾಗಿಲ್ಲ. ಜಾಮೀನು ಅರ್ಜಿ ವಿಚಾರಣೆಯ ಸಂದರ್ಭದಲ್ಲಿ ಆರೋಪಗಳ ಪೂರ್ಣ ವಿವರಗಳ ಬಗ್ಗೆ ಪರಿಶೀಲನೆ ನಡೆಸುವ ಅಗತ್ಯ ಇರಲಿಲ್ಲವಾದರೂ, ಕೋರ್ಟ್ ಆ ಕೆಲಸ ಮಾಡಿದೆ.**

ಈ ಒಂಬತ್ತು ಮಂದಿಯು 2020ರ ದೆಹಲಿ ಗಲಭೆಗಳಿಗೆ ಸಂಬಂಧಿಸಿದಂತೆ ಅಕ್ರಮ ಚಟುವಟಿಕೆಗಳ (ತಡೆ) ಕಾಯ್ದೆಯ (ಯುಎಪಿಎ) ಅಡಿಯಲ್ಲಿ ಆರೋಪಿಗಳಾಗಿದ್ದಾರೆ. ಜಾಮೀನು ನಿರಾಕರಣೆಯ ಕ್ರಮವು ಆರೋಪಿ ಸ್ಥಾನದಲ್ಲಿ ಇರುವ ಪ್ರಜೆಗಳನ್ನು ನಿರಾಸೆಗೆ ನೂಕಿದೆ. ಪ್ರಭುತ್ವವು ತನ್ನ ಬಲವನ್ನು ಅತಿಯಾಗಿ ಬಳಕೆ ಮಾಡಿ, ಪ್ರಜೆಗಳ ಸಾಂವಿಧಾನಿಕ ಹಕ್ಕುಗಳಿಗೆ ಬೆದರಿಕೆ ಒಡ್ಡಿದಾಗಲೂ ತಾನು ಪ್ರಭುತ್ವದ ಜೊತೆ ಇರುವೆ ಎಂಬ ಸೂಚನೆಯನ್ನು ಈ ಕ್ರಮದ ಮೂಲಕ ಕೋರ್ಟ್ ನೀಡಿರುವಂತಿದೆ. ಉಮರ್ ಖಾಲಿದ್ ಅವರು ಐದು ವರ್ಷಗಳಿಂದ ಜೈಲಿನಲ್ಲಿದ್ದಾರೆ. ಅವರ ವಿರುದ್ಧ ವಿಚಾರಣೆಯು ಶುರುವಾಗುವ ಲಕ್ಷಣ ಕೂಡ ಕಾಣುತ್ತಿಲ್ಲ. ಕೆಳಹಂತದ ನ್ಯಾಯಾಲಯವು ಉಮರ್ ಅವರ ಜಾಮೀನು ಅರ್ಜಿಯನ್ನು 3 ಬಾರಿ ನಿರಾಕರಿಸಿದೆ. ಈ ಮೂಲಕ ಅದು ಪ್ರಾಸಿಕ್ಯೂಷನ್ ನೀಡಿರುವ ಬಿಡಿ ಬಿಡಿ ಸಾಕ್ಷ್ಯಗಳಿಗೆ ಹೆಚ್ಚಿನ ಮಾನ್ಯತೆ ನೀಡಿದಂತಿದೆ. ವಾಟ್ಸ್ಆ್ಯಪ್ ಮೂಲಕ ನಡೆಸಿದ ಚಾಟ್‌ಗಳನ್ನು, ರಕ್ಷಣೆ ಇರುವ ಹಾಗೂ ಅನಾಮಿಕ ಸಾಕ್ಷಿಗಳು ನೀಡಿರುವ ಹೇಳಿಕೆಗಳನ್ನು ಆಧಾರವಾಗಿ ಪರಿಗಣಿಸಲಾಗಿದೆ. ಆರೋಪಿಗಳು 'ದೆಹಲಿಯು ಹೊತ್ತಿ ಉರಿಯುವಂತೆ' ಮಾಡಲು ಸಂಚು ರೂಪಿಸಿದ್ದರು ಎಂದು ಈ ಸಾಕ್ಷಿಗಳು ಹೇಳಿವೆ. ಸರ್ಕಾರವು ಮುಸ್ಲಿಂ ವಿರೋಧಿಯಾಗಿದೆ, ಪೌರತ್ವ ತಿದ್ದುಪಡಿ ಕಾಯ್ದೆಯು (ಸಿಎಎ) ಮುಸ್ಲಿಮರನ್ನು ಗುರಿಯಾಗಿಸಿಕೊಂಡಿದೆ ಎಂದು ಆರೋಪಿಗಳ ಪೈಕಿ ಒಬ್ಬರು ಹೇಳಿದ್ದುದೇ ಅವರನ್ನು ಆರೋಪಿಯನ್ನಾಗಿಸಲು ಕಾರಣವಾಗಿದೆ. ಇನ್ನೊಬ್ಬ ಆರೋಪಿಯು, ಸಿಎಎ ವಿರುದ್ಧ ಪ್ರತಿಭಟನೆ ನಡೆಸಲು ಮಹಿಳೆಯರನ್ನು ಒಂದುಗೂಡಿಸಬೇಕು ಎಂದು ಕರೆ ನೀಡಿದ್ದುದು ಪಿತೂರಿಯ ಭಾಗ ಎಂದು ಪರಿಗಣಿತವಾಗಿದೆ. ಸರ್ಕಾರದ ವಿರುದ್ಧ ಭಿನ್ನಾಭಿಪ್ರಾಯ ವ್ಯಕ್ತಪಡಿಸುವುದನ್ನು ಪ್ರಾಸಿಕ್ಯೂಷನ್, ದೇಶದ ವಿರುದ್ಧ ಎಸಗುವ ಕೃತ್ಯ ಎಂಬುದಾಗಿ ಪರಿಗಣಿಸಿರುವಂತಿದೆ. ಈ ವಾದವನ್ನು ಕೋರ್ಟ್ ಕೂಡ ಒಪ್ಪಿಕೊಂಡಿರುವಂತೆ ಕಾಣುತ್ತಿದೆ.


ಯುಎಪಿಎ ಕಾನೂನು ಸರ್ಕಾರಗಳ ಬಳಿ ಇರುವ ಬಲವಾದ ಅಸ್ತ್ರ. ಅದರಲ್ಲೂ, ಸರ್ಕಾರಗಳಿಗೆ ಸರಿಕಾಣದ ವ್ಯಕ್ತಿಗಳನ್ನು ಗುರಿಯಾಗಿಸಿಕೊಂಡು, ಸರ್ಕಾರದ ಟೀಕಾಕಾರರನ್ನು ಗುರಿಯಾಗಿಸಿಕೊಂಡು ಈ ಅಸ್ತ್ರವನ್ನು ಬಳಸಲಾಗುತ್ತದೆ. ಕಾನೂನಿನ ಆಚೆಗೂ ನ್ಯಾಯವನ್ನು ಗುರುತಿಸುವ ಹೊಣೆಯು ನ್ಯಾಯಾಲಯಗಳ ಮೇಲೆ ಇರುತ್ತದೆ. ಈ ಪ್ರಕರಣದಲ್ಲಿ ಈ ಕೆಲಸವನ್ನು ಕೋರ್ಟ್ ಮಾಡಿಲ್ಲ. ಆರೋಪಿಗಳ ಕೃತ್ಯವು ದೇಶದ ವಿರುದ್ಧದ ಪಿತೂರಿಯಾಗಿತ್ತು ಎಂದು ಪ್ರಾಸಿಕ್ಯೂಷನ್ ನೀಡಿದ ವ್ಯಾಖ್ಯಾನವನ್ನು ಆಧರಿಸಿ ಕೋರ್ಟ್ ನಿರ್ಣಯ ನೀಡಿರುವಂತಿದೆ. ಅವಸರದ ವಿಚಾರಣೆಯು ಆರೋಪಿಗಳ ಹಿತಾಸಕ್ತಿಗೆ ವಿರುದ್ಧ ಎಂಬುದನ್ನು ಒಪ್ಪಿಕೊಂಡಿರುವ ಕೋರ್ಟ್, ವಿಚಾರಣೆ ಇಲ್ಲದೆಯೇ ವ್ಯಕ್ತಿಗಳನ್ನು ಜೈಲಿನಲ್ಲಿ ವರ್ಷಗಳವರೆಗೆ ಇರಿಸಿಕೊಳ್ಳುವುದು ಅನ್ಯಾಯ ಎಂಬುದನ್ನು ಒಪ್ಪಿಕೊಂಡಿಲ್ಲ.

# ಸುಧಾರಕ ಶ್ರೀ ನಾರಾಯಣಗುರುಗಳ 169ನೇ ವರ್ಷದ ಜನ್ಮ ಜಯಂತಿ



ಕಲಾ ಸಾಹಿತ್ಯ
ಕೃಷ್ಣಪ್ಪ ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ



ಶ್ರೀ ನಾರಾಯಣ ಗುರುಗಳು ಕೇರಳದ ತಿರುವಂಥಪುರದ ಬಳಿ ಚಂಬಳಂಬಿ ಎಂಬ ಗ್ರಾಮದಲ್ಲಿ 1856 ಆಗಸ್ಟ್ 31 ರಂದು ಜನಿಸಿದರು. ತಂದೆ ಮದನ್ ಆಶಾನ್, ತಾಯಿ ಕುಟ್ಟಿಯಮ್ಮ. ನಾರಾಯಣ ಗುರುಗಳು ಬಾಲ್ಯದಿಂದಲೇ ಅನುಕಂಪ, ಪ್ರೀತಿ, ಸ್ನೇಹ, ದೇವರಲ್ಲಿ ಭಕ್ತಿಭಾವ ಎಲ್ಲಾ ಸದ್ಗುಣಗಳು ಮೈಗೂಡಿದವು. ಇವರು ಬೆಳೆದು ದೊಡ್ಡವರಾದ ಹಾಗೆ ಇಹಲೋಕದ ಆಕರ್ಷಣೆಗಳು,ಸಂಸಾರದ ಬಂಧನ ಎಲ್ಲರಿಗೂ ದೂರ ಸರಿಯಬೇಕೆಂಬ ಭಾವನೆ ಹುಟ್ಟಿತು. ಇವರಲ್ಲಿ ಸನ್ಯಾಸತ್ವ ಲಕ್ಷಣಗಳು ಸ್ಪಷ್ಟವಾಗಿ ಗೋಚರಿಸುತ್ತಿತ್ತು. ಗುರುಕುಲ ಪದ್ದತಿಯಲ್ಲಿ ಶಿಕ್ಷಣ ಪಡೆದು ಅಸಾಧಾರಣ ಬುದ್ದಿಶಕ್ತಿ ಹೊಂದಿದ್ದ ಗುರು ಕಲಿಸಿಕೊಟ್ಟ ವಿದ್ಯೆಯನ್ನ ಅತಿ ಶೀಘ್ರದಲ್ಲಿ ಗ್ರಹಿಸುತ್ತಿದ್ದರು. ಮುಂದೆ ಆಧ್ಯಾತ್ಮ ಲೋಕವನ್ನ ಆರಿಸಿಕೊಂಡು ಶಿಸ್ತು,ಶ್ರದ್ದೆ, ಭಕ್ತಿಯಿಂದ ವೈರಾಗ್ಯ ದೀಕ್ಷೆಯನ್ನು ಸ್ವೀಕರಿಸಿ ಸಕಲ ವಿದ್ಯಾ ಪಾಂಡಿತ್ಯವನ್ನುಗಳಿಸಿ ಸಮಾಜದಲ್ಲಿ ನೆಲೆಯೂರಿರುವ ಶಾಶ್ವತ ಸಮಾಜಕ ಪಿಡುಗನ್ನ ಹೋಗಲಾಡಿಸಲು ಶ್ರಮವಹಿಸಿದರು.

ಸಮಾಜದಲ್ಲಿ ಬಲವಾಗಿ ನಾಟಿದ್ದ ಅಜ್ಞಾನ ಮತ್ತು ಮೌಢ್ಯಗಳನ್ನ ತೊಡೆದು ಹಾಕಲು ನಿರಂತರವಾಗಿ ಶ್ರಮಿಸಿ ಜ್ಞಾನದ ಬೆಳಕನ್ನ ಪ್ರಸರಿಸಿದ ಮಹಾನ್ ಸಾಧಕರು ಶ್ರೀ ನಾರಾಯಣ ಗುರುಗಳು. ಜಾತಿ ವ್ಯವಸ್ಥೆಯ ವಿರುದ್ಧ ಹೋರಾಟ ನಡೆಸಿದ ಇವರು ಶೋಷಿತರ ಉದ್ಧಾರಕ ಎನಿಸಿದ್ದಾರೆ.

12ನೇ ಶತಮಾನದಲ್ಲಿ ಬಸವಣ್ಣನವರು ಸಮಾಜದಲ್ಲಿ ಮೇಲು ಕೀಳೆಂಬ ವ್ಯತ್ಯಾಸವನ್ನು ಕೊನೆಗಾಣಿಸಲು ಪ್ರಯತ್ನಿಸಿದಂತೆ 20ನೇ ಶತಮಾನದ ಪೂರ್ವಾರ್ಧದಲ್ಲಿ ಶ್ರೀ ನಾರಾಯಣ ಗುರುಗಳು ಜಾತಿ ಪದ್ಧತಿಯ ವಿರುದ್ಧ ಆಂದೋಲನ ನಡೆಸಿದರು. ಈ ದೃಷ್ಟಿಯಲ್ಲಿ ನಾರಾಯಣ ಗುರು ಓರ್ವ ನಿರ್ಭಯ ಸಮಾಜ ಸುಧಾರಕ ಎನಿಸಿದ್ದಾರೆ.

ಜಾತೀಯತೆ, ಅಸ್ಪೃಶ್ಯತೆ ಎಂಬ ವಿಷವೃಕ್ಷವು ಇಡೀ ಶೂದ್ರ ಜನಸಮೂಹವನ್ನು ಉಸಿರುಗಟ್ಟಿ ಸಾಯಿಸುತ್ತಿರುವ ಘೋರ ಕ್ರೌರ್ಯದ ತುರಿಯಾವಸ್ಥೆಯಲ್ಲಿ ಜಾತಿ ವೈಶಮ್ಯ, ಮೂಢನಂಬಿಕೆ, ಪ್ರಾಣಿವಧೆ,ಅಸ್ಪೃಶ್ಯತೆ ಹೀಗೆ ಸಮಾಜದ ಹಲವು ಅನಾಚಾರಗಳ ವಿರುದ್ಧ ಹೋರಾಟ ನಡೆಸಿದರು. ಶ್ರೀ ನಾರಾಯಣ ಗುರುಗಳ ಸಮಾಜ ಸುಧಾರಣೆಯ ತತ್ವಗಳು ಒಂದೇ ಜಾತಿ, ಒಂದೇ ಧರ್ಮ, ಒಂದೇ ಮತ,ಒಬ್ಬನೇ ದೇವರು ಇಂತಹ ಬೋಧನೆಗಳು ಸಾರ್ವಕಾಲಿಕವಾಗಿದ್ದು ಅವುಗಳ ಪ್ರಸ್ತುತತೆ,ಚಿರಂತನ ಎನಿಸುತ್ತದೆ.


ಶ್ರೀ ನಾರಾಯಣ ಗುರುಗಳು 1928 ಸೆಪ್ಟೆಂಬರ್ 20 ರಂದು ಇಹಲೋಕವನ್ನ ತ್ಯಜಿಸಿದರು. ಇಂತಹ ಮಹಾನ್ ಸಂತ ಸಾರ್ವಕಾಲಿಕ ಸಮಾಜ ಸುಧಾರಕ ಶ್ರೀ ನಾರಾಯಣ ಗುರುಗಳ 169ನೇ ವರ್ಷದ ಜನ್ಮದಿನದಂದು ನಾವು ಸ್ಮರಿಸಿ, ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಆ ಭಗವಂತನಲ್ಲಿ ಭಕ್ತಿ ಪೂರ್ವಕ ಪ್ರಾರ್ಥಿಸೋಣ.

## ಶ್ರೀ ಅನಂತ ಪದ್ಮನಾಭ ವ್ರತ ಪೂಜೆ ಸ್ವರ್ಣ ಸಿಂಹಾಸನದಲ್ಲಿ ಕಲಶ ಪ್ರತಿಷ್ಠಾಪನೆ

• ಉದಯವಾಹಿನಿ, ಬೆಂಗಳೂರು

ಜಯನಗರದ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಸ್ವರ್ಣ ಸಿಂಹಾಸನದಲ್ಲಿ ಕಲಶವನ್ನು ಇರಿಸಿ ವಿಶೇಷವಾಗಿ ಅನಂತನ ದಾರ ಗ್ರಂಥಿಯೊಂದಿಗೆ ಶ್ರೀ ಅನಂತ ಪದ್ಮನಾಭವ್ರತ ಪೂಜೆಯು ಆಚಾರ್ಯರಾದ ಶ್ರೀ ಕೃಷ್ಣಗುಂಡಾಚಾರ್, ಶ್ರೀ ರಾಮಚಂದ್ರಾಚಾರ್ಯರಿಂದ ನೆರವೇರಿತು.

ಈ ಸಂದರ್ಭದಲ್ಲಿ ಸಾಮೂಹಿಕವಾಗಿ ಸೇವಕರ್ತರಿಗೂ ಪ್ರತ್ಯೇಕದ ಕಳಶವನ್ನು ಇರಿಸಿ ಸಾಮೂಹಿಕ ಅರ್ಚನೆಯೊಂದಿಗೆ ಪೂಜೆಯು ನೆರವೇರಿಸಿ, ತದನಂತರ ತೀರ್ಥ ಪ್ರಸಾದವನ್ನು ಸ್ವೀಕರಿಸಿ ಶ್ರೀ ಅನಂತ ಪದ್ಮನಾಭ ದೇವರ ಹಾಗೂ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು ಎಂದು ಶ್ರೀ ನಂದಕಿಶೋರಾಚಾರ್ಯರು ತಿಳಿಸಿದರು.



ಇದೇ ಸಂದರ್ಭದಲ್ಲಿ ಭಕ್ತಾದಿಗಳು ಶ್ರೀಮಠದ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಕಂಡು ಸಂತೋಷವನ್ನು ವ್ಯಕ್ತಪಡಿಸುತ್ತಾ ಶ್ರೀಮಠದ ಸಿಬ್ಬಂದಿಗಳನ್ನು ಅಭಿನಂದಿಸಿದರು.

## ಕಿತ್ತಳೆ ಸಿಪ್ಪೆಗಳು ಚರ್ಮವನ್ನು ಆಳವಾಗಿ ಸ್ವಚ್ಛಗೊಳಿಸಲು ಸಹಕಾರಿ

ಕಿತ್ತಳೆ ಸಿಪ್ಪೆಗಳು ಚರ್ಮವನ್ನು ಆಳವಾಗಿ ಸ್ವಚ್ಛಗೊಳಿಸಲು ಸಹಕಾರಿಯಾಗಿದೆ. ಇವು ನಮ್ಮ ತ್ವಚೆಯನ್ನು ಕಾಂತಿಯುತವಾಗಿಸಬಲ್ಲ ಹಲವಾರು ಗುಣಗಳನ್ನು ಹೊಂದಿದೆ. ಇದನ್ನು ಯಾವ ರೀತಿ ಬಳಸುವುದು ಉತ್ತಮ ಎನ್ನುವುದನ್ನು ತಿಳಿಯೋಣ. ನಾವು ಸಾಮಾನ್ಯವಾಗಿ ಕಿತ್ತಳೆ ಹಣ್ಣನ್ನು ತಿಂದು ಅದರ ಸಿಪ್ಪೆಯನ್ನು ಬಿಸಾಡುತ್ತೇವೆ. ಅದರ ಬದಲು ಕಿತ್ತಳೆ ಸಿಪ್ಪೆಯನ್ನು ತ್ವಚೆಯನ್ನು ಕಾಂತಿಯುತಗೊಳಿಸಲು ಬಳಸಬಹುದು. ಕಿತ್ತಳೆ ಸಿಪ್ಪೆಗಳು ಚರ್ಮವನ್ನು ಆಳವಾಗಿ ಸ್ವಚ್ಛಗೊಳಿಸಲು ಸಹಕಾರಿಯಾಗಿದೆ. ಇದನ್ನು ಯಾವ ರೀತಿ ಬಳಸಬೇಕು ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

**ಕಿತ್ತಳೆ ಸಿಪ್ಪೆಯಲ್ಲಿರುವ ಪೋಷಕಾಂಶಗಳು:** ಕಿತ್ತಳೆ ಸಿಪ್ಪೆಗಳು ಹೆಚ್ಚಿನ ಪ್ರಮಾಣದ ವಿಟಮಿನ್ ಸಿ ಅನ್ನು ಹೊಂದಿರುತ್ತವೆ. ಇದರಲ್ಲಿರುವ ಉತ್ಕರ್ಷಣ ನಿರೋಧಕಗಳು ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು ಚರ್ಮದ ಆರೈಕೆಯಲ್ಲಿ ಪ್ರಯೋಜನಕಾರಿಯಾಗಿದೆ. ಇದರ ಹೊರತಾಗಿ, ಕ್ಯಾಲ್ಸಿಯಂ, ಪೊಟ್ಯಾಸಿಯಮ್ ಮತ್ತು ಮೆಗ್ನೀಸಿಯಮ್‌ನಂತಹ ಖನಿಜಗಳು ಚರ್ಮಕ್ಕೆ ಹೊಳಪನ್ನು ನೀಡಲು ಸಹಾಯ ಮಾಡುತ್ತದೆ. ಇದು ಸತ್ತ ಚರ್ಮದ ಕೋಶಗಳ ಸಮಸ್ಯೆಯನ್ನು ಪರಿಹರಿಸುವ ಮೂಲಕ ಚರ್ಮವನ್ನು ಕಲೆರಹಿತವಾಗಿಸಲು ಸಹಾಯ ಮಾಡುತ್ತದೆ.

**ನೈಸರ್ಗಿಕ ಹೊಳಪನ್ನು ಹೆಚ್ಚಿಸುವಲ್ಲಿ ಪ್ರಯೋಜನಕಾರಿ:** ರಾಸಾಯನಿಕ ಉತ್ಪನ್ನಗಳ ಹೊರತಾಗಿ, ಕಿತ್ತಳೆ ಸಿಪ್ಪೆಗಳ ಬಳಕೆಯು ಚರ್ಮದ ಹೊಳಪನ್ನು ಹೆಚ್ಚಿಸಲು ತುಂಬಾ ಪ್ರಯೋಜನಕಾರಿ ಎಂದು ಸಾಬೀತಾಗಿದೆ. ಇದು ಪೋಷಕಾಂಶಗಳನ್ನು ಒದಗಿಸುವುದಲ್ಲದೆ ಚರ್ಮದ ಹೊಳಪನ್ನು ಹೆಚ್ಚಿಸುತ್ತದೆ. ಅದರ ಸಿಪ್ಪೆಯನ್ನು ಒಣಗಿಸಿ ತಯಾರಿಸಿದ ಪುಡಿಯಿಂದ ಪೇಸ್ಟ್ ತಯಾರಿಸಿ ಮುಖಕ್ಕೆ ಹಚ್ಚುವುದರಿಂದ ಅನೇಕ ಪ್ರಯೋಜನಗಳು ಸಿಗುತ್ತವೆ.

**ಮೊಡವೆ ಸಮಸ್ಯೆ ಬಗೆಹರಿಯುತ್ತದೆ:** ಕಿತ್ತಳೆ ಸಿಪ್ಪೆಯಲ್ಲಿರುವ ಉರಿಯೂತದ ಬ್ಯಾಕ್ಟೀರಿಯಾ ವಿರೋಧಿ ಮತ್ತು ಆಂಟಿಫಂಗಲ್ ಗುಣಲಕ್ಷಣಗಳು ಮೊಡವೆಗಳ ಸಮಸ್ಯೆಯನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಇದು ಸತ್ತ ಚರ್ಮದ ಕೋಶಗಳ ಅಪಾಯವನ್ನು ಕಡಿಮೆ ಮಾಡುತ್ತದೆ ಮತ್ತು ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುತ್ತದೆ.

**ವಯಸ್ಸಾಗುವಿಕೆಯನ್ನು ನಿವಾರಿಸುತ್ತದೆ:** ವಿಟಮಿನ್ ಸಿ ಯಲ್ಲಿ ಸಮೃದ್ಧವಾಗಿರುವ ಕಿತ್ತಳೆ ಸಿಪ್ಪೆಗಳು ಸೂಕ್ಷ್ಮ ರೇಖೆಗಳ ಸಮಸ್ಯೆಯನ್ನು ಪರಿಹರಿಸುವ ಮೂಲಕ ವಯಸ್ಸಾದ ಪ್ರಕ್ರಿಯೆಯನ್ನು ನಿಧಾನಗೊಳಿಸಲು ಸಹಾಯ ಮಾಡುತ್ತದೆ.

ಇದು ಚರ್ಮದ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುತ್ತದೆ ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳಿಂದ ಪರಿಹಾರ ನೀಡುತ್ತದೆ. ವಾರಕ್ಕೆ 2 ರಿಂದ 3 ಬಾರಿ ಮುಖಕ್ಕೆ ಇದನ್ನು ಬಳಸಿ. **ಮುಚ್ಚಿಹೋಗಿರುವ ರಂಧ್ರಗಳಿಂದ ಪರಿಹಾರ ನೀಡುತ್ತದೆ:** ಸಿಪ್ಪೆಗಳಿಂದ ತಯಾರಿಸಿದ ಪುಡಿಯನ್ನು ಮುಖಕ್ಕೆ ಹಚ್ಚುವ ಮೂಲಕ, ಮುಚ್ಚಿಹೋಗಿರುವ ರಂಧ್ರಗಳಲ್ಲಿ ಸಂಗ್ರಹವಾಗಿರುವ ಕೊಳಕು ಮತ್ತು ಬ್ಯಾಕ್ಟೀರಿಯಾದ ಪರಿಣಾಮವನ್ನು ಕಡಿಮೆ ಮಾಡುವ ಮೂಲಕ ತಪ್ಪಿಸಬಹುದು. ಇದು ರಂಧ್ರಗಳನ್ನು ಬಿಗಿಗೊಳಿಸಲು ಸಹಾಯ ಮಾಡುತ್ತದೆ ಚರ್ಮದ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುತ್ತದೆ.



## ಮೈಸೂರು ದಸರಾ:2025 ಉದ್ಘಾಟನೆಗೆ ಬಾನು ಮುಶ್ತಾಕ್ ಅವರಿಗೆ ಆಹ್ವಾನ ನೀಡಿರುವುದಕ್ಕೆ ವಿರೋಧ

■ ಉದಯವಾಹಿನಿ, ವಿಶೇಷ

**ನಮ್ಮ ಪ್ರಮುಖ ಆಕ್ಷೇಪಗಳು:** 1. ಮೈಸೂರು ದಸರಾ ಹಬ್ಬವು ಕೇವಲ ಸಾಂಸ್ಕೃತಿಕ ಕಾರ್ಯಕ್ರಮವಲ್ಲ; ಇದು ಹಿಂದೂ ಧಾರ್ಮಿಕ ಸಂಸ್ಕೃತಿಯ ಪವಿತ್ರ ಹಬ್ಬ. ಪರಂಪರೆಯಿಂದಲೂ ದೀಪಾರಾಧನೆ, ಪುಷ್ಪಾರ್ಚನೆ, ಅರಿಶಿನ-ಕುಂಕುಮ, ಪೂಜೆಗಳೊಂದಿಗೆ ದೇವಿ ಚಾಮುಂಡೇಶ್ವರಿ/ಭುವನೇಶ್ವರಿ ಅವರ ಸಮ್ಮುಖದಲ್ಲಿ ಉದ್ಘಾಟನೆ ನಡೆಯುತ್ತ ಬಂದಿದೆ.

2. ಕನ್ನಡ ಭಾಷೆಯನ್ನೇ ಜನತೆ ದೇವಿ ಭುವನೇಶ್ವರಿ (ಕನ್ನಡಮ್ಮ) ರೂಪದಲ್ಲಿ ಆರಾಧನೆ ಮಾಡುತ್ತಾರೆ. ಕನ್ನಡಕ್ಕೆ ಭಾರತ ಸರ್ಕಾರವೇ ಶಾಸ್ತ್ರೀಯ ಭಾಷೆ ಸ್ಥಾನಮಾನ ನೀಡಿದೆ.

3. 2023ರಲ್ಲಿ ನಡೆದ ಸಾಹಿತ್ಯ ಸಮ್ಮೇಳನಗಳಲ್ಲಿ ಬಾನು ಮುಶ್ತಾಕ್ ಅವರು ಕನ್ನಡವನ್ನು ದೇವಿ ಭುವನೇಶ್ವರಿಯೊಂದಿಗೆ ಜೋಡಿಸಿರುವುದನ್ನು ಹಾಸ್ಯವಾಡಿ ನಿಂದಿಸಿದ್ದು ಕೆಂಪು-ಹಳದಿ (ಅರಿಶಿನ-ಕುಂಕುಮ) ಧಾರ್ಮಿಕ ಆಚರಣೆಗಳನ್ನು ಹಾಸ್ಯ ಮಾಡಿದ್ದು, ಜೊತೆಗೆ ಮೂರ್ತಿಪೂಜೆಯನ್ನೇ ವಿರೋಧಿಸುವುದಾಗಿ ಘೋಷಿಸಿದ್ದಾರೆ.

4. ಈ ಹೇಳಿಕೆಗಳು ಕನ್ನಡಾಭಿಮಾನಿಗಳ ಹಾಗೂ ಹಿಂದೂ ಸಮಾಜದ ಭಾವನೆಗೆ ಭಾರೀ ನೋವುಂಟುಮಾಡಿವೆ. ಆದರೆ ಇಂದಿಗೂ ಅವರು ಯಾವುದೇ ಕ್ಷಮೆಯಾಚನೆ ಮಾಡಿಲ್ಲ.

5. ಇಂತಹ ವ್ಯಕ್ತಿಗೆ ದಸರಾ ಉದ್ಘಾಟನೆಯ ಗೌರವ ನೀಡುವುದಷ್ಟೇ ಅಲ್ಲದೆ, ಸರ್ಕಾರವು ರೂ.10 ಲಕ್ಷ ರೂ. ಪುರಸ್ಕಾರ ನೀಡುತ್ತಿರುವುದು ಹಿಂದೂಗಳ ಧಾರ್ಮಿಕ-ಸಾಂಸ್ಕೃತಿಕ ಭಾವನೆಗೆ ಅವಮಾನವಾಗಿದೆ.



**ಸರ್ಕಾರಕ್ಕೆ ಎಚ್ಚರಿಕೆ:**


**7 ದಿನಗಳ ಒಳಗೆ ಕ್ರಮ ಕೈಗೊಳ್ಳದಿದ್ದಲ್ಲಿ ಹಿಂದೂ ಜನಜಾಗೃತಿ ಸಮಿತಿ, ಕರ್ನಾಟಕ ಹೈಕೋರ್ಟ್‌ನಲ್ಲಿ ಸಾಂವಿಧಾನಿಕ ಅರ್ಜಿ, ಜೊತೆಗೆ ಅಪರಾಧ ಪ್ರಕರಣ ಹಾಗೂ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳು ಹಾಕಲು ಬದ್ಧವಾಗಿರುತ್ತದೆ. ಮೈಸೂರು ದಸರಾ ಹಬ್ಬವು ರಾಜಕೀಯ ವೇದಿಕೆ ಅಲ್ಲ, ಇದು ಹಿಂದೂಗಳ ಧಾರ್ಮಿಕ ಹಬ್ಬ. ದೇವಿ ಭುವನೇಶ್ವರಿ, ಕನ್ನಡಮ್ಮ ಮತ್ತು ಹಿಂದೂ ಆಚರಣೆಗಳನ್ನು ಅವಹೇಳನ ಮಾಡುವ ಯಾವುದೇ ಪ್ರಯತ್ನವನ್ನು ಸಹಿಸಲಾಗುವುದಿಲ್ಲ.**

**ನಮ್ಮ ಬೇಡಿಕೆಗಳು:**

1. ಬಾನು ಮುಶ್ತಾಕ್ ಅವರಿಗೆ ನೀಡಿರುವ ಉದ್ಘಾಟನಾ ಆಹ್ವಾನ ತಕ್ಷಣ ಹಿಂಪಡೆಯಬೇಕು.

2. ಇಲ್ಲದಿದ್ದರೆ, ಉದ್ಘಾಟನೆ ಹಿಂದೂ ಧಾರ್ಮಿಕ ಆಚರಣೆಗಳ ಪ್ರಕಾರವೇ ನಡೆಯಲಿದೆ ಎಂಬುದನ್ನು ಸರ್ಕಾರವು ಲಿಖಿತವಾಗಿ ಖಾತ್ರಿಪಡಿಸಬೇಕು. 3. ಕನ್ನಡ, ಕನ್ನಡಮ್ಮ, ಕರ್ನಾಟಕದ ಪರಂಪರೆಯ ಪವಿತ್ರತೆಯನ್ನು ಕಾಪಾಡಬೇಕು.

# ರಾಮಾಯಣ



ಸೀತಾದೇವಿಯು ಶ್ರೀರಾಮನಿಗೆ ಆ ಹಿಂಸಾ ಧರ್ಮವನ್ನು ಹೇಳಿದ್ದು

• ಹಿಂದಿನ ಸಂಚಿಕೆಯಿಂದ

## 119 ನೆಯ ಅಧ್ಯಾಯ

ನಾನು ಶ್ರೀರಾಮನ ತಮ್ಮ, ನನ್ನ ಹೆಸರು ಲಕ್ಷ್ಮಣ. ಶ್ರೀರಾಮನು ಆಗಸ್ಟ್ ಮುನಿಯ ಭಕ್ತ, ನಾವು ನಮ್ಮ ತಂದೆಯಾದ ದಶರಥರಾಯನ ಅಪ್ಪಣೆಯಿಂದ ವನವಾಸಕ್ಕೆ ಬಂದು ಮಹಾತ್ಮನಾದ ಅಗಸ್ತ್ರಮುನಿಯ ದರ್ಶನ ಮಾಡಬೇಕೆಂದು ಇಲ್ಲಿಗೆ ಬಂದೆವು. ಈ ವಿಷಯವನ್ನು ಅಗಸ್ತ ಮುನೀಶ್ವರನ ಸಂಗಡ ಹೇಳಬೇಕು ಎಂದು ಹೇಳಿದನು. ಆ ಶಿಷ್ಯನು ಶೀಘ್ರವಾಗಿ ಆಶ್ರಮದೊಳಗೆ ಹೋಗಿ ಅಗ್ನಿಹೋತ್ರದ ಶಾಲೆಯಲ್ಲಿ ತಪೋನಿಷ್ಠೆಯಲ್ಲಿದ್ದ ಮಹಾತ್ಮನಾದ ಆಗಸ್ಟು ಮುನೀಶ್ವರನನ್ನು ಕುರಿತು ಕೈ ಮುಗಿದುಕೊಂಡು ಗುರುಗಳೆ, ದಶರಥರಾಯನ ಕುಮಾರನಾದ ಶ್ರೀರಾಮನು ಸೀತಾಲಕ್ಷ್ಮಣಸಮೇತನಾಗಿ ನಿಮ್ಮ ದರ್ಶನ ಮಾಡ ಬೇಕೆಂದು ನಮ್ಮ ಆಶ್ರಮಕ್ಕೆ ಬಂದಿದ್ದಾನೆ. ಇದನ್ನು ತಮಗೆ ತಿಳುಹಿಸಬೇಕೆಂದು ಶ್ರೀರಾಮನ ತಮ್ಮನಾದ ಲಕ್ಷ್ಮಣನು ಕೇಳಿಕೊಂಡಿದ್ದಾನೆ ಎಂದು ಹೇಳಿದನು. ಅಗಸ್ಯಮುನೀಶ್ವರನು ಶ್ರೀರಾಮನು ನಾವು ಮಾಡಿದ ಪುಣ್ಯದಿಂದ ನಮ್ಮನ್ನು ನೋಡ ಬೇಕೆಂಬ ನೆವದಿಂದ ಇಲ್ಲಿಗೆ ಬಂದನು. ನಾನು ಆತನು ಯಾವಾಗ ಬರುವನೋ ಎಂದು ಆತನ ಬರುವಿಕೆಯನ್ನೇ ಎದುರು ನೋಡುತ್ತಿದ್ದೆನು. ಆತನು ಬಂದದ್ದು ಒಳ್ಳೆಯದಾಯಿತು. ಆತನನ್ನು ಕೂಡಲೆ ಕರೆದುಕೊಂಡು ಬರದೆ ಅನುಚಿತವನ್ನು ಮಾಡಿದೆ. ಶೀಘ್ರವಾಗಿ ಹೋಗಿ ಸೀತಾಲಕ್ಷ್ಮಣ ಸಮೇತನಾದ ಶ್ರೀರಾಮನನ್ನು ಕರೆದುಕೊಂಡು ಬಾ ಎಂದು ಹೇಳಿದನು. ಆ ಶಿಷ್ಯನು ಮಹಾಪ್ರಸಾದವೆಂದು ಕೈಮುಗಿದು ಶೀಘ್ರದಲ್ಲಿ ಹೊರಗೆ ಬಂದು ಲಕ್ಷ್ಮಣನನ್ನು ಕುರಿತು ಎಲೈ ಲಕ್ಷ್ಮಣ, ಶ್ರೀರಾಮನು ಎಲ್ಲಿದ್ದಾನೆ ನೀವು ಅಗಸ್ತ ಮುನೀಶ್ವರನ ಸಮೀಪಕ್ಕೆ ಬನ್ನಿರಿ ಎಂದನು. ಲಕ್ಷ್ಮಣನು ಆ ಶಿಷ್ಯನನ್ನು ಆಶ್ರಮದ ಬಾಗಿಲಿಗೆ ಕರೆತಂದು ಶ್ರೀರಾಮ ಸೀತಾದೇವಿಯರನ್ನು ತೋರಿಸಿದನು. ಆತನು ಅತಿವಿನಯದಿಂದ ಅಗಸ್ತಮುನೀಶ್ವರನು ಕರೆದುಕೊಂಡು ಬರಹೇಳಿದ ವೃತ್ತಾಂತವನ್ನು ಹೇಳಿ ಸತ್ಕಾರಪೂರ್ವಕವಾಗಿ ಅವರನ್ನು ಕರೆದುಕೊಂಡು ಹೋದನು. ಶ್ರೀರಾಮನುಆ ಆಶ್ರಮವನ್ನು ಹೊಕ್ಕು ಅಲ್ಲಲ್ಲಿದ್ದ ದೇವತೆಗಳ ಸ್ಥಾನಗಳನ್ನು ನೋಡಿದನು. ಬ್ರಹ್ಮದೇವ, ಯಜ್ಞಪುರುಷ, ದೇವೇಂದ್ರ, ನಾರಾಯಣ, ಸೂರ್ಯ, ಚಂದ್ರ, ಕುಬೇರ, ಧಾತೃವಿಧಾತೃಗಳೆಂಬ ಅವಾಂತರ ಸೃಷ್ಟಿ ಕರ್ತೃಗಳು, ವಾಯುದೇವ, ವರುಣ, ಗಾಯತ್ರಿ, ವಸುಗಳು, ಷಣ್ಮುಖ, ಯಮಧರ್ಮ ಮೊದಲಾದ ದೇವತೆಗಳ ಸ್ಥಾನಗಳನ್ನು ನೋಡುತ್ತ ಸೀತಾಲಕ್ಷ್ಮಣ ಸಮೇತನಾಗಿ ಆತನ ಸಮೀಪಕ್ಕೆ ಹೋಗುತ್ತಿರಲು ಆಗಸ್ಟುಮುನೀಶ್ವರನು ತನ್ನ ಶಿಷ್ಯರನ್ನು ಕೂಡಿಕೊಂಡು ಇದಿರಾಗಿ ಬಂದನು. ಅದನ್ನು ಕಂಡು ಶ್ರೀರಾಮನು ಲಕ್ಷ್ಮಣನನ್ನು ಕುರಿತು ಎಲೈ ಲಕ್ಷ್ಮಣ, ಆಗೋ ಆ ಮುನೀಶ್ವರನು ನಮ್ಮನ್ನು ಇದಿರುಗೊಳ್ಳಲು ಬರುತ್ತಿದ್ದಾನೆ. ಆ ಮುನೀಶ್ವರನು ಸಮಸ್ಯ ತಪೋಧನರಿಗೂ ನಿಕ್ಷೇಪ ಸ್ಥಾನವಾದವನು ಎಂದು ಸೂರ್ಯಕಾಂತಿಯ ರೀತಿಯಲ್ಲಿ ಕಾಂತಿಯುಳ್ಳ ಅಗಸ್ಕ್ಯ ಮುನೀಶ್ವರನ ಪಾದಗಳಿಗೆ ಅಭಿನಂದಿಸಿ ಸೀತಾಲಕ್ಷ್ಮಣರ ಸಮೇತನಾಗಿ ಕೈ ಮುಗಿದುಕೊಂಡು ನಿಂತನು, ಅಗಸ್ಕಮಹರ್ಷಿಯು ಅವರಿಗೆ ಅರ್ಘ್ಯಪಾದ್ಯಾದಿ ಸತ್ಕಾರಗಳನ್ನು ಮಾಡಿ ಕುಶಲವನ್ನು ಕೇಳಿ ಪೀಠವನ್ನು ಕೊಟ್ಟನು.

ಮುಂದುವರಿಯುವುದು...

## ಸಾಮಾಜಿಕ ಜಾಲತಾಣದಲ್ಲಿ ಸಿಎಂ ವಿರುದ್ಧ ಅವಹೇಳನಕಾರಿ ಪೋಸ್ಟ್



• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯನವರ ವಿರುದ್ಧ ಅವಹೇಳನಕಾರಿ ಪದಗಳಿಂದ ಹೀಯಾಳಿಸಿ, ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ ಹಲವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮುಖ್ಯಮಂತ್ರಿಗಳ ವಿರುದ್ಧ ಅವಹೇಳನಕಾರಿ ಪೋಸ್ಟ್ ಕುರಿತು ಸಾಮಾಜಿಕ ಮಾಧ್ಯಮ ಮೇಲ್ವಿಚಾರಣಾ ವಿಭಾಗದ ಗಮನಕ್ಕೆ ಬಂದಿದ್ದು, ಈ ಹಿನ್ನೆಲೆಯಲ್ಲಿ ಸೆಪ್ಟೆಂಬರ್ 3 ರಂದು ಸೈಬರ್ ಅಪರಾಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆಂದು ಮಾಹಿತಿ ನೀಡಿದ್ದಾರೆ.

ಈ ಸಂಬಂಧ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು, ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಉಪ ಆಯುಕ್ತ ಅಪರಾಧ -2 ರಾಜಾ ಇಮಾಮ್ ಖಾಸಿಂ ಅವರು ಹೇಳಿದ್ದಾರೆ. ಇತ್ತೀಚೆಗೆ ಮೈಸೂರಿನಲ್ಲಿ ನಡೆದ ಮೈಸೂರಿನಲ್ಲಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ(ಎಐಐಎಸ್‌ಎಚ್)ಯ ವಜ್ರಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಸ್ವಾಗತವನ್ನು ಕೋರುತ್ತಾ, ಮೇಡಂ ಯು ನೊ ಕನ್ನಡ ಎಂದು ಪ್ರಶ್ನಿಸಿದ್ದರು.

ಬಳಿಕ ನಾನು ಕನ್ನಡದಲ್ಲೇ ಮಾತನಾಡುತ್ತೇನೆಂದು ಭಾಷಣ ಮಾಡಿದ್ದರು. ಈ ಕುರಿತ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ರಾಷ್ಟ್ರಪತಿಗಳಿಗೆ ಸಿದ್ದರಾಮಯ್ಯ ಅವರು ಅಗೌರವ ತೋರಿದ್ದಾರೆಂದು ಹಲವರು ಟೀಕೆಗಳನ್ನು ಮಾಡುತ್ತಿದ್ದಾರೆ.

# ಅಶಾಸ್ತ್ರೀಯ ಮತ್ತು ಅವಾಸ್ತವ ಕರ್ಮಕಾಂಡದ ಆಡಂಬರ



'ಶ್ರಾದ್ಧ' ಎಂದು ಹೇಳಿದೊಡನೆ ಇಂದಿನ ವಿಜ್ಞಾನಯುಗದ ಯುವಪೀಳಿಗೆಯ ಮನಸ್ಸಿನಲ್ಲಿ 'ಅಶಾಸ್ತ್ರೀಯ ಮತ್ತು ಅವಾಸ್ತವ ಕರ್ಮಕಾಂಡದ ಆಡಂಬರ' ಎಂಬ ತಪ್ಪುಕಲ್ಪನೆಯು ಮೂಡುತ್ತದೆ. ಧರ್ಮಶಿಕ್ಷಣದ ಅಭಾವ, ಅಧ್ಯಾತ್ಮವನ್ನು ಅರ್ಥಮಾಡಿಕೊಳ್ಳುವಲ್ಲಿನ ಅನಾಸಕ್ತಿ, ಪಾಶ್ಚಾತ್ಯ ಸಂಸ್ಕೃತಿಯ ಪ್ರಭಾವ, ಹಿಂದೂ ವಿರೋಧಿ ಸಂಘಟನೆಗಳಿಂದ ಹಿಂದೂ ಧರ್ಮದ ರೂಢಿ-ಪರಂಪರೆಗಳ ಮೇಲೆ ಸತತವಾಗಿ ಆಗುತ್ತಿರುವ ದ್ವೇಷಪೂರ್ವಕ ಟೀಕೆ ಇತ್ಯಾದಿಗಳಿಂದ ಈ ಪರಿಣಾಮವಾಗಿದೆ. ಶ್ರಾದ್ಧದ ವಿಷಯದಲ್ಲಿ ಮುಂದಿನ ವಿಚಾರಸರಣಿಯು ಸಮಾಜದಲ್ಲಿ ಕಂಡುಬರುತ್ತದೆ. ಪೂಜೆ ಅರ್ಚನೆ, ಶ್ರಾದ್ಧಪಕ್ಷ ಮುಂತಾದವುಗಳ ಮೇಲೆ ವಿಶ್ವಾಸವನ್ನಿಡದ ಅಥವಾ ಸಮಾಜಕಾರ್ಯವೇ ಸರ್ವ ಶ್ರೇಷ್ಠವಾಗಿದೆ ಎಂದು ಹೇಳುವವರು ಪಿತೃಗಳಿಗಾಗಿ ಶ್ರಾದ್ಧವಿಧಿಗಳನ್ನು ಮಾಡದೇ ಅದರ ಬದಲು, 'ಬಡವರಿಗೆ ಅನ್ನದಾನ ಮಾಡುವೆವು ಅಥವಾ ಶಾಲೆಗಳಿಗೆ ಸಹಾಯ ಮಾಡುವೆವು' ಎಂದು ಹೇಳುತ್ತಾರೆ ಅನೇಕ ಜನರು ಇದೇ ರೀತಿ ಮಾಡುತ್ತಾರೆ ಹೀಗೆ ಮಾಡುವುದೆಂದರೆ, 'ಒಬ್ಬ ರೋಗಿಗೆ ಶಸ್ತ್ರಚಿಕಿತ್ಸೆ ಮಾಡದೇ, ಅದರ ಬದಲು ನಾವು ಬಡವರಿಗೆ ಅನ್ನದಾನ ಮಾಡುವೆವು, ಶಾಲೆಗೆ ಸಹಾಯ ಮಾಡುವೆವು ಎಂದು ಹೇಳಿದಂತೆಯೇ ಆಗಿದೆ.

ಶ್ರಾದ್ಧದಲ್ಲಿನ ಮಂತ್ರೋಚ್ಚಾರಗಳಲ್ಲಿ ಪಿತೃಗಳಿಗೆ ಗತಿ ನೀಡುವಂತಹ ಸೂಕ್ಷ್ಮ ಶಕ್ತಿಯು ಒಳಗೊಂಡಿರುತ್ತದೆ; ಅದರಿಂದಾಗಿ ಪಿತೃಗಳಿಗೆ ಗತಿ ಸಿಗಲು ಸಾಧ್ಯವಾಗುತ್ತದೆ. ಹಾಗಾಗಿ ಮೇಲಿನ ಹೇಳಿಕೆಗಳು ಹಾಸ್ಯಾಸ್ಪದವೆನಿಸಿಕೊಳ್ಳುತ್ತವೆ.

ಹಿಂದೂ ಧರ್ಮದಲ್ಲಿ ಹೇಳಿರುವ ಈಶ್ವರಪ್ರಾಪ್ತಿಯ ಮೂಲಭೂತ ಸಿದ್ಧಾಂತಗಳಲ್ಲಿ ದೇವಋಣ, ಋಷಿಋಣ, ಪಿತೃಋಣ ಮತ್ತು ಸಮಾಜಋಣವನ್ನು ತೀರಿಸುವುದು' ಒಂದು ಮುಖ್ಯ ಉದ್ದೇಶವಾಗಿದೆ.

ಇವುಗಳಲ್ಲಿ ಪಿತೃಋಣವನ್ನು ತೀರಿಸಲು ಶ್ರಾದ್ಧಕರ್ಮವು ಆವಶ್ಯಕವಾಗಿದೆ. ತಂದೆತಾಯಿ ಮತ್ತು ಸಂಬಂಧಿಕರ ಮರಣೋತ್ತರ ಪ್ರಯಾಣವು ಸುಖಕರ ಮತ್ತು ಕ್ಲೇಶರಹಿತವಾಗಿ, ಅವರಿಗೆ ಸದ್ಗತಿಯು ಸಿಗಬೇಕೆಂದು ಮಾಡಬೇಕಾದ ಸಂಸ್ಕಾರಕ್ಕೆ 'ಶ್ರಾದ್ಧ' ಎನ್ನುತ್ತಾರೆ. ಶ್ರಾದ್ಧಕರ್ಮಗಳಲ್ಲಿನ ಮಂತ್ರೋಚ್ಚಾರಗಳಲ್ಲಿ ಪಿತೃಗಳಿಗೆ ಗತಿ ನೀಡುವ ಸೂಕ್ಷ್ಮಶಕ್ತಿ ಇದೆ. ಶ್ರಾದ್ಧಕರ್ಮಗಳಲ್ಲಿ ಪಿತೃಗಳಿಗೆ ಹವಿರ್ಭಾಗವನ್ನು ಕೊಡುವುದರಿಂದ ಅವರು ಸಂತುಷ್ಟರಾಗುತ್ತಾರೆ. ಶ್ರಾದ್ಧವನ್ನು ಮಾಡದಿದ್ದರೆ ಪಿತೃಗಳ ಆಸೆಗಳು ಅತೃಪ್ತವಾಗಿ ಉಳಿಯುತ್ತವೆ ಮತ್ತು ಈ ವಾಸನಾಯುಕ್ತ ಪಿತೃಗಳು ದುಷ್ಟ ಶಕ್ತಿಗಳ ಅಧೀನಕ್ಕೊಳಪಟ್ಟು ಅವರ ಗುಲಾಮರಾಗುತ್ತಾರೆ.

ದುಷ್ಟ ಶಕ್ತಿಗಳು ವಾಸನಾಯುಕ್ತ ಪಿತೃಗಳ ಮೂಲಕ ಕುಟುಂಬದವರಿಗೆ ತೊಂದರೆಗಳನ್ನು ಕೊಡುವ ಸಂಭವವೂ ಇರುತ್ತದೆ. ಶ್ರಾದ್ಧವನ್ನು ಮಾಡುವುದರಿಂದ ಪಿತೃಗಳು ಆ ತೊಂದರೆಗಳಿಂದ ಮುಕ್ತರಾಗುವುದಲ್ಲದೇ ನಮ್ಮ ಜೀವನವೂ ಸುಖಮಯವಾಗುತ್ತದೆ. ಶ್ರಾದ್ಧಕ್ಕೆ ಇಷ್ಟೊಂದು ಮಹತ್ವವಿದ್ದರೂ ಇಂದು ಹಿಂದೂಗಳಲ್ಲಿರುವ ಧರ್ಮಶಿಕ್ಷಣದ ಅಭಾವ, ಅಧ್ಯಾತ್ಮಶಾಸ್ತ್ರದ ಮೇಲಿನ ಅವಿಶ್ವಾಸ ಪಾಶ್ಚಿಮಾತ್ಯ ಸಂಸ್ಕೃತಿಯ ಅಂಧಾನುಕರಣೆ ಇತ್ಯಾದಿಗಳಿಂದ ಶ್ರಾದ್ಧವಿಧಿಯು ಅಲಕ್ಷಿಸಲ್ಪಟ್ಟಿದೆ.

ಶ್ರಾದ್ಧಕರ್ಮವನ್ನು ವಾಸ್ತವವಿಲ್ಲದ ಅಯೋಗ್ಯ ಕರ್ಮಕಾಂಡವೆಂದು ಪರಿಗಣಿಸಲ್ಪಡುತ್ತಿದೆ. ಆದುದರಿಂದ ಶ್ರಾದ್ಧ ಸಂಸ್ಕಾರವೂ ಇತರ ಸಂಸ್ಕಾರಗಳಷ್ಟೇ ಆವಶ್ಯಕವಾಗಿದೆ ಎಂಬುದನ್ನು ಹೇಳುವುದು ಆವಶ್ಯಕವಾಗಿದೆ.

**ಶ್ರಾದ್ಧದಿಂದ ಆಗುವ ಲಾಭಗಳು :** ಶ್ರಾದ್ಧವನ್ನು ಮಾಡುವುದರಿಂದ ಯಾವ ಫಲಪ್ರಾಪ್ತಿಯಾಗುತ್ತದೆ ಎಂಬುದರ ಬಗ್ಗೆ ಗರುಡಪುರಾಣದ ಒಂದು ಶ್ಲೋಕವು ಮುಂದಿನಂತಿದೆ - ಆಯುಃ ಪುತ್ರಾನ್ ಯಶಃ ಸ್ವರ್ಗಂ ಕೀರ್ತಿಂ ಪುಷ್ಟಿಂ ಬಲಂ ಶ್ರಿಯಮ್ । ಪಶೂನ್ ಸೌಖ್ಯಂ ಧನಂ ಧಾನ್ಯಂ ಪ್ರಾಪ್ನುಯಾತ್ ಪಿತೃಪೂಜನಾತ್ । - ಗರುಡಪುರಾಣ, ಅಂಶ 2, ಅಧ್ಯಾಯ 10, ಶ್ಲೋಕ 57

### ಶ್ರಾದ್ಧವನ್ನು ಮಾಡುವುದರಿಂದ ಪೂರ್ವಜರ ತೊಂದರೆಗಳಿಂದ ನಮ್ಮ ರಕ್ಷಣೆ ಹೇಗಾಗುತ್ತದೆ

**ಶ್ರಾದ್ಧದಿಂದ ನಿರ್ಮಾಣವಾದ ಇಂಧನವು ಮೃತವ್ಯಕ್ತಿಯ ಲಿಂಗದೇಹದಲ್ಲಿನ ತ್ರಿಗುಣಗಳ ಇಂಧನಗಳೊಂದಿಗೆ ಹೋಲುತ್ತದೆ; ಆದುದರಿಂದ ಶ್ರಾದ್ಧದಿಂದ ನಿರ್ಮಾಣವಾದ ಇಂಧನವು ಲಿಂಗದೇಹಕ್ಕೆ ದೊರಕಿ ಅದು ಕಡಿಮೆ ಕಾಲಾವಧಿಯಲ್ಲಿ ಮರ್ತ್ಯಲೋಕವನ್ನು ದಾಟುತ್ತದೆ. (ಮರ್ತ್ಯಲೋಕವು ಭೂಲೋಕ ಮತ್ತು ಭುವರ್ಲೋಕಗಳ ಮಧ್ಯದಲ್ಲಿರುತ್ತದೆ.) ಮೃತ್ಯುಲೋಕವನ್ನು ದಾಟಿದ ಲಿಂಗದೇಹಗಳಿಗೆ ಪುನಃ ಪೃಥ್ವಿಯ ವಾತಾವರಣ ಕಕ್ಷೆಯಲ್ಲಿ ಬಂದು ಪೃಥ್ವಿಯ ಮೇಲಿನ ಜನರಿಗೆ ತೊಂದರೆ ಕೊಡಲು ಸಾಧ್ಯವಾಗುವುದಿಲ್ಲ. ಆದುದರಿಂದ ಶ್ರಾದ್ಧವನ್ನು ಮಾಡುವುದಕ್ಕೆ ಬಹಳ ಮಹತ್ವವಿದೆ.**

# ಕೆಸರು ಗದ್ದೆಯಾದ ಸಂತೆ

• **ಉದಯವಾಹಿನಿ ರಬಕವಿ-ಬನಹಟ್ಟಿ**

ಬನಹಟ್ಟಿ ನಗರದಲ್ಲಿ ನಿತ್ಯ ಸಂತೆ ನಡೆಯುವ ಸ್ಥಳ ಮಳೆಯಿಂದಾಗಿ ಕೆಸರಿನ ಗದ್ದೆಯಂತಾಗಿದೆ. ಸಮೀಪದ ಗ್ರಾಮಗಳಿಂದ ಬರುವ ತರಕಾರಿ ಮಾರಾಟಗಾರರು ಕೆಸರಿನಲ್ಲಿಯೇ ತರಕಾರಿ ಇಟ್ಟು ಮಾರಾಟ ಮಾಡುವಂತಾಗಿದೆ. ಇಲ್ಲಿಯ ಮಾರಾಟಗಾರರಿಗೆ ಮತ್ತು ಗ್ರಾಹಕರಿಗೆ ಯಾವುದೇ ಮೂಲ ಸೌಕರ್ಯ ಇಲ್ಲ ಮಳೆ ಬಂದರೆ ಇಲ್ಲಿಯ ಮಾರುಕಟ್ಟೆ ಕೆಸರು ಗದ್ದೆಯಾಗುತ್ತದೆ. ವ್ಯಾಪಾರಿಗಳು ಕೆಸರು ನೆಲದ ಮೇಲೆಯೇ ಬಟ್ಟೆ ಹಾಸಿ ತರಕಾರಿಗಳನ್ನು ಇಟ್ಟು ಮಾರಾಟ ಮಾಡುತ್ತಾರೆ. ಇದರಿಂದ ತರಕಾರಿಗಳೂ ಸ್ವಚ್ಛವಾಗಿರುವುದಿಲ್ಲ.


ಉದಯವಾಹಿನಿ ಚಿತ್ರ

# ನಿಧಿ ಬಳಕೆ ಪ್ರಸ್ತಾವನೆಗೆ ವಿರೋಧ

• **ಉದಯವಾಹಿನಿ ಕಲಬುರಗಿ**

ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಸ್ಥಾಪನೆಗೆ ಕಾರ್ಪೊರೇಟ್ ಸಂಸ್ಥೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿ ಬಳಕೆಯ ಪ್ರಸ್ತಾವನೆ ಕೈಬಿಡುವಂತೆ ಎಐಡಿಎಸ್‌ಒ ಸರಕಾರವನ್ನು ಆಗ್ರಹಿಸಿದೆ.

ಜನರು ನೀಡುವ ತೆರಿಗೆ ಹಣದಲ್ಲಿ ಅಭಿವೃದ್ಧಿಪಡಿಸಬೇಕಾದ, ಜನಗಳ ಸ್ವತ್ತಾದ ಈ ಶಾಲೆಗಳನ್ನು ಈಗ ಸರ್ಕಾರ ಕಾರ್ಪೊ?ರೇಟ್ ಕಂಪನಿಗಳ ಮಡಿಲಿಗಿಡಲು ಹೊರಟಿದೆ. ಮಹಾನ್ ವ್ಯಕ್ತಿಗಳ ಹೆಸರುಗಳನ್ನು ಇಡುವ ಬದಲು ಈ ಕಾರ್ಪೊ?ರೇಟ್ ಕಂಪನಿಗಳ ಹೆಸರು ಶಾಲೆಗಳಿಗೆ ಇಡುವ ಪ್ರಸ್ತಾಪವನ್ನು ಮಾಡಿರುವುದು, ಸರ್ಕಾರ ದಲ್ಲಾಳಿ ಕೆಲಸಕ್ಕೆ ಇಳಿದಿದೆಯೇ ಎಂಬ ಪ್ರಶ್ನೆ ಮೂಡಿಸುತ್ತಿದೆ. ಕಾರ್ಪೊ?ರೇಟ್ ಕಂಪನಿಗಳ ಹಣದಲ್ಲಿ ನಮ್ಮ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸುವ ಬದಲು ನಮ್ಮ ಹಕ್ಕಿನ ತೆರಿಗೆ ಹಣದಲ್ಲಿ ಶಾಲೆಗಳನ್ನು ನಿರ್ಮಿಸಿ ಅಭಿವೃದ್ಧಿ ಪಡಿಸಲಿ ಎಂದು ತುಳಜರಾಮ ಆಗ್ರಹಿಸಿದ್ದಾರೆ.

## ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಿ ಕಾರ್ಯ ನಿರ್ವಹಿಸಬೇಕು: ಜಿಗಜಿಣಗಿ

# ಸಮಾಜದಲ್ಲಿ ಗೌರವ ಸ್ಥಾನ ಹೊಂದಿರುವ ಶಿಕ್ಷಕರ ಪಾತ್ರ ಮಹತ್ವದ್ದು

• **ಉದಯವಾಹಿನಿ ವಿಜಯಪುರ**

ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರ ಪಾತ್ರ ಸಮಾಜದಲ್ಲಿ ಮಹತ್ವದ್ದಾಗಿದ್ದು, ಶಿಕ್ಷಕರಿಗೆ ಸಮಾಜದಲ್ಲಿ ಬಹಳ ಗೌರವದ ಸ್ಥಾನವಿದ್ದು, ಶಿಕ್ಷಕರು ನಿರ್ವಹಿಸುವ ಕಾರ್ಯ ಅನನ್ಯವಾಗಿದೆ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು. ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯ ಹಾಗೂ ನಗರ ವಲಯ ವಿಜಯಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರ ಸಹಯೋಗದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

**ಶಿಕ್ಷಕರಿಗೆ ಸಮಾಜದಲ್ಲಿ ಬಹಳ ಗೌರವದ ಸ್ಥಾನ**

ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವದ ಬೆಳವಣಿಗೆಗೆ ಪೂರಕವಾಗಿ ಪಾಠ ಬೋಧನೆ ಮಾಡುವ ಮೂಲಕ ಮುಂದಿನ ಉತ್ತಮ ನಾಗರಿಕರನ್ನಾಗಿ ರೂಪಿಸುವ ಬಹು ದೊಡ್ಡ ಜವಾಬ್ದಾರಿ ಶಿಕ್ಷಕರ ಮೇಲಿದೆ. ಕಲ್ಲಿನ ಮೂರ್ತಿಯನ್ನು ಶಿಲೆಯನ್ನಾಗಿಸುವಂತೆ ಅಮೂರ್ತ ರೂಪದ ಮಕ್ಕಳನ್ನು ಮೂರ್ತರೂಪ ಕೊಡುವ ಮಕ್ಕಳ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ಶಿಕ್ಷಕರ ಮೇಲಿದೆ. ಮಕ್ಕಳ ಅಂತರಾಳವನ್ನು ಅರಿತು, ಪರಿಣಾಮಕಾರಿಯಾಗಿ ಬೋಧನೆ ಮಾಡುವ ಮೂಲಕ ಮಕ್ಕಳು ಸುಂದರ ವ್ಯಕ್ತಿತ್ವ ರೂಪಿಸಿಕೊಳ್ಳುವ ಜವಾಬ್ದಾರಿ ನಿಭಾಯಿಸುವ ಶಿಕ್ಷಕರ ಸ್ಥಾನ ಗೌರವಕ್ಕೆ ಭಾಜನವಾಗಿದ್ದು, ಶಿಕ್ಷಕ ಓರ್ವ ವ್ಯಕ್ತಿ ಅಲ್ಲ ಅದೊಂದು ಶಕ್ತಿಯಾಗಿದ್ದು, ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ನಾಗಠಾಣ ಶಾಸಕ ವಿಠಲ ಕಟಕಧೋಂಡ ಅವರು ಮಾತನಾಡಿ, ಜ್ಞಾನದ ದೀವಿಗೆ ಬೆಳಗುವ ಶಿಕ್ಷಕ ಜ್ಞಾನಯೋಗಿ, ದಾರ್ಶನಿಕ, ಶಿಕ್ಷಕ, ಲೇಖಕ ಮತ್ತು ರಾಜಕಾರಣಿಯಾಗಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ನೀಡಿದ ಕೊಡುಗೆ ಅಪಾರವಾಗಿದೆ. ವ್ಯಕ್ತಿಯ ಜೀವನ ಹಾಗೂ ಭವ್ಯ ಭವಿತವ್ಯವನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅಪಾರವಾಗಿದ್ದು, ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಅರಿತು ಕರ್ತವ್ಯ ನಿಷ್ಠೆಯ ಪರಿಪಾಲನೆಯೊಂದಿಗೆ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಪಾಠ ಬೋಧನೆ ಮಾಡಿ, ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸಬೇಕು. ತಂದೆ ತಾಯಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿದರೆ, ಶಿಕ್ಷಕ ಶಿಕ್ಷಣದ ಮೂಲಕ ನೀರೆರೆದು ಪೋಷಿಸಿ ಅವರ ಸರ್ವಾಂಗೀಣ ವ್ಯಕ್ತಿತ್ವ ನಿರ್ಮಾಣಕ್ಕಾಗಿ ಶ್ರಮಿಸುವ ಸಾಕಾರಮೂರ್ತಿಯಾಗಿದ್ದಾರೆ ಎಂದರು. ನೈತಿಕ ಮೌಲ್ಯಗಳನ್ನು ತಿಳಿಸುವುದರೊಂದಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಈ ಸಮಾಜದ ರಕ್ಷಣೆ ಮಾಡುವ ಕಾರ್ಯ ನಿರ್ವಹಿಸುವ ಶಿಕ್ಷಕರದ್ದು ಅನುಪಮ ಕಾರ್ಯವಾಗಿದೆ. ಸದೃಢ ಹಾಗೂ ಸಶಕ್ತ ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಕಾರ್ಯ ಮಹತ್ವದ್ದಾಗಿದೆ. ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ಸುಭದ್ರ ಶಿಕ್ಷಣ ನೀಡುವ ಮೂಲಕ ಮಾದರಿ ಹಾಗೂ ಶ್ರೇಷ್ಠ ವ್ಯಕ್ತಿಗಳನ್ನಾಗಿ ನಿರ್ಮಾಣ ಮಾಡಿ ಆದರ್ಶ ಶಿಕ್ಷಕರಾಗಿ ಎಂದು ಹೇಳಿದರು.ಧಾರವಾಡ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಅವರು ಮಾತನಾಡಿ,ಇದು ಶಿಕ್ಷಕರಿಗೆ ಮಹತ್ವದ ದಿನವಾಗಿದೆ. ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಕಟಿಬದ್ಧರಾಗಿ ಶ್ರಮಿಸಿ,ಗುರುವಿನ ಸ್ಥಾನ ಬಹುದೊಡ್ಡದು,ಮಕ್ಕಳ ಬದುಕನ್ನು ಬಂಗಾರವಾಗಿಸುವ ಕಾರ್ಯ ಮಾಡಿ ಮಕ್ಕಳ ಸರ್ವತೋಮುಖ ಏಳಿಗೆಗಾಗಿ ಶ್ರಮಿಸಿ ಎಂದು ಹೇಳಿದರು.

2025–26ನೇ ಸಾಲಿನ ವಿಜಯಪುರ ಜಿಲ್ಲೆಯ ಕಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲಾ ವಿಭಾಗದಲ್ಲಿ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಯಿತು.


ಉದಯವಾಹಿನಿ ಚಿತ್ರ

> ಶಿಕ್ಷಕ ಓರ್ವ ತತ್ವಜ್ಞಾನಿಯಾಗಿ, ನಿರಂತರ ಅಧ್ಯಯನಶೀಲತೆಯನ್ನು ರೂಢಿಸಿಕೊಂಡು, ಮಕ್ಕಳನ್ನು ಉತ್ತಮ ನಾಗರಿಕರನ್ನಾಗಿ ರೂಪಿಸಿ ಸಮಾಜ ಸ್ಮರಿಸುವ ಕಾರ್ಯ ನಿರ್ವಹಿಸಬೇಕು. ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಶಿಕ್ಷಣ ಗುಣಮಟ್ಟ ಹೆಚ್ಚಿಸುವಲ್ಲಿ ವಿವಿಧ ಶೈಕ್ಷಣಿಕಾ ಕಾರ್ಯಚಟುವಟಿಕೆಗಳನ್ನು ನಿರಂತರವಾಗಿ ಹಮ್ಮಿಕೊಳ್ಳಬೇಕು
> **-ಸೋಮಲಿಂಗ ಗೆಣ್ಣೂರ** ಅಪರ ಜಿಲ್ಲಾಧಿಕಾರಿ

> ಸರ್ಕಾರ ಶಿಕ್ಷಣ ಕ್ಷೇತ್ರಕ್ಕಾಗಿ ಸಾಕಷ್ಟು ಅನುದಾನ ಮೀಸಲಿರಿಸಿ, ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಉತ್ತಮ ಶಿಕ್ಷಣ ಪಡೆದುಕೊಳ್ಳಲು ಇದರಿಂದ ಮಕ್ಕಳಿಗೆ ಅನುಕೂಲ ಒದಗಿಸಿದೆ. ಮಕ್ಕಳನ್ನು ಸತ್ಪ್ರಜೆಯಾಗಿ ರೂಪುಗೊಳ್ಳಲು ಶಿಕ್ಷಕ ತನ್ನ ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಎಂದು ಹೇಳಿದರು. ವೃತ್ತಿ ಗೌರವ, ಸೇವಾ ಮನೋಭಾವನೆಯೊಂದಿಗೆ ತಾಯಿಯ ಕರುಣೆ ಹೊಂದಿ, ಮಾದರಿ ಶಿಕ್ಷಕರಾಗಿ ಮಕ್ಕಳ ಭವಿಷ್ಯವನ್ನು ಉತ್ತಮಪಡಿಸಬೇಕು ಎಂದ ಅವರು, ಜಿಲ್ಲೆಯ ಶೈಕ್ಷಣಿಕ ಫಲಿತಾಂಶ ಸುಧಾರಣೆಗೆ ಶ್ರಮಿಸುವಂತೆ **-ಜಿಗಜಿಣಗಿ**

## ಮಿನಿ ನ್ಯೂಸ್

### ಹೇಳಿಕೊಡುವುದಷ್ಟೇ ಶಿಕ್ಷಕರ ಕೊಪ್ಪಳ ಪಾಠ ಕರ್ತವ್ಯವಲ್ಲ: ಬಿ.ಕೆ. ರವಿ

• **ಉದಯವಾಹಿನಿ ಕುಕನೂರು**

ವಿದ್ಯಾರ್ಥಿಗಳಿಗೆ ಪಾಠ ಹೇಳಿಕೊಡುವುದಷ್ಟೇ ಶಿಕ್ಷಕರ ಕರ್ತವ್ಯವಲ್ಲ. ಅವರಲ್ಲಿ ಜೀವನ ಮೌಲ್ಯಗಳನ್ನು ಬೆಳೆಸುವುದು, ನೈತಿಕ ದಾರಿ ತೋರಿಸುವುದು ಹಾಗೂ ಸಮಾಜಮುಖಿ ಚಿಂತನೆ ರೂಢಿಸುವುದೇ ಗುರುಗಳ ನಿಜವಾದ ಹೊಣೆಗಾರಿಕೆ' ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ ಅಭಿಪ್ರಾಯಪಟ್ಟರು.


ತಾಲ್ಲೂಕಿನ ತಳಕಲ್ ಗ್ರಾಮದಲ್ಲಿರುವ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಗೌರವ ಸಲ್ಲಿಸಿ ಅವರು ಮಾತನಾಡಿದರು. ಇಂದಿನ ಯುಗದಲ್ಲಿ ವಿದ್ಯಾರ್ಥಿಗಳು ಜ್ಞಾನವಷ್ಟೇ ಅಲ್ಲ, ಜೀವನೋಪಾಯದ ಕೌಶಲಗಳನ್ನು ಕಲಿಯಬೇಕಿದೆ. ಅದನ್ನು ಸಾಧಿಸಲು ಶಿಕ್ಷಕರು ವಿದ್ಯಾರ್ಥಿಗಳೊಂದಿಗೆ ಸ್ನೇಹಪೂರ್ಣವಾಗಿ ಬೆರೆತು, ಹೊಸ ತಂತ್ರಜ್ಞಾನ ಮತ್ತು ಸಮಾಜದ ಅಗತ್ಯಗಳಿಗೆ ತಕ್ಕಂತೆ ಪಾಠ ಮಾಡಬೇಕು. ಗುರುಗಳು ವಿದ್ಯಾರ್ಥಿಗಳಲ್ಲಿ ಜವಾಬ್ದಾರಿಯುತ ನಾಗರಿಕರ ಗುಣ ಬೆಳೆಸಿದರೆ, ದೇಶದ ಭವಿಷ್ಯ ಭದ್ರವಾಗುತ್ತದೆ' ಎಂದರು.

### ಸ್ನೇಹಸಿರಿ ಗೆಳೆಯರ ಬಳಗದಿಂದ ಭಾರತೀಯ ನೌಕಾಪಡೆಯ ಗೆಳೆಯನಿಗೆ ಗೌರವ ಸನ್ಮಾನ

• **ಉದಯವಾಹಿನಿ**

ಆತ್ಮೀಯ ಪ್ರೌಢಶಾಲಾ 2006 ವರ್ಷದ 10,ನೇ ತರಗತಿ ಇ ವಿಭಾಗ ಗೆಳೆಯ ಶ್ರೀ ಪ್ರಮೋದ್ ನಿಂಗಪ್ಪ ಖೇಡದವರು. ತಮ್ಮ ಪದವಿಪೂರ್ವ ಶಿಕ್ಷಣ ಪಡೆದ ನಂತರ ಪ್ರಥಮ ಪ್ರಯತ್ನದಲ್ಲಿಯೇ ಭಾರತೀಯ ವಾಯುನೆಲೆ ವಿಭಾಗದ ಸೇನಾ ಭರ್ತಿಯಲ್ಲಿ ಆಯ್ಕೆಯಾಗಿ ಸುದೀರ್ಘ 15 ವರ್ಷಗಳ ಸೇವೆ ಹಾಗೂ ND ಮುಂಬೈ ಉನ್ನತ ಹುದ್ದೆ ಸಲ್ಲಿಸಿ ಜುಲೈ 30 2025 ರಂದು ತಮ್ಮ ಸೇವಾ ನಿವೃತ್ತಿ ಹೊಂದಿದ್ದು. ಅವರ ಸೇವಾ ನಿವೃತ್ತಿಯ ನಂತರದ ಅವರ ಜೀವನ ಸುಖಕರವಾಗಿರಲೆಂದು ಗೌರವ ಸನ್ಮಾನದೊಂದಿಗೆ ಹಾರೈಸಿ. ಹಾಗೂ ಇದೆ ಸಂಧರ್ಭದಲ್ಲಿ ಭಾಗವಹಿಸಿದ ಗೆಳೆಯ ವಿಜಯಪುರ ಸಾರಿಗೆ ಅಧಿಕಾರಿ (RTO) ಶ್ರೀ ವಾಸಿಂಬಾಬಾ ಮುದ್ದೇಬಿಹಾಳ ಸನ್ಮಾನಿಸಿ ಗೌರವಿಸಲಾಯಿತು.

ಗೆಳೆಯರ ಬಳಗ ಸದಸ್ಯರಾದ. ವಿಜಯ ಮುರಾಳ, ಮಹೇಶ ಬಿರಾದಾರ,ವಿನೋದ ಯರಗಲ್ಲ,ಸಂಗಮೇಶ ಅಂಗಡಿ,ಮಂಜು ಕೋಳೂರ, ಅಮಿನಾಸ ಭಾವಿಮನಿ,ಶಮಸುದ್ದಿನ ಮುನಶಿ,ಮಹೇಶ ಕೋಡಕಲ್,ಚಂದ್ರಶೇಖರ ಬಿರಾದಾರ, ಸಾಬಣ್ಣ ಕುಂಬಾರ ,ಹಾಗೂ ಶರಣು ಸಾಲವಾಡಗಿ ಕುಟುಂಬದ ಸದಸ್ಯರು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

### ಯುವಪೀಳಿಗೆಯ ಭವಿಷ್ಯ ಶಿಕ್ಷಕರ ಕೈಯಲ್ಲಿದೆ: ಶಾಸಕ ರಾಜೇಗೌಡ

• **ಉದಯವಾಹಿನಿ ಕೊಪ್ಪ**

ಯುವಪೀಳಿಗೆಯ ಭವಿಷ್ಯ ಶಿಕ್ಷಕರ ಕೈಯಲ್ಲಿದೆ. ಶಿಕ್ಷಕರು ದೀಪ ಇದ್ದಂತೆ, ಹಿಂದಿನಂತೆ ಇಂದು ಮಕ್ಕಳಿಗೆ ಶಿಕ್ಷಣ ನೀಡುವುದು ಕಷ್ಟವಿಲ್ಲ, ನೈತಿಕತೆಯ ಶಿಕ್ಷಣ ನೀಡಬೇಕಿದೆ' ಎಂದು ಶಾಸಕ ಟಿ.ಡಿ.ರಾಜೇಗೌಡ ಹೇಳಿದರು. ಪಟ್ಟಣದ ಪುರಭವನದಲ್ಲಿ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ ಅವರು ಮಾತನಾಡಿ, 'ಸರ್ಕಾರದ ಐದು ಗ್ಯಾರಂಟಿಗಳಿಂದ ಸಂಕಷ್ಟ ದೂರವಾಗಿದೆ. ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ತರಗತಿ ತೆರೆಯಲು ಸರ್ಕಾರ ಮುಂದಾಗಿದೆ. ರಾಜ್ಯದಲ್ಲಿ 500ಕ್ಕೂ ಹೆಚ್ಚು ಕೆಪಿಎಸ್ ಶಾಲೆಗಳನ್ನು ತೆರೆಯುವುದರ ಮೂಲಕ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗುತ್ತಿದೆ' ಎಂದರು.

ಉಪನ್ಯಾಸ ನೀಡಿದ ಕಳಸಾಪುರ ಪದವಿ ಕಾಲೇಜಿನ ಪ್ರಾಚಾರ್ಯ ಎಚ್.ಎಂ.ನಾಗರಾಜ್ ರಾವ್ ಕಲ್ಕಟ್ಟೆ, 'ವಿದ್ಯಾರ್ಥಿಗಳು ಬದುಕು ಕಟ್ಟಿಕೊಳ್ಳುವ ಜತೆಗೆ ಉತ್ತಮ ಸಮಾಜ ನಿರ್ಮಾಣವಾಗುವ ನಿಟ್ಟಿನಲ್ಲಿ ಶಿಕ್ಷಕರು ನೈತಿಕ ಶಿಕ್ಷಣ ನೀಡಬೇಕು. ಉತ್ತಮ ವ್ಯಕ್ತಿಯನ್ನಾಗಿ ರೂಪಿಸಿ ಸಮಾಜಕ್ಕೆ ಕೊಡುಗೆ ನೀಡುವುದು ಶಿಕ್ಷಕರ ಜವಾಬ್ದಾರಿ. ಶಿಕ್ಷಕರು ಮಕ್ಕಳ ಜತೆಯಲ್ಲಿ ಮಕ್ಕಳಾಗಿ ಬೆರೆತು ಇಚ್ಛಾಶಕ್ತಿ, ಜ್ಞಾನಶಕ್ತಿ ಹಾಗೂ ಕ್ರಿಯಾ ಶಕ್ತಿಗಳನ್ನು ಬಳಸಿ ಶಿಕ್ಷಣ ನೀಡಿದ್ದಲ್ಲಿ ಮಕ್ಕಳು ಗುಣಾತ್ಮಕವಾಗಿ ರೂಪುಗೊಳ್ಳುತ್ತಾರೆ' ಎಂದರು.

### ಸತ್ತವರ ಹೆಸರಲ್ಲೂ ಪಡಿತರ ಚೀಟಿ 12.68 ಲಕ್ಷ ಸಂಶಯಾಸ್ಪದ ಚೀಟಿ ಪತ್ತೆ

• **ಉದಯವಾಹಿನಿ ಹುಬ್ಬಳ್ಳಿ**

ರಾಜ್ಯದಲ್ಲಿ ಪಡಿತರ ಚೀಟಿ ಪಡೆಯಲು ಅರ್ಹರಲ್ಲದ 12.68 ಲಕ್ಷ ಕುಟುಂಬಗಳು ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳನ್ನು ಪಡೆದಿವೆ. ಸತ್ತವರ ಹೆಸರಲ್ಲೂ ಪಡಿತರ ಚೀಟಿ ನೀಡಲಾಗಿದೆ. ಆಹಾರ ಇಲಾಖೆಯ ಇತ್ತೀಚಿನ ಸಮೀಕ್ಷೆಯಲ್ಲಿ ಇವು ಬೆಳಕಿಗೆ ಬಂದಿವೆ. ಸರ್ಕಾರಿ ಉದ್ಯೋಗದಲ್ಲಿರುವ, ರಾಷ್ಟ್ರೀಯ–ಬಹುರಾಷ್ಟ್ರೀಯ ಕಂಪನಿಯಲ್ಲಿ ಉನ್ನತ ಹುದ್ದೆಯಲ್ಲಿರುವ, ಆದಾಯ ತೆರಿಗೆ ಪಾವತಿಸುವ ಹೀಗೆ ಮಾನದಂಡಗಳನ್ನು ಮೀರಿದ ಶ್ರೀಮಂತ ಕುಟುಂಬದವರು ಪಡಿತರ ಚೀಟಿ ಪಡೆದಿದ್ದಾರೆ. ಸಾರ್ವಜನಿಕರ ದೂರಿನ ಮೇರೆಗೆ ಸಮೀಕ್ಷೆ ನಡೆಸಿದ ಇಲಾಖೆ, 12 ವಿಭಾಗಗಳಲ್ಲಿ ಅನರ್ಹ ಪಡಿತರ ಚೀಟಿದಾರರ ಕುಟುಂಬಗಳನ್ನು ಗುರುತಿಸಿದೆ. ಇದರ ಅಂಕಿ–ಅಂಶಗಳ ಮಾಹಿತಿ ಲಭ್ಯವಾಗಿದೆ.

ತಮಿಳುನಾಡು, ಆಂಧ್ರಪ್ರದೇಶ, ಒಡಿಶಾ, ಮಹಾರಾಷ್ಟ್ರ, ಉತ್ತರ ಪ್ರದೇಶ ಸೇರಿ ಕೆಲ ರಾಜ್ಯಗಳ 57,864 ಕುಟುಂಬಗಳಿಗೆ ಪಡಿತರ ಚೀಟಿ ವಿತರಿಸಲಾಗಿದೆ. ಅವರಲ್ಲಿ 73,859 ಫಲಾನುಭವಿಗಳು ಪ್ರತಿ ತಿಂಗಳು ಅಕ್ಕಿ, ಗೋಧಿ, ಬೇಳೆ–ಕಾಳು ನ್ಯಾಯಬೆಲೆ ಅಂಗಡಿಗಳಲ್ಲಿ ಪಡೆಯುತ್ತಾರೆ. 1,446 ಪಡಿತರ ಚೀಟಿಗಳು ಮೃತರ ಹೆಸರಲ್ಲಿದ್ದು, ಅವರ ಪರ ಸಂಬಂಧವಿಲ್ಲದ 1,452 ಮಂದಿ ಪಡಿತರ ದಿನಸಿಗಳನ್ನು ಪ್ರತಿ ತಿಂಗಳು ಪಡೆಯುತ್ತಾರೆ. ವಾರ್ಷಿಕ 25 ಲಕ್ಷ ವಹಿವಾಟು ಮೀರಿ ವ್ಯವಹಾರ ನಡೆಸುವ 2,684 ಕುಟುಂಬಗಳು ಮತ್ತು 1.20 ಲಕ್ಷ ಆದಾಯ ಮೀರಿದ 5,13,613 ಕುಟುಂಬಗಳು ಪಡಿತರ ಚೀಟಿ ಹೊಂದಿವೆ. ಪಿಎಂ ಕಿಸಾನ್ ಯೋಜನೆಯಡಿ ನೋಂದಾಯಿತ 7.5 ಎಕರೆ ಕೃಷಿ ಜಮೀನು ಹೊಂದಿದ 33,456 ಕುಟುಂಬಗಳು ಮತ್ತು 18 ವರ್ಷಕ್ಕಿಂತ ಕೆಳಗಿರುವ ಏಕ ಸದಸ್ಯರು ಇರುವ 731 ಕುಟುಂಬಗಳು ಪಡಿತರ ಚೀಟಿ ಬಳಸುತ್ತಿವೆ. ಸ್ವಂತ ಬಳಕೆಗೆ ವಾಹನವುಳ್ಳ 119 ಕುಟುಂಬಗಳು ಎಪಿಎಲ್ ಮತ್ತು ಬಿಪಿಎಲ್ ಚೀಟಿಗಳನ್ನು ಪಡೆದು, ಪಡಿತರ ಸೌಲಭ್ಯಗಳನ್ನು ಪಡೆಯುತ್ತಿವೆ.

# ಸಹಕಾರ ಸಂಘದ ಚುನಾವಣೆ: 12ಸ್ಥಾನಗಳಿಗೆ 30ಜನ ಚುನಾವಣಾ ಕಣದಲ್ಲಿ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಶಾಧಿಪೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 12ಸ್ಥಾನಗಳಿಗೆ ನಡೆಯುವ ಚುನಾವಣೆಯಲ್ಲಿ 30ಜನ ಕಣದಲ್ಲಿದ್ದು ಎರಡು ನಾಮಪತ್ರ ತೀರಸ್ಕೃತಗೊಂಡಿದ್ದು 15ಜನ ಹಿಂಪಡೆದಿದ್ದಾರೆ, ಒಬ್ಬರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಜೀವನ ಧನಕರ್ ತಿಳಿಸಿದ್ದಾರೆ.

**ಚುನಾವಣಾ ಕಣದಲ್ಲಿದ್ದವರು:** ಸಾಲಗಾರರ ಸಾಮಾನ್ಯ ಕ್ಷೇತ್ರಕ್ಕೆ ಗೋಪಾಲ ಭದ್ರು,ಗೌತಮ್ ವೈಜೀನಾಥ ಪಾಟೀಲ,ಘಟ್ಟುಲ ಗುಂಡಪ್ಪ ನಾಯಕ, ಚಂದ್ರು ಚಿಂಗು,ಚಂದ್ರು ಶಂಕರ,ಜನಾರ್ಧನ ತುಕ್ಕರಾಮ,ತುಕ್ಕರಾಮ ಪುನು,ಪತ್ತಿನಾರಾಯಗ ಭಜ್ಜು, ಮಧುಕರಾವ ವೆಂಕಟರಾವ,ರಮೇಶ ಕಿಶನ,ರಾಮಚಂದ್ರ ಕಿಶನ,ರಾಮಶೇಟ್ಟಿ ರೂಪ್ಲಾ,ಲಕ್ಷ್ಮಿಭಾಯಿ ಲಕಮು, ಶಂಕರ ಅಂಬ್ರು,ಶ್ರೀನಂದರೆಡ್ಡಿ ಪುರೋಷೊತ್ತಮ್, ಶ್ರೀನಿವಾಸ ನರಸಿಂಹಮ್ಲು ಕಣದಲ್ಲಿದ್ದಾರೆ.

ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದಲ್ಲಿ: ಸೇಪ್ಪ ಭೀಮಯ್ಯ,ಶಹಜೀರಾವ ವಿಠ್ಠಲರಾವ ಕಣದಲ್ಲಿದ್ದಾರೆ.


ಉದಯವಾಹಿನಿ ಚಿತ್ರ

**ಸಾಲಗಾರರ ಹಿಂದುಳಿದ ವರ್ಗ ಅ ಕ್ಷೇತ್ರಕ್ಕೆ:-** ರಾಮುಲು ಅಶೋಕ,ರಾಮಲು ಚಂದ್ರಪ್ಪ,ಕಣದಲ್ಲಿದ್ದಾರೆ.

**ಸಾಲಗಾರರ ಹಿಂದುಳಿದ ವರ್ಗ ಬ ಕ್ಷೇತ್ರಕ್ಕೆ:-** ಸಾವಿತ್ರಿಬಾಯಿ ಬಾಬುರಾವ,ಸುಧಾಕರ ವಿಠ್ಠಲರಾವ, ಕಣದಲ್ಲಿದ್ದಾರೆ.

**ಸಾಲಗಾರರ ಮಹಿಳಾ ಕ್ಷೇತ್ರಕ್ಕೆ:-** ಪುಷ್ಪಾ ತುಳಜಪ್ಪ,ರಮಶಿಬಾಯಿ ರಾಮಜೀ,ಲೀಲಾಬಾಯಿ ವಿಠ್ಠಲ,ಸೇಮತಾಬಾಯಿ ಪ್ರೇಮ,ಕಣದಲ್ಲಿದ್ದಾರೆ.

**ಸಾಲಗಾರರ ಪರಿಶೀಷ್ಟ ಜಾತಿ ಕ್ಷೇತ್ರಕ್ಕೆ:-** ಗೋಪಾಲ ಲೋಕು,ದಶರಥ ಚಂದ್ರಯ್ಯ,ಹೇಮಂತ ದೇವದಾಸ ಕಣದಲ್ಲಿದ್ದಾರೆ ಎಂದು ಚುನಾವಣಾಧಿಕಾರಿ ಜೀವನ ಧನಕರ್ ಹಾಗೂ ಸಂಘದ ಸಿಇಓ ಸಂಗಮೇಶ ಕಲ್ಲಾ ತಿಳಿಸಿದ್ದಾರೆ. ಸೆ.06ರಂದು ನಾಮಪತ್ರ ಹಿಂಪಡೆಯಲು 03ಗಂಟೆಯವರೆಗೆ ಸಮಯ ನಿಗಧಿ ಪಡಿಸಿರುವುದರಿಂದ ಅನೇಕ ರಾಜಕೀಯ ಮುಖಂಡರು ಬಹಳಷ್ಟು ಕಸರತ್ತು ನಡೆಸಿ ಅನೇಕರಿಗೆ ನಾಮಪತ್ರ ಹಿಂಪಡೆಯುವಂತೆ ಮನವಿ ಮಾಡುವುದು ಕಂಡುಬಂತು. ಸೆಪ್ಟೆಂಬರ್ 12ರಂದು ಚುನಾವಣೆ ನಡೆಯಲಿದ್ದು ಅಂದೆ ಚುನಾವಣೆ ಫಲಿತಾಂಶ ಹೊರಬಿಳಲಿದೆ.

ಶಾಧಿಪೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ 48ಜನ ನಾಮಪತ್ರ ಸಲ್ಲಿಕೆ ಮಾಡಿರುವುದರಿಂದ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳ ಅನೇಕ ಮುಖಂಡರು ನಾಮಪತ್ರ ಸಲ್ಲಿಕೆ ಮಾಡಿರುವ ಅಭ್ಯರ್ಥಿಗಳಿಗೆ ಮನವೊಲಿಸುವ ಕಸರತ್ತು ನಡೆಸಿ ಸುಮಾರು 15ಜನರಿಗೆ ಹಿಂಪಡೆಯುವಂತೆ ಮಾಡಿದ್ದಾರೆ.

# ಉದ್ಯೋಗದಲ್ಲಿ ಆತ್ಮೀಯ ಭಾವನೆ ಇರಲಿ:ಜೋಶಿ

• **ಉದಯವಾಹಿನಿ, ತಾಳಿಕೋಟೆ**

ಯಾವದೇ ವ್ಯಾಪಾರವಾಗಲಿ ಉದ್ಯೋಗವನ್ನಾಗಲಿ ಸೃಷ್ಟಿಸಿಕೊಂಡು ವ್ಯವಸ್ಥಿತವಾಗಿ ನಡೆಸಿಕೊಂಡು ಹೋಗಬೇಕಾದರೆ ಎಲ್ಲ ಜನರೊಂದಿಗೆ ಸಹಕಾರ ಮನೋಭಾವನೆಯೆಂಬುದನ್ನು ತೋರುವುದು ಅಗತ್ಯವಾಗಿದೆ ಇದರಿಂದ ಸಂಭಂದಿಸಿ ಪ್ರಾರಂಭಿಸಲಾದ ಉದ್ಯೋಗ ವ್ಯವಸಾಯಕ್ಕೆ ಅನುಕೂಲವಾಗಲಿದೆ ಎಂದು ಸ್ಥಳೀಯ ಶ್ರೀ ಶಿವಭವಾನಿ ಮಂದಿರದ ಅರ್ಚಕರಾದ ವೇ|| ಸಂತೋಷ ಭಟ್ ಜೋಷಿ ಅವರು ನುಡಿದರು.

ಶುಕ್ರವಾರರಂದು ಮಾರ್ಕೆಟ್ ಯಾರ್ಡನಲ್ಲಿಯ ವಿಠ್ಠಲಸಿಂಗ್ ಹಜೇರಿ ಅವರ ಮೇಲ್ಛಾವಣಿಯಲ್ಲಿ ಪ್ರಾರಂಭಿಸಲಾದ ಲೆಕ್ಕ ಪರಿಶೋಧಕರ ಕಛೇರಿ ಉದ್ಘಾಟನಾ ಕಾರ್ಯಕ್ರಮವನ್ನು ಶ್ರೀ ಮಹಾಲಕ್ಷ್ಮೀ, ಮಹಾಸರಸ್ವತಿಯ ಮಹಾಪೂಜೆಯನ್ನು ಪ್ರಾರಂಭಿಸಿ ಮಾತನಾಡುತ್ತಿದ್ದ ಅವರು ಈ ಒಂದು ಕಛೇರಿಯ ಸಂಭಂದಿಸಿದ ಚಾರ್ಟೆಡ್ ಅಕೌಟೆಂಟ್‌ರಾದ ಜ್ಯೋತಿಬಾ ಕೋಡಗೆ ಅವರು ಈ ಕಾರ್ಯದಲ್ಲಿ ನುರಿತವರಾಗಿದ್ದಾರೆ ಅವರು ಮಾಡಿದಂತಹ ಈ ಕಾರ್ಯ ಗುಣಗಾನದಾಯಕವಾಗಿದೆ ಈ ಸೇವೆ ಈಭಾಗದ ವ್ಯಾಪಾರಸ್ಥರಿಗೆ ಹಾಗೂ ಉದ್ಯೋಗಸ್ಥರಿಗೆ ಎಲ್ಲರಿಗೂ ಲಭ್ಯವಾಗಲಿ ಎಂದರು.


ಉದಯವಾಹಿನಿ ಚಿತ್ರ

ಇನ್ನೋರ್ವ ಚಾರ್ಟೆಡ್ ಅಕೌಂಟೆಂಟರಾದ ಜ್ಯೋತಿಬಾ ಕೋಡಗೆ ಅವರು ಲೆಕ್ಕ ಪರಿಶೋಧಕರ ಕಛೇರಿ ಪ್ರಾರಂಭಿಸಿದ್ದರ ಕುರಿತು ಹಾಗೂ ಈ ಕಚೇರಿಯಿಂದ ಕಾರ್ಯ ನಿರ್ವಹಿಸುವಂತಹ ಇನ್‌ಕಮ್‌ಟ್ಯಾಕ್ಸ್, ಜಿಎಸ್‌ಟಿ, ಬ್ಯಾಂಕಿಂಗ್ ಇನ್ ವೆಸ್ಟಮೆಂಟ್ ಮತ್ತು ಮ್ಯಾನೇಜಿಂಗ್ ಕನ್ಸಂಟ್ಸ್ ಸೇವಾ ಕಾರ್ಯ ಕುರಿತು ವಿವರಿಸಿದರು.

# ಪ್ರವಾಹದಿಂದ ಬೆಳೆ ನಷ್ಟ: ಪರಿಹಾರ ನೀಡಿ

• **ಉದಯವಾಹಿನಿ, ಮೂಡಲಗಿ**

ಘಟಪ್ರಭಾ ನದಿಯ ಪ್ರವಾಹದಿಂದ ರೈತರು ಬೆಳೆದ ಕೋಟ್ಯಂತರ ಮೌಲ್ಯದ ಬೆಳೆಗಳು ನೀರು ಪಾಲಾಗಿದ್ದು, ವಿದ್ಯುತ್ ಪರಿಕರಗಳು, ರಸ್ತೆಗಳು ಹಾಳಾಗಿದ್ದು ರೈತರು ಆರ್ಥಿಕ ಸಂಕಷ್ಟದಲ್ಲಿದ್ದಾರೆ. ರಾಜ್ಯ ಸರ್ಕಾರವು ಕೂಡಲೇ ಎಸ್‌ಡಿಆರ್‌ಎಫ್ ನಿಧಿಯ ಜೊತೆಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಸಂತ್ರಸ್ತರ ರೈತರ ನೆರವಿಗೆ ಕ್ರಮ ತೆಗೆದುಕೊಳ್ಳಬೇಕು' ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಆಗ್ರಹಿಸಿದರು.

ತಾಲ್ಲೂಕಿನ ಘಟಪ್ರಭಾ ನದಿ ತೀರದ ಪ್ರವಾಹ ಪೀಡಿತ ಅವರಾದಿ, ಅರಳಿಮಟ್ಟಿ, ಢವಳೇಶ್ವರ ಹಾಗೂ ಮಸಗುಪ್ಪಿ ಗ್ರಾಮಗಳಿಗೆ ಶುಕ್ರವಾರ ಭೇಟಿ ನೀಡಿ ಪ್ರವಾಹದಿಂದ ಉಂಟಾದ ಹಾನಿಗಳನ್ನು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲಿಸಿ ಅವರು ಮಾತನಾಡಿರು. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಒಟ್ಟು 7.25 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ.


ಉದಯವಾಹಿನಿ ಚಿತ್ರ

ಧಾರಾಕಾರ ಮಳೆ ಹಾಗೂ ನದಿಗಳ ಪ್ರವಾಹದಿಂದ ಜಿಲ್ಲೆಯಲ್ಲಿ ಪ್ರಾಥಮಿಕ ವರದಿ ಪ್ರಕಾರ ಸುಮಾರು 55 ಸಾವಿರ ಹೆಕ್ಟೇರ್ ಪ್ರದೇಶದಲ್ಲಿನ ಕೃಷಿ ಬೆಳೆ ಹಾನಿಗೀಡಾಗಿದೆ. ನದಿತೀರದಲ್ಲಿದ್ದ 10 ಸಾವಿರ ಹೆಕ್ಟೇರ್ ಪ್ರದೇಶದಲ್ಲಿನ ಕಬ್ಬು, 31,970 ಹೆಕ್ಟೇರ್ ಹೆಸರು, 12 ಸಾವಿರ ಹೆಕ್ಟೇರ್ ಗೋವಿನ ಜೋಳ, 3500 ಹೆಕ್ಟೇರ್ ಪ್ರದೇಶದಲ್ಲಿನ ಸೋಯಾಬಿನ್ ಬೆಳೆ ಹಾನಿಗೀಡಾಗಿದೆ. 11 ಸಾವಿರ ಹೆಕ್ಟೇರ್ ಭತ್ತ ಸೇರಿದಂತೆ ಇತರೆ ಬೆಳೆ ನೀರುಪಾಲಾಗಿವೆ ಹಾಗೂ 1,545 ಹೆಕ್ಟೇರ್‌ಕ್ಕಿಂತ ಅಧಿಕ ತೋಟಗಾರಿಕೆ ಬೆಳೆಗಳು ಹಾನಿಗೀಡಾಗಿವೆ ಎಂದು ತಿಳಿಸಿದರು.

# ಹಸಿದವರಿಗೆ ತುತ್ತು ಅನ್ನ ನೀಡಿದರೆ ಅದು ನಿಜವಾದ ಸೇವೆ: ಡಾ.ಮಣ್ಣೂರ

• **ಉದಯವಾಹಿನಿ, ಶಹಾಬಾದ್**

ಪ್ರತಿಫಲಾಪೇಕ್ಷೆ ಇಲ್ಲದೆ ಸಮಾಜ ಅಥವಾ ದೇಶದ ಸೇವೆ ಮಾಡುವುದು, ದೀನ ದುರ್ಬಲರಿಗೆ ಅಗತ್ಯ ಕೆಲಸ ಮಾಡುವುದು, ಹಸಿದವರಿಗೆ ತುತ್ತು ಅನ್ನ ನೀಡಿದರೆ ಅದು ನಿಜವಾದ ಸೇವೆ, ಸೇವೆಯು ಪರಮ ಪವಿತ್ರ, ಜನರಲ್ಲಿ ಸ್ವಚ್ಛ–ಪ್ರಾಮಾಣಿಕ ಮನಸ್ಸಿನ ಸೇವೆಯನ್ನು ಮಾಡಬೇಕು ಅದೇ ಧರ್ಮ, ಎಲ್ಲರ ಜೊತೆ ಸಹೋದರ ಭಾವದಿಂದ ಹಬ್ಬ ಆಚರಣೆ ಮಾಡುವುದು ಪರಮ ಮಂತ್ರವಾಗಿದೆ ಎಂದು ಮಣ್ಣೂರ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆಯ ಮುಖ್ಯಸ್ಥ ಡಾ.ಫಾರುಕ್ ಅಹ್ಮದ ಮಣ್ಣೂರ ಹೇಳಿದರು.

ಶಹಾಬಾದ ಪಟ್ಟಣದ ಸಹಾರಾ ಸಭಾಗೃದಲ್ಲಿ 1500ನೇ ಈದ್ ಮಿಲಾದ್ ಉನ್ ನಬಿ ಪ್ರಯುಕ್ತ ಕಲಬುರಗಿಯ ಮಣ್ಣೂರ ಆಸ್ಪತ್ರೆ, ತಾಲೂಕ ಮುಸ್ಲಿಂ ಫೊ?ರಂ ವತಿಯಿಂದ ಉಚಿತ ರಕ್ತದಾನ ಶಿಬಿರ ಹಾಗೂ ಬಡ ವಿಧವೆಯರಿಗೆ ಉಚಿತ ಹೊಲಿಗೆ ಯಂತ್ರ ವಿತರಣೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡುತ್ತ, ಪ್ರತಿಯೊಂದು ಧರ್ಮವು ಬಡವನಿಗೆ ಅನ್ನ, ವಸ್ತ್ರ ಇಲ್ಲದವನಿಗೆ ವಸ್ತ್ರ ರೋಗಿಗೆ ಚಿಕಿತ್ಸೆ, ಅನಾಥರಿಗೆ ಆಶ್ರಯ ನೀಡುವದೆ ಆಗಿದೆ. ಈ ಸೇವೆ ಜಾತಿ ಆಧಾರದ ಮೇಲೆ ಮಾಡದೆ, ಮಾನವೀಯತೆ ಆಧಾರ ಮೇಲೆ ಮಾಡಬೇಕೆಂದು ಹೇಳಿ, ಸಂವಿಧಾನ ನಮಗೆ ಶಿಕ್ಷಣದ ಹಕ್ಕು ಕೊಟ್ಟಿದ್ದು, ಪ್ರತಿಯೊಬ್ಬರು, ವಿಶೇಷವಾಗಿ ಮಹಿಳೆಯರು ಶಿಕ್ಷಣ ಪಡೆಯಬೇಕು ಎಂದು ಹೇಳಿದರು. ವಯಕ್ತಿವಾಗಿ ಸುಕನ್ಯಾ ಸಮೃದ್ದಿ ಯೋಜನೆ ಅಡಿಯಲ್ಲಿ 650 ಜನ ಬಡ ಹೆಣ್ಣುಮಕ್ಕಳಿಗೆ ನೊಂದಣಿ ಮಾಡಿಸಿದ್ದು, 700 ಬಡ ರೋಗಿಗಳಿಗೆ ಅಸ್ಪತ್ರೆಯಿಂದ ದತ್ತು ಪಡೆದಿದ್ದೇನೆ, ಆಸ್ಪತ್ರೆಯಲ್ಲಿ ಮಧುಮೇಹ, ಬಿಪಿ, ಎಚ್‌ಐವಿಯನ್ನು ಉಚಿತವಾಗಿ ತಪಾಸಣೆ ನಡೆಸಲಾಗುತ್ತಿದೆ ಎಂದು ಹೇಳಿ, ಬಡ ವಿಧವಾ ಮಹಿಳೆಯರು ಸ್ವಾವಲಂಬನ ಜೀವನ ಸಾಗಿಸಲು 20 ಜನ ಮಹಿಳೆಯರಿಗೆ ಉಚಿತ ಹೊಲಿಗೆ ಯಂತ್ರ ವಿತರಿಸುತ್ತಿದ್ದು, ಅವಶ್ಯಕತೆ ಇದ್ದಲ್ಲಿ ಇನ್ನೂ ಹೆಚ್ಚಿನ ಯಂತ್ರ ನೀಡುವದಾಗಿ ಹೇಳಿದರು.

ಜಾಮಿಯಾ ಮಸ್ಜಿದ ಇಮಾಮ್ ಅಬ್ದುಲ್ ಖದೀರ್ ಸಾಬ್ ರಶೀದಿ, ಡಿವೈಎಸ್‌ಪಿ ಶಂಕರಗೌಡ ಪಾಟೀಲ ಮಾತನಾಡಿದರು.


ಉದಯವಾಹಿನಿ ಚಿತ್ರ

> ಪ್ರತಿಯೊಂದು ಧರ್ಮದ ಸಾರ ಒಂದೇಯಾಗಿದೆ ಸೌಹಾರ್ದತೆಯಿಂದ ಒಟ್ಟೊಟ್ಟಿಗೆ ಬಾಳುವುದು, ಮಹಮ್ಮದ ಪೈಂಗಬರರು ಒಳ್ಳೆಯ ವಿಚಾರದಿಂದಾಗಿ ಮುಸ್ಲಿಂ ಧರ್ಮ ಜಗತ್ತಿನಲ್ಲಿ ಅತಿ ಹೆಚ್ಚು ಸಂಖ್ಯೆಯಲ್ಲಿ ಪಸರಿಸಿದೆ, ದೇಶದ ಶ್ರೇಷ್ಠ ಧರ್ಮವೇ ಸಂವಿದಾನ ಅದರ ಅಡಿಯಲ್ಲಿ ಎಲ್ಲರೂ ಸಹೋದರತೆಯಿಂದ ಪ್ರೀತಿ, ವಿಶ್ವಾಸದಿಂದ ಶಾಂತಿ, ನೆಮ್ಮದಿಯಿಂದ ಬಾಳಬೇಕು. **-ಮರಿಯಪ್ಪ ಹಳ್ಳಿ**
> ದಸಂಸ ರಾಜ್ಯ ಸಂಘಟನಾ ಸಂಚಾಲಕ

# ಬೋಧನೆಯಲ್ಲಿ ಮಾತೃ ವಾತ್ಸಲ್ಯ ಇರಲಿ: ಡಾ.ಪ್ರಭಾ ಮಲ್ಲಿಕಾರ್ಜುನ್

• **ಉದಯವಾಹಿನಿ, ದಾವಣಗೆರೆ**

ಮಾನಸಿಕ ಒತ್ತಡ, ಅನಾರೋಗ್ಯಕರ ಜೀವನ ಶೈಲಿ, ಸಾಮಾಜಿಕ ಜಾಲತಾಣ ಸೇರಿ ಹಲವು ರೀತಿಯ ಸಮಸ್ಯೆಗಳನ್ನು ವಿದ್ಯಾರ್ಥಿಗಳು ಎದುರಿಸುತ್ತಿದ್ದಾರೆ. ಅವರು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಶಿಕ್ಷಕರ ಬೋಧನೆಯಲ್ಲಿ ಮಾತೃ ವಾತ್ಸಲ್ಯವೂ ಇರಬೇಕು ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸಲಹೆ ನೀಡಿದರು. ಇಲ್ಲಿನ ಹದಡಿ ರಸ್ತೆಯ ಶಾಮನೂರು ಶಿವಶಂಕರಪ್ಪ ಸಮುದಾಯ ಭವನದಲ್ಲಿ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಏರ್ಪಡಿಸಿದ್ದ ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

'ಶಾಲೆಗೆ ಬರುವ ವಿದ್ಯಾರ್ಥಿಗಳು ಖಾಲಿ ಕ್ಯಾನ್ವಸ್ ಇದ್ದಂತೆ. ಅವರನ್ನು ರೂಪಿಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ. ಉತ್ತಮ ಶಿಕ್ಷಣ ನೀಡಿ ಬುನಾದಿ ಹಾಕುವ ಜವಾಬ್ದಾರಿಯನ್ನು ಶಿಕ್ಷಕರು ನಿರ್ವಹಿಸಬೇಕು. ಆಗ ಮಾತ್ರ ವಿದ್ಯಾರ್ಥಿಗಳು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯ' ಎಂದು ಹೇಳಿದರು.

ಶಿಕ್ಷಕರಿಗೆ ಪುಸ್ತಕವೇ ಸಂಪತ್ತು. ಆದರೆ, ಬಹುತೇಕರ ಮನೆಗಳಲ್ಲಿ ಪುಸ್ತಕ, ದಿನಪತ್ರಿಕೆಗಳೇ ಇರುವುದಿಲ್ಲ. ದೈನಂದಿನ ವಿದ್ಯಾಮಾನ ಅರಿಯದ, ಜ್ಞಾನ ಭಂಡಾರ ಹೊಂದಿರದ ವ್ಯಕ್ತಿ ಶಿಕ್ಷಕರಾಗಲು ಸಾಧ್ಯವಿಲ್ಲ. ವೈಚಾರಿಕ ಚಿಂತನೆ, ಪ್ರಯೋಗಶೀಲತೆ ಹಾಗೂ ಬಹುಶಿಸ್ತೀಯ ಅಧ್ಯಯನಕ್ಕೆ ಒಳಪಟ್ಟಾಗ ಮಾತ್ರ ಹೊಸ ಅರ್ಥ ವಿಮಾಂಸೆ ಕಟ್ಟಲು ಸಾಧ್ಯ' ಎಂದು ಪ್ರೊ.ಎ.ಬಿ. ರಾಮಚಂದ್ರಪ್ಪ ಅಭಿಪ್ರಾಯಪಟ್ಟರು. ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು 18 ಶಿಕ್ಷಕರಿಗೆ ಪ್ರದಾನ ಮಾಡಲಾಯಿತು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠಲ ರಾವ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ. ಕೊಟ್ರೇಶ್, ವೀರೇಶ್ ಎಸ್. ಒಡೆನಪುರ, ಹಾಜರಿದ್ದರು.


ಉದಯವಾಹಿನಿ ಚಿತ್ರ

> ಜಿಲ್ಲೆಯ ವಿದ್ಯಾರ್ಥಿಗಳಿಗೆ ಸಮಗ್ರ ಶಿಕ್ಷಣ ಸಿಗಬೇಕು. ಹಣಕಾಸು ಸಾಕ್ಷರತೆ, ಬಾಹ್ಯಾಕಾಶ, ವೃತ್ತಿ ಮಾರ್ಗದರ್ಶನ ಸೇರಿ ಹಲವು ರೀತಿಯ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ನೀಡುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಪ್ರಯತ್ನವೊಂದು ನಡೆಯುತ್ತಿದೆ. ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ 66ಕ್ಕೆ ನಿಂತಿರುವುದು ಬೇಸರದ ಸಂಗತಿ. ಶೇ 100ರಷ್ಟು ಫಲಿತಾಂಶ ಪಡೆದ ಶಾಲೆಯ ಮಾದರಿಯನ್ನು ಅನುಸರಿಸಬೇಕು **-ಡಾ.ಪ್ರಭಾ ಮಲ್ಲಿಕಾರ್ಜುನ್**

# ಶಿಕ್ಷಣ ವ್ಯವಸ್ಥೆಯಲ್ಲಿ ಪೈಪೋಟಿ, ಆತಂಕಕಾರಿ ಸಂಗತಿ: ಎಸ್.ಎನ್.ಚನ್ನಬಸಪ್ಪ

## ಆಸ್ತಿ ಅಂತಸ್ತು ಮನುಷ್ಯರನ್ನು ಉತ್ತಮರನ್ನಾಗಿಸಲು ಸಾಧ್ಯವಿಲ್ಲ. ಗುಣಮಟ್ಟದ ಶಿಕ್ಷಣದಿಂದ ಮಾತ್ರ ಒಳ್ಳೆಯ ವ್ಯಕ್ತಿತ್ವ ಬೆಳೆಯುತ್ತದೆ

• **ಉದಯವಾಹಿನಿ, ಶಿವಮೊಗ್ಗ**

ಶಿಕ್ಷಣ ವ್ಯವಸ್ಥೆಯಲ್ಲಿ ವಿಪರೀತ ಪೈಪೋಟಿಯ ಕಾರಣ ಖಾಸಗಿ ಮತ್ತು ಸರ್ಕಾರಿ ಕ್ಷೇತ್ರಗಳ ಸಂಘರ್ಷ ನಡೆಯುತ್ತಿದೆ. ಇದು ಆತಂಕಕಾರಿ ಸಂಗತಿ. ಇಲ್ಲಿ ಮೌಲ್ಯಯುತ ಶಿಕ್ಷಣಕ್ಕೆ ಹೆಚ್ಚು ಶಕ್ತಿ ತುಂಬುವ ಜೊತೆಗೆ ವಿಶೇಷ ರೀತಿಯ ಆಲೋಚನಾ ಕ್ರಮ ರೂಢಿಸಿಕೊಳ್ಳಬೇಕು' ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಸಲಹೆ ನೀಡಿದರು.

ಜಿಲ್ಲಾಡಳಿತ, ಶಾಲಾ ಶಿಕ್ಷಣ ಇಲಾಖೆ, ಉಪನಿರ್ದೇಶಕರ ಕಚೇರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯಿಂದ ಇಲ್ಲಿನ ಕುವೆಂಪು ರಂಗಮಂದಿರದಲ್ಲಿ ಶುಕ್ರವಾರ ಆಯೋಜಿಸಿದ್ದ 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಆಸ್ತಿ ಅಂತಸ್ತು ಮನುಷ್ಯರನ್ನು ಉತ್ತಮರನ್ನಾಗಿಸಲು ಸಾಧ್ಯವಿಲ್ಲ. ಗುಣಮಟ್ಟದ ಶಿಕ್ಷಣದಿಂದ ಮಾತ್ರ ಒಳ್ಳೆಯ ವ್ಯಕ್ತಿತ್ವ ಬೆಳೆಯುತ್ತದೆ. ಸರ್ಕಾರಿ ಶಾಲೆಗಳ ಅಸ್ತಿತ್ವ ಉಳಿಸಲು ಸರ್ಕಾರ ಕೂಡ ಶ್ರಮಿಸುತ್ತಿದ್ದು, ಕೆಲವು ಭಾಗಗಳಲ್ಲಿ ಶಾಲೆಗಳು ಮುಚ್ಚುತ್ತಿರುವುದು ಶೋಚನೀಯ. ಈ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ ಎಂದರು.

'ಸಮಾಜದ ಆಗು–ಹೋಗುಗಳನ್ನು ಶಿಕ್ಷಕರು ಸೂಕ್ಷ್ಮವಾಗಿ ನೋಡುತ್ತಾರೆ. ಸಮಾಜಕ್ಕೆ ಹೊಸ ರೂಪ ಕೊಡುವಲ್ಲಿ ಶಿಕ್ಷಕರ ಪಾತ್ರವೂ ಹಿರಿದು. ಈ ಹಿಂದಿನ ದಿನಗಳನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು. ಸದೃಢ ದೇಶ ನಿರ್ಮಾಣಕ್ಕೆ ಶಿಕ್ಷಕರ ಶ್ರಮ ಅಗತ್ಯವಿದೆ' ಎಂದು ವಿಧಾನ ಪರಿಷತ್ ಸದಸ್ಯೆ ಬಲ್ಕಿಶ್ ಬಾನು ಹೇಳಿದರು.

ಶಿಕ್ಷಣ ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸುತ್ತದೆ. ಪ್ರತಿಫಲ ಬಯಸದೆ ಸಮಾಜದ ಉದ್ಧಾರಕ್ಕೆ ಶಿಕ್ಷಕರು ಶ್ರಮಿಸುತ್ತಿದ್ದಾರೆ. ಆದ್ದರಿಂದ, ಶಿಕ್ಷಕರ ಶ್ರಮ ವ್ಯರ್ಥವಾಗಕೂಡದು ಎಂದು ಶಿವಮೊಗ್ಗ – ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಚ್.ಎಸ್.ಸುಂದರೇಶ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರು 21, ವಿಶೇಷ ಸನ್ಮಾನಿತ ಶಿಕ್ಷಕರು 22 ಹಾಗೂ ನಿವೃತ್ತಿ ಹೊಂದಿದ 86 ಶಿಕ್ಷಕರನ್ನು ಸನ್ಮಾನಿಸಲಾಯಿತು.


ಉದಯವಾಹಿನಿ ಚಿತ್ರ

**ಶಿಕ್ಷಣಕ್ಕೆ ಹೆಚ್ಚು ಶಕ್ತಿ**


### ಶಾಲೆಗಳಲ್ಲಿ ಶಿಕ್ಷಣದ ಮೌಲ್ಯ ಉಳಿದಿದೆ: ಸಿ.ಎಸ್.ಷಡಕ್ಷರಿ

ಒತ್ತಡದ ಬದುಕು ಹಾಗೂ ಕೌಟುಂಬಿಕ ಸಮಸ್ಯೆಗಳ ನಡುವೆಯೂ ಉತ್ತಮ ಸಮಾಜವನ್ನು ಕಟ್ಟುವುದು ಶಿಕ್ಷಕರಿಗೆ ದೊಡ್ಡ ಸವಾಲು. ಶಿಕ್ಷಕರ ನಿವೃತ್ತಿ ಹಾಗೂ ವರ್ಗಾವಣೆ ಸಂದರ್ಭದಲ್ಲಿ ಮಕ್ಕಳು ಕಣ್ಣೀರಾಗುವುದನ್ನು ನೋಡಿದರೆ ಸರ್ಕಾರಿ ಶಾಲೆಗಳಲ್ಲಿ ಇನ್ನೂ ಶಿಕ್ಷಣದ ಮೌಲ್ಯ ಉಳಿದಿದೆ ಅನ್ನಿಸುತ್ತದೆ' ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಕ್ಷರಿ ಹೇಳಿದರು. 'ಶಿಕ್ಷಕರು ಶೈಕ್ಷಣಿಕ ಕೆಲಸಗಳಿಗೆ ಮಾತ್ರ ಸೀಮಿತಗೊಳ್ಳದೆ ಶಿಕ್ಷಕರೇತರ ಕಾರ್ಯಗಳಲ್ಲಿಯೂ ತೊಡಗಿದ್ದಾರೆ. ಒತ್ತಡಗಳಿಗೆ ಮಣಿಯದೆ 'ಕಾಯಕವೇ ಕೈಲಾಸ' ಎಂಬ ಬಸವಣ್ಣನ ಆಶಯದಂತೆ ಕೆಲಸ ಮಾಡುತ್ತಿದ್ದಾರೆ. ಇದರಿಂದ ಶಿಕ್ಷಕರ ವೃತ್ತಿ ಗೌರವವನ್ನು ಎತ್ತಿ ಹಿಡಿಯುವ ಕಾರ್ಯ ಮಾಡುತ್ತಿದ್ದಾರೆ' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> ದೇಶದ ಉಜ್ವಲ ಭವಿಷ್ಯಕ್ಕೆ ಶಿಕ್ಷಕರ ಮಹತ್ವ ಅರಿತಿದ್ದ ರಾಧಾ ಕೃಷ್ಣನ್ ಅವರು ಮಹಾನ್ ಸಾಧಕರೊಂದಿಗೆ ಮೇಲ್ಪಂಕ್ತಿಯಲ್ಲಿ ಗುರುತಿಸಿಕೊಂಡಿದ್ದಾರೆ.
> **- ಎಸ್.ಆರ್.ಮಂಜುನಾಥ ಡಿಡಿಪಿಐ**

# 2030ರ ವೇಳೆಗೆ ಶೇ 99ರಷ್ಟು ಉದ್ಯೋಗಗಳನ್ನು ಕಸಿಯಲಿದೆ ಎಐ ತಂತ್ರಜ್ಞಾನ

## ಕೃತಕ ಬುದ್ಧಿಮತ್ತೆಯು ಶೇಕಡಾ 99ರಷ್ಟು ಉದ್ಯೋಗಿಗಳನ್ನು ನಿರುದ್ಯೋಗಿಗಳನ್ನಾಗಿ ಮಾಡಬಹುದು



**ಅಮೆರಿಕದ ವಿಜ್ಞಾನಿ ಎಚ್ಚರಿಕೆ**

**ವಾಷಿಂಗ್ಟನ್:** ಇಂದಿನ ದಿನಗಳಲ್ಲಿ ಕೃತಕ ಬುದ್ಧಿಮತ್ತೆ ಎಲ್ಲಾ ಕ್ಷೇತ್ರವನ್ನು ಆವರಿಸಿದೆ. ಇದರಿಂದ ಮುಂದಿನ ದಿನಗಳಲ್ಲಿ ಜನರ ಉದ್ಯೋಗಕ್ಕೆ ಕುತ್ತುಬರಬಹುದು ಎಂದು ಹೇಳಲಾಗುತ್ತಿದೆ. ಆದರೆ, ಮುಂದಿನ ಐದೇ ವರ್ಷದಲ್ಲಿ ಎಐ ತಂತ್ರಜ್ಞಾನ ಶೇ.99 ರಷ್ಟು ಉದ್ಯೋಗವನ್ನು ಕಬಳಿಸಲಿದೆ ಎಂದು ವಿಜ್ಞಾನಿಯೊಬ್ಬರು ಎಚ್ಚರಿಕೆ ನೀಡಿದ್ದಾರೆ. 2030ರ ವೇಳೆಗೆ ಕೃತಕ ಬುದ್ಧಿಮತ್ತೆಯು ಶೇಕಡಾ 99ರಷ್ಟು ಉದ್ಯೋಗಿಗಳನ್ನು ನಿರುದ್ಯೋಗಿಗಳನ್ನಾಗಿ ಮಾಡಬಹುದು ಎಂದು ಲೂಯಿಸ್ವಿಲ್ಲೆ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನದ ಪ್ರಾಧ್ಯಾಪಕ ರೋಮನ್ ಯಾಂಪೋಲ್ಸ್ಕಿ ಹೇಳಿದ್ದಾರೆ. ಜಗತ್ತಿನಾದ್ಯಂತದ ಕಂಪನಿಗಳು ವೆಚ್ಚವನ್ನು ಕಡಿತಗೊಳಿಸಲು, ಆದಾಯವನ್ನು ಹೆಚ್ಚಿಸಲು ಕೃತಕ ಬುದ್ಧಿಮತ್ತೆ ವ್ಯವಸ್ಥೆಗಳನ್ನು ವೇಗವಾಗಿ ಅನುಷ್ಠಾನಗೊಳಿಸುತ್ತಿರುವ ಸಮಯದಲ್ಲಿ ಈ ಎಚ್ಚರಿಕೆಯು ಹೊರಬಿದ್ದಿದೆ.

**ಯಾವೆಲ್ಲಾ ಉದ್ಯೋಗ ನಷ್ಟ?:** ಎಐ ಸುರಕ್ಷತೆಯ ತಜ್ಞರಾದ ಯಾಂಪೋಲ್ಸ್ಕಿಯ ಪ್ರಕಾರ, ಕೋಡರ್‌ಗಳು, ಪ್ರಾಂಪ್ಟ್ ಎಂಜಿನಿಯರ್‌ಗಳು ಸಹ ಮುಂಬರುವ ಯಾಂತ್ರೀಕೃತಗೊಂಡ ಅಲೆಯಿಂದ ಸುರಕ್ಷಿತವಾಗಿರುವುದಿಲ್ಲ, ಅದು ಬಹುತೇಕ ಎಲ್ಲಾ ಉದ್ಯೋಗಗಳನ್ನು ಕಸಿದುಕೊಳ್ಳಬಹುದು.

ಮಾನವನಂತಹ ಬುದ್ಧಿವಂತಿಕೆ, ಕೃತಕ ಸಾಮಾನ್ಯ ಬುದ್ಧಿವಂತಿಕೆ 2027ರ ವೇಳೆಗೆ ಬರುವ ಸಾಧ್ಯತೆಯಿದೆ. ಎಜಿಐ ಆಗಮನದ ಮೂರು ವರ್ಷಗಳ ನಂತರ, ಎಐ ಉಪಕರಣಗಳು ಮತ್ತು ಮಾನವರೂಪದ ರೋಬೋಟ್‌ಗಳು ಮನುಷ್ಯರನ್ನು ಬದಲಿಸಲಿವೆ. ಸಿಬ್ಬಂದಿಯನ್ನು ನೇಮಿಸಿಕೊಳ್ಳುವುದನ್ನು ಆರ್ಥಿಕ ವಾಗಿ ಲಾಭದಾಯಕವಲ್ಲದಂತೆ ಮಾಡುವುದರಿಂದ ಕಾರ್ಮಿಕ ಮಾರುಕಟ್ಟೆಯು ಕುಸಿಯುತ್ತದೆ.

ಕೇವಲ 20 ಡಾಲರ್ ಅಂದರೆ ಭಾರತದ 1763 ರೂ. ಚಂದಾದಾರಿಕೆ ಯೊಂದಿಗೆ ಎಐ ತಂತ್ರಜ್ಞಾನ ಉದ್ಯೋಗಿಯು ಮಾಡುವ ಎಲ್ಲಾ ಕೆಲಸಗಳನ್ನು ಮಾಡಲಿದೆ ಎಂದು ಯಾಂಪೋಲ್ಸ್ಕಿ ಹೇಳಿದರು.

**ಯಾವುದೇ ಯೋಜನೆ ಬಿ ಇಲ್ಲ:** ಉದ್ಯೋಗವು ಆದಾಯ, ರಚನೆ, ಸ್ಥಾನಮಾನ ಮತ್ತು ಸಮುದಾಯವನ್ನು ಒದಗಿಸುತ್ತದೆ ಆದಾಗ್ಯೂ, ಉದ್ಯೋಗಗಳು ಕಣ್ಮರೆಯಾದರೆ, ಸಂಘಗಳು ಎಲ್ಲಾ ನಾಲ್ಕನ್ನೂ ದೊಡ್ಡ ಪ್ರಮಾಣದಲ್ಲಿ ಉತ್ಪಾದಿಸಬೇಕಾಗುತ್ತದೆ. ಎಲ್ಲಾ ಉದ್ಯೋಗಗಳು ಸ್ವಯಂಚಾಲಿತವಾಗುತ್ತವೆ, ನಂತರ ಯಾವುದೇ ಯೋಜನೆ ಬಿ ಇಲ್ಲ. ನೀವು ಮತ್ತೆ ತರಬೇತಿ ಪಡೆಯಲು ಸಾಧ್ಯವಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಕೃತಕ ಬುದ್ಧಿಮತ್ತೆಯು ಉದ್ಯೋಗ ಮಾರುಕಟ್ಟೆಯನ್ನು ಅಡ್ಡಿಪಡಿಸಬಹುದು ಎಂದು ಪ್ರತಿಪಾದಿಸಿರುವುದು ಯಾಂಪೋಲ್ಸ್ಕಿ ಒಬ್ಬರೇ ಅಲ್ಲ. ಮೇ ತಿಂಗಳಲ್ಲಿ, ಆಂಥ್ರೊಪಿಕ್ ಸಿ. ಇ. ಒ. ಡಾರಿಯೊ ಅಮೋಡಿ, ಮುಂದಿನ ಐದು ವರ್ಷಗಳಲ್ಲಿ ಎಐ ಶೀಘ್ರದಲ್ಲೇ ಶೇಕಡಾ 50 ರಷ್ಟು ಪ್ರವೇಶ ಮಟ್ಟದ ವೈಟ್-ಕಾಲರ್ ಉದ್ಯೋಗಗಳನ್ನು ಬದಲಿಸಬಹುದು ಎಂದು ಎಚ್ಚರಿಸಿದರು. ಕೃತಕ ಬುದ್ಧಿಮತ್ತೆಯ ಹೆಚ್ಚುತ್ತಿರುವ ಬಳಕೆಯು ನಿರುದ್ಯೋಗದ ಸಂಖ್ಯೆಯಲ್ಲಿ ಗಮನಾರ್ಹ ಹೆಚ್ಚಳಕ್ಕೆ ಕಾರಣವಾಗಬಹುದು ಎಂದು ವಿಶ್ವದಾದ್ಯಂತದ ಸರ್ಕಾರಗಳು ಬೆದರಿಕೆಯನ್ನು ಕಡಿಮೆ ಮಾಡುತ್ತಿವೆ ಎಂದು ಅವರು ಹೇಳಿದ್ದಾರೆ. ಅಂತೆಯೇ, 2018 ರಲ್ಲಿ ಗೂಗಲ್ ಎಕ್ಸ್‌ನ ಮುಖ್ಯ ವ್ಯವಹಾರ ಅಧಿಕಾರಿಯಾಗಿಯಾಗಿದ್ದ ಮೊ ಗಾವ್ದತ್ ಅವರ ಪ್ರಕಾರ,, ಸಾಫ್ಟ್‌ವೇರ್ ಡೆವಲಪರ್‌ಗಳು, ಸಿಇಒಗಳು ಮತ್ತು ಪಾಡ್ಕ್ಯಾಸ್ಟರ್‌ಗಳು ಸೇರಿದಂತೆ ಯಾರನ್ನೂ ಬಿಡದೆ ಎಐ ವೈಟ್-ಕಾಲರ್ ಉದ್ಯೋಗಗಳನ್ನು ತೆಗೆದುಹಾಕುವುದರಿಂದ 2027 ರ ಹೊತ್ತಿಗೆ ಪ್ರಾರಂಭವಾಗುತ್ತದೆ ಎಂದು ಎಚ್ಚರಿಸಿದ್ದಾರೆ.

- ಲೂಯಿಸ್ವಿಲ್ಲೆ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನ ಪ್ರಾಧ್ಯಾಪಕ ರೋಮನ್ ಯಾಂಪೋಲ್ಸ್ಕಿಯ ಪ್ರಕಾರ, 2030ರ ವೇಳೆಗೆ ಕೃತಕ ಬುದ್ಧಿಮತ್ತೆ 99% ಉದ್ಯೋಗಿಗಳನ್ನು ನಿರುದ್ಯೋಗಿಗಳನ್ನಾಗಿ ಮಾಡಬಹುದು.
- ಯಾಂಪೋಲ್ಸ್ಕಿಯ ಮುನ್ಸೂಚನೆಯಂತೆ, ಕೃತಕ ಸಾಮಾನ್ಯ ಬುದ್ಧಿವಂತಿಕೆಯ ಆಗಮನದ ನಂತರ, ಎಲ್ಲಾ ಉದ್ಯೋಗಗಳು ಸ್ವಯಂಚಾಲಿತಗೊಳ್ಳಲಿವೆ.
- ಆಂಥ್ರೊಪಿಕ್ ಸಿ. ಇ. ಒ. ಡಾರಿಯೊ ಅಮೋದಿ, ಕೃತಕ ಬುದ್ಧಿಮತ್ತೆ ಮುಂದಿನ ಐದು ವರ್ಷಗಳಲ್ಲಿ 50% ಪ್ರವೇಶ ಮಟ್ಟದ ವೈಟ್-ಕಾಲರ್ ಉದ್ಯೋಗಗಳನ್ನು ಬದಲಾಯಿಸಬಹುದು ಎಂದು ಎಚ್ಚರಿಸಿದ್ದಾರೆ.

### ಉದ್ಯೋಗ ಮಾರುಕಟ್ಟೆಯು ಕುಸಿತ

ಕೃತಕ ಬುದ್ಧಿಮತ್ತೆ ತಂತ್ರಜ್ಞಾನವು ಮುಂಬರುವ ಐದು ವರ್ಷಗಳಲ್ಲಿ ಶೇ.99 ರಷ್ಟು ಉದ್ಯೋಗಗಳನ್ನು ಕಬಳಿಸಲಿದೆ ಎಂದು ವಿಜ್ಞಾನಿಯೊಬ್ಬರು ಎಚ್ಚರಿಸಿದ್ದಾರೆ. ಲೂಯಿಸ್ವಿಲ್ಲೆ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನದ ಪ್ರಾಧ್ಯಾಪಕ ರೋಮನ್ ಯಾಂಪೋಲ್ಸ್ಕಿ ಅವರ ಈ ಹೇಳಿಕೆ ಭಾರಿ ಸಂಚಲನಕ್ಕೆ ಕಾರಣವಾಗಿದೆ. 2027ರ ವೇಳೆಗೆ ಕೃತಕ ಸಾಮಾನ್ಯ ಬುದ್ಧಿಮತ್ತೆ ಬರುವ ಸಾಧ್ಯತೆಯಿದ್ದು, ಕೇವಲ 20 ಡಾಲರ್‌ಗೆ ಎಐ ತಂತ್ರಜ್ಞಾನ ಉದ್ಯೋಗಿಯ ಕೆಲಸವನ್ನು ಮಾಡಲಿದೆ. ಇದರಿಂದಾಗಿ ಉದ್ಯೋಗ ಮಾರುಕಟ್ಟೆಯು ಕುಸಿಯಲಿದ್ದು, ನಿರುದ್ಯೋಗ ಹೆಚ್ಚಾಗಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

# ಉದ್ಯಮಿಯ ಪತ್ನಿ, ಪ್ರಿಯಕರ ಸೇರಿ 8 ಮಂದಿ ವಿರುದ್ಧ ಆರೋಪಪಟ್ಟಿ

**ಶಿಲ್ಲಾಂಗ್:** ಇಂದೋರ್‌ನ ಉದ್ಯಮಿ ರಾಜಾ ರಘುವಂಶಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಪತ್ನಿ ಸೋನಮ್ ಸೇರಿದಂತೆ ಎಂಟು ಆರೋಪಿಗಳ ವಿರುದ್ಧ ಮೇಘಾಲಯ ಪೊಲೀಸರು ಆರೋಪಪಟ್ಟಿ ಸಲ್ಲಿಸಿದ್ದಾರೆ. ಸಾಕ್ಷ್ಯಾಧಾರಗಳು, ದಾಖಲೆಗಳನ್ನೊಳಗೊಂಡ 790 ಪುಟಗಳ ಆರೋಪಪಟ್ಟಿಯನ್ನು ಸೊಹ್ರಾ ಉಪ ವಿಭಾಗದ ಪ್ರಥಮದರ್ಜೆ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಎದುರು ಪೊಲೀಸರು ಹಾಜರುಪಡಿಸಿದ್ದಾರೆ ಎಂದು ಈಸ್ಟ್ ಕಾಶಿ ಹಿಲ್ಸ್ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ವಿವೈ ಸಿಯಮ್ ಹೇಳಿಕೆ ನೀಡಿದ್ದಾರೆ. ಪೊಲೀಸರ ಮಾಹಿತಿ ಪ್ರಕಾರ, ರಘುವಂಶಿ, ಸೋನಮ್ ಇದೇ ವರ್ಷ ಮೇ 1ರಂದು ವಿವಾಹವಾಗಿದ್ದರು. ಮೇಘಾಲಯದ ಸೊಹ್ರಾಗೆ ಮಧುಚಂದ್ರಕ್ಕಾಗಿ ಮೇ 21ರಂದು ತೆರಳಿದ್ದರು. ದಂಪತಿ ನಾಪತ್ತೆಯಾಗಿದ್ದಾರೆ ಎಂಬುದು ಮೇ 26ರಂದು ವರದಿಯಾಗಿತ್ತು. ಇದರ ಬೆನ್ನಲ್ಲೇ, ಕೇಂದ್ರ, ರಾಜ್ಯ ವಿಪತ್ತು ನಿರ್ವಹಣಾ ಪಡೆಗಳು, ವಿಶೇಷ ಕಾರ್ಯಾಚರಣೆ ತಂಡ, ಸ್ಥಳೀಯರ ಸಹಯೋಗದಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದವು. ರಘುವಂಶಿ ಅವರ ಶವ ಶಿಲ್ಲಾಂಗ್ ಸಮೀಪದ ಜಲಪಾತದ ಕಮರಿಯಲ್ಲಿ ಜೂನ್ 2ರಂದು ಸಿಕ್ಕಿತ್ತು.

ಸೊಹ್ರಾ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಭಾರತೀಯ ನ್ಯಾಯ ಸಂಹಿತೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ಬಳಿಕ, ವಿಶೇಷ ತನಿಖಾ ತಂಡ ರಚಿಸಲಾಗಿತ್ತು. ರಘುವಂಶಿ ಪತ್ನಿ ಸೋನಮ್‌ಗೆ ರಾಜ್ ಕುಶ್ವಾಹ ಎಂಬಾತನೊಂದಿಗೆ ಸಂಬಂಧವಿತ್ತು. ಇದೇ ಕಾರಣಕ್ಕಾಗಿ ಅವರಿಬ್ಬರೂ ಸೇರಿ, ರಘು ವಂಶಿ ಅವರನ್ನು ಮಧುಚಂದ್ರದ ವೇಳೆ ಹತ್ಯೆ ಮಾಡಲು ಸಂಚು ರೂಪಿಸಿದ್ದರು ಎಂಬುದು ತನಿಖಾಧಿಕಾರಿಗಳಿಗೆ ಗೊತ್ತಾಗಿತು. ರಘುವಂಶಿಯನ್ನು ಕಮರಿಯಲ್ಲಿ ಸೋನಮ್ ಸಮ್ಮುಖದಲ್ಲೇ ಮೂವರು ಹಂತಕರಾದ ಆಕಾಶ್ ಸಿಂಗ್ ರಜಪೂತ್, ವಿಶಾಲ್ ಸಿಂಗ್ ಚೌಹಾಣ್, ಆನಂದ್ ಕುರ್ಮಿ ಹತ್ಯೆ ಮಾಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ತನಿಖೆ ಆರಂಭವಾದ ಒಂದೇ ವಾರದಲ್ಲಿ ಸೋನಮ್‌ಸೇರಿದಂತೆ ಐವರೂ ಆರೋಪಿಗಳನ್ನು ಮಧ್ಯಪ್ರದೇಶ ಹಾಗೂ ಉತ್ತರ ಪ್ರದೇಶದಲ್ಲಿ ಪತ್ತೆ ಮಾಡಲಾಗಿತ್ತು.

# ಮತದಾರರ ಪಟ್ಟಿಯಿಂದ 65 ಲಕ್ಷ ಜನರು ಹೊರಕ್ಕೆ

## ಬಿಹಾರದಲ್ಲಿ ಅಲ್ಲೋಲ ಕಲ್ಲೋಲ ಎಬ್ಬಿಸಿರುವ ಮತದಾರರ ವಿಶೇಷ ತಪಾಸಣೆ

**ನವದೆಹಲಿ:** ಬಿಹಾರದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿರುವ ಮತದಾರರ ಗುರುತಿನ ಚೀಟಿಗಳ ವಿಶೇಷ ತೀವ್ರ ತಪಾಸಣೆ ಇದೇ ವರ್ಷಾಂತ್ಯಕ್ಕೆ ಇನ್ನಿತರ ರಾಜ್ಯಗಳಲ್ಲೂ ನಡೆಸಲು ಕೇಂದ್ರ ಚುನಾವಣಾ ಆಯೋಗ ಚಿಂತನೆ ನಡೆಸಿದೆ. ಆ ಹಿನ್ನೆಲೆಯಲ್ಲಿ ಇದೇ. 10ರಂದು ನವದೆಹಲಿಯಲ್ಲಿ ಆಯೋಗದ ಹಿರಿಯ ಅಧಿಕಾರಿಗಳು ಸಭೆ ನಡೆಸಲಿದ್ದಾರೆ ಎಂದು ಪಿಟಿಐ ವರದಿ ಮಾಡಿರುವುದಾಗಿ ಟೈಮ್ಸ್ ಆಫ್ ಇಂಡಿಯಾ ತನ್ನ ವರದಿಯಲ್ಲಿ ಹೇಳಿದೆ. 2026ರಲ್ಲಿ ಪಶ್ಚಿಮ ಬಂಗಾಳ, ಕೇರಳ, ಅಸ್ಸಾಂ, ತಮಿಳುನಾಡು, ಕೇಂದ್ರಾಡಳಿತ ಪ್ರದೇಶವಾದ ಪುದುಚ್ಚೇರಿಯಲ್ಲಿ ಚುನಾವಣೆಗಳು ನಡೆಯಲಿವೆ.

ಆ ಹಿನ್ನೆಲೆಯಲ್ಲಿ ಆ ರಾಜ್ಯಗಳಲ್ಲಿಯೂ ಮತದಾರರ ಗುರುತಿನ ಚೀಟಿಗಳ ವಿಶೇಷ ತೀವ್ರ ತಪಾಸಣೆಯನ್ನು ನಡೆಸುವ ಮೂಲಕ ಮತದಾರರ ಪಟ್ಟಿಯನ್ನು ಪರಿಷ್ಕರಣೆಗೊಳಿಸಲು ಕೇಂದ್ರ ಚುನಾವಣಾ ಆಯೋಗ, ಪ್ರಾಯಶಃ ಚಿಂತನೆ ನಡೆಸಿದೆ ಎಂದು ಹೇಳಿದೆ. ಬಿಹಾರದಲ್ಲಿ ಇತ್ತೀಚೆಗೆ ನಡೆಸಲಾಗಿದ್ದ ಮತದಾರರ ಪಟ್ಟಿಯ ವಿಶೇಷವಾದ ತೀವ್ರ ತಪಾಸಣೆ ಪರಿಷ್ಕರಣೆಯನ್ನು ದೇಶದ ಇತರ ರಾಜ್ಯಗಳಲ್ಲಿಯೂ ನಡೆಸಲು ಕೇಂದ್ರ ಚುನಾವಣಾ ಆಯೋಗ ಚಿಂತನೆ ನಡೆಸಿದೆ ಎಂದು ಪಿಟಿಐ ಮಾಡಿರುವ ವರದಿಯನ್ನು ಉಲ್ಲೇಖಿಸಿ ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ. ಅನಧಿಕೃತ, ಅಕ್ರಮ ಅಥವಾ ವಲಸಿಗ ಮತದಾರರನ್ನು ಗುರುತಿಸಿ ಅವರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ಕ್ರಮವಿದು.





- ಬಿಹಾರದಲ್ಲಿ ತೀವ್ರ ವಿವಾದಕ್ಕೆ ಕಾರಣವಾಗಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆಯನ್ನು ಇತರ ರಾಜ್ಯಗಳಿಗೂ ವಿಸ್ತರಿಸುವ ಸಾಧ್ಯತೆ.
- ಈ ಚಿಂತನೆಯನ್ನು ಹೊಂದಿರುವ ಕೇಂದ್ರ ಚುನಾವಣಾ ಆಯೋಗದಿಂದ ಇದೇ ವಿಚಾರವಾಗಿ ಸೆ. 10 ಸಭೆ.

ಈಗಾಗಲೇ ಬಿಹಾರದಲ್ಲಿ ಈ ಪ್ರಕ್ರಿಯೆಯಿಂದಾಗಿ 65 ಲಕ್ಷ ಜನರು ಮತದಾರರ ಪಟ್ಟಿಯಿಂದ ಹೊರಗುಳಿಯುವಂತಾಗಿದೆ. ಇದನ್ನು ಪ್ರತಿಪಕ್ಷಗಳು ತೀವ್ರವಾಗಿ ಖಂಡಿಸಿವೆ. ಬಿಹಾರದಲ್ಲಿ ಇತ್ತೀಚೆಗೆ ಈ ಪ್ರಕ್ರಿಯೆಯನ್ನು ಆರಂಭಿಸಲಾಗಿತ್ತು. ಅದರಲ್ಲಿ, ನೆರೆಯ ಮ್ಯಾನ್ಮಾರ್, ಬಾಂಗ್ಲಾದೇಶದಿಂದ ಬಿಹಾರದಲ್ಲಿ ಅಕ್ರಮವಾಗಿ ನೆಲೆಸಿದ್ದಾರೆಂದು ಹೇಳಲಾದ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿತ್ತು. ಅಂದಾಜು, 65 ಲಕ್ಷ ಜನರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿತ್ತೆಂದು ಮಾಧ್ಯಮಗಳು ವರದಿ ಮಾಡಿವೆ. ಬಿಹಾರದಲ್ಲಿ ಚುನಾವಣಾ ಆಯೋಗ ನಡೆಸಿರುವ ಈ ಪ್ರಕ್ರಿಯೆಗೆ ವಿರೋಧ ಪಕ್ಷಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿವೆ. ಇದು ಅಲ್ಪಸಂಖ್ಯಾತರನ್ನು, ಹಿಂದುಳಿದವರನ್ನು ಮತದಾರರ ಪಟ್ಟಿಯಿಂದ ಹೊರಗಿಡಲು ಮಾಡುವ ತಂತ್ರಗಾರಿಕೆ ಎಂದು ಕಾಂಗ್ರೆಸ್ ಸೇರಿದಂತೆ ಎಲ್ಲಾ ವಿರೋಧ ಪಕ್ಷಗಳು ಆಕ್ರೋಶ ವ್ಯಕ್ತಪಡಿಸಿವೆ. ಅಷ್ಟೇ ಅಲ್ಲದೆ, ಹಲವಾರು ಪ್ರತಿಭಟನೆಗಳನ್ನು ನಡೆಸಲಾಗಿದೆ.


### ಎಸ್‌ಐಆರ್ ಉದ್ದೇಶವೇನು?

ಎಸ್‌ಐಆರ್ ಉದ್ದೇಶವೇನೆಂದರೆ, ಮತದಾರರ ಪಟ್ಟಿಯಲ್ಲಿರಬಹುದಾದ ಅನ್ಯ ದೇಶಗಳ ಪ್ರಜೆಗಳನ್ನು, ಗುರುತಿಸುವುದೇ ಆಗಿದೆ. ಪ್ರತಿಯೊಬ್ಬ ಮತದಾರರ ಗುರುತಿನ ಚೀಟಿಯನ್ನು ಅವರ ಹುಟ್ಟಿದ ದಿನಾಂಕ, ವಿಳಾಸದ ದಾಖಲೆಗಳೊಂದಿಗೆ ಪರಿಶೀಲನೆ ನಡೆಸಿ, ಸೂಕ್ತ ದಾಖಲೆಗಳಲ್ಲದ ಮತದಾರರನ್ನು ಪಟ್ಟಿಯಿಂದ ಹೊರಗಿಡುವುದೇ ಆಗಿದೆ.

# ಉತ್ಪನ್ನಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ತರುವ ಸಾಧ್ಯತೆ

**ನವದೆಹಲಿ:** ಪೆಟ್ರೋಲ್, ಡೀಸೆಲ್, ಆಲ್ಕೊಹಾಲ್ ನಂತಹ ಉತ್ಪನ್ನಗಳನ್ನು ಸದ್ಯಕ್ಕೆ ಸರಕು, ಸೇವಾ ತೆರಿಗೆ ವ್ಯಾಪ್ತಿಗೆ ತರುವ ಯಾವುದೇ ಯೋಜನೆ ಇಲ್ಲ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸ್ಪಷ್ಟಪಡಿಸಿದ್ದಾರೆ. ರಾಷ್ಟ್ರೀಯ ಸುದ್ದಿ ವಾಹಿನಿಗೆ ನೀಡಿರುವ ವಿಶೇಷ ಸಂದರ್ಶನದಲ್ಲಿ ಇದನ್ನು ಖಚಿತಪಡಿಸಿದ್ದು, ಪೆಟ್ರೋಲ್, ಡೀಸೆಲ್, ಆಲ್ಕೊಹಾಲಿಕ್ ಪಾನೀಯಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ಒಳಪಡಿಸದಿರಲು ಕಾರಣವೇನೆಂದು ಪ್ರಶ್ನಿಸಿದಾಗ, ಸಚಿವೆ ಸೀತಾರಾಮನ್ ಪ್ರಸ್ತುತ ಯೋಜನೆಯಲ್ಲಿ ಇವುಗಳನ್ನು ಸೇರಿಸಿಕೊಳ್ಳುವ ಉದ್ದೇಶವಿಲ್ಲ ಎಂದು ಹೇಳಿದರು. ಈ ಉತ್ಪನ್ನಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ತರುವ ಸಾಧ್ಯತೆಯ ಕುರಿತು ಕೇಳಿದಾಗ ತಕ್ಷಣ ಇದು ಸಾಧ್ಯವಿಲ್ಲ ಎಂದು ಅವರು ಸ್ಪಷ್ಟವಾಗಿ ತಿಳಿಸಿದರು. 2017ರ ಜುಲೈನಲ್ಲಿ ಜಿಎಸ್‌ಟಿ ಜಾರಿಗೆ ಬಂದಾಗ, ಪೆಟ್ರೋಲ್, ಡೀಸೆಲ್, ಆಲ್ಕೊಹಾಲ್‌ನಂತಹ ಕೆಲವು ಉತ್ಪನ್ನಗಳನ್ನು ಇದರ ವ್ಯಾಪ್ತಿಯಿಂದ ಹೊರಗಿಡಲಾಗಿತ್ತು.


ಈ ಉತ್ಪನ್ನಗಳು ಕೇಂದ್ರ, ರಾಜ್ಯ ಸರ್ಕಾರಗಳಿಗೆ ಅಬಕಾರಿ ಸುಂಕ, ಮೌಲ್ಯವರ್ಧಿತ ತೆರಿಗೆ, ಮೂಲಕ ಗಣನೀಯ ಆದಾಯವನ್ನು ತಂದುಕೊಡುವ ಕಾರಣ, ಇವುಗಳನ್ನು ಜಿಎಸ್‌ಟಿಯಿಂದ ಹೊರಗಿಡಲು ನಿರ್ಧರಿಸಲಾಗಿತ್ತು.



ಒಂದು ವೇಳೆ ಇವುಗಳನ್ನು ಜಿಎಸ್‌ಟಿ ವ್ಯಾಪ್ತಿಗೆ ಒಳಪಡಿಸಿದರೆ, ರಾಜ್ಯ ಸರ್ಕಾರಗಳಿಗೆ ತಮ್ಮ ಆರ್ಥಿಕ ಸ್ವಾತಂತ್ರ್ಯದ ಮೇಲೆ ಗಂಭೀರ ಪರಿಣಾಮ ಬೀರಬಹುದು. ಈ ಕಾರಣದಿಂದಾಗಿ, ಇಂಧನ ಮತ್ತು ಆಲ್ಕೊಹಾಲ್‌ನ ಮೇಲಿನ ತೆರಿಗೆಗಳನ್ನು ಕೇಂದ್ರ, ರಾಜ್ಯ ಸರ್ಕಾರಗಳು ಪ್ರತ್ಯೇಕವಾಗಿ ವಿಧಿಸುತ್ತಿವೆ, ಇದರಿಂದಾಗಿ ಗ್ರಾಹಕರಿಗೆ ಈ ಉತ್ಪನ್ನಗಳ ಬೆಲೆ ಹೆಚ್ಚಾಗಿರುತ್ತದೆ.

56 ನೇ ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಹಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ. ಸಭೆಯಲ್ಲಿ ಶೇ.5 ಮತ್ತು ಶೇ.18 ರ ಎರಡು ತೆರಿಗೆ ಸ್ಲ್ಯಾಬ್‌ಗಳನ್ನು ಅನುಮೋದಿಸಲಾಯಿತು. ಸಭೆಯಲ್ಲಿ ತೆಗೆದುಕೊಂಡ ನಿರ್ಧಾರಗಳ ಬಗ್ಗೆ ಮಾಹಿತಿಯನ್ನು ಹಂಚಿಕೊಂಡ ಹಣಕಾಸು ಸಚಿವರು, ಆರೋಗ್ಯ ವಿಮೆ, ದಿನಬಳಕೆ ವಸ್ತುಗಳು, ಕೃಷಿ ಸಂಬಂಧಿತ ಸಾಧನಗಳು, ಶಿಕ್ಷಣ ಹೀಗೆ ಅನೇಕ ಸರಕುಗಳಲ್ಲಿ ಟ್ಯಾಕ್ಸ್ ದರವನ್ನು ಇಳಿಸಲಾಗಿದೆ ಎಂದು ಹೇಳಿದ್ದಾರೆ.

# ವಿಜಯ ಮಲ್ಯಗಾಗಿ ತಿಹಾರ್ ಜೈಲಿನಲ್ಲಿ ಹೈ ಸೆಕ್ಯುರಿಟಿ



**ನವದೆಹಲಿ:** ಯುನೈಟೆಡ್ ಕಿಂಗ್ ಡಮ್‌ನಲ್ಲಿ, ಅವಿತಿರುವ ವಿಜಯ್ ಮಲ್ಯ, ನೀರವ್ ಮೋದಿಯವರನ್ನು ಭಾರತಕ್ಕೆ ಹಸ್ತಾಂತರಿಸಲು ಅಲ್ಲಿನ ನ್ಯಾಯಾಂಗ ವ್ಯವಸ್ಥೆ ಈಗಾಗಲೇ ಒಪ್ಪಿಗೆ ನೀಡಿದ್ದು, ಈಗಾಗಲೇ ಅಲ್ಲಿನ ತಜ್ಞರ ತಂಡವೊಂದು ರಾಷ್ಟ್ರರಾಜಧಾನಿ ದೆಹಲಿಯಲ್ಲಿರುವ ತಿಹಾರ್ ಜೈಲಿನಲ್ಲಿ ಮಲ್ಯ, ನೀರವ್ ಮೋದಿಯವರಿಗಾಗಿ ನಿಗದಿಗೊಳಿಸಲಾಗಿರುವ ಹೈ ಸೆಕ್ಯುರಿಟಿ ಜೈಲು ಕೊಠಡಿಗಳ ಸಮುಚ್ಚಯಕ್ಕೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಗಳನ್ನು ಅವಲೋಕಿಸಿದೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

ಈಗಾಗಲೇ ಉದ್ಯಮಿ ವಿಜಯ್ ಮಲ್ಯ, ನೀರವ್ ಮೋದಿ ಮುಂತಾದವರನ್ನು ಭಾರತಕ್ಕೆ ಹಸ್ತಾಂತರಿಸುವಂತೆ ಭಾರತ ಸರ್ಕಾರ, ಯುಕೆ ಸರ್ಕಾರಕ್ಕೆ ಮನವಿ ಮಾಡಿದೆ. ಇವರಷ್ಟೇ ಅಲ್ಲದೆ, ಯುಕೆನಲ್ಲಿ ನೆಲೆಸಿರುವ ಭಾರತ ಮೂಲತ ಕಳ್ಳಸಾಗಣೆದಾರರು, ಅಕ್ರಮ ಶಸ್ತ್ರಾಸ್ತ್ರ ಸರಬರಾಜುದಾರರು ಸೇರಿ ಒಟ್ಟು 20 ಮಂದಿಯನ್ನು ಭಾರತಕ್ಕೆ ಗಡೀಪಾರು ಮಾಡುವಂತೆ ಭಾರತ ಸರ್ಕಾರ, ಯುಕೆ ಸರ್ಕಾರವನ್ನು ಕೋರಿದೆ. ಆದರೆ, ಅವರು ಈಗಾಗಲೇ ಯುಕೆ ಪ್ರಜೆಗಳಾಗಿರುವುದರಿಂದ ಭಾರತಕ್ಕೆ ಅವರನ್ನು ಹಸ್ತಾಂತರಕ್ಕೂ ಮುನ್ನವೇ ಅವರ ಭದ್ರತೆ ಹಾಗೂ ಅವರ ಯೋಗಕ್ಷೇಮದ ಬಗ್ಗೆ ಮೊದಲೇ ಮನದಟ್ಟು ಮಾಡಿಕೊಳ್ಳಲು ಸಿಪಿಎಸ್ ತಜ್ಞರ ತಂಡ ಇತ್ತೀಚೆಗೆ ತಿಹಾರ್ ಜೈಲಿಗೆ ಭೇಟಿ ನೀಡಿತ್ತು ಎಂದು ಈ ಬೆಳವಣಿಗೆಯನ್ನು ಬಲ್ಲವರು ತಿಳಿಸಿದ್ದಾಗಿ ಟೈಮ್ಸ್ ಆಫ್ ಇಂಡಿಯಾ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ತಿಹಾರ್ ಜೈಲಿಗೆ ಬಂದಿದ್ದ ಅಧಿಕಾರಿಗಳು, ಹೈ ಪ್ರೊಫೈಲ್ ಕೈದಿಗಳ ಬರಾಕ್‌ನಲ್ಲಿ ಈಗಾಗಲೇ ಇರುವ ಕೆಲವು ಗಣ್ಯ ಕೈದಿಗಳನ್ನು ಮಾತನಾಡಿಸಿ, ಜೈಲಿನಲ್ಲಿ, ಅವರ ಬ್ಯಾರಕ್‌ಗಳಲ್ಲಿ ಇರುವ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆದಿದೆ. ಜೈಲು ಅಧಿಕಾರಿಗಳಿಂದಲೂ ಮಾಹಿತಿ ಪಡೆದಿದೆ. ಅವಶ್ಯಕತೆಯಿದ್ದರೆ, ನೀರವ್ ಮೋದಿ, ವಿಜಯ್ ಮಲ್ಯರಂಥವರಿಗೆ ಮತ್ತಷ್ಟು ಉನ್ನತ ಮಟ್ಟದ ಭದ್ರತೆ ಒದಗಿಸಬೇಕು, ಅವರಿಗಾಗಿ ತೀವ್ರ ಭದ್ರತೆಯುಳ್ಳ ಹೊಸ ಬ್ಯಾರಕ್ ಸೃಷ್ಟಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡುವ ಸಾಧ್ಯತೆಗಳಿವೆ.

# ಉಗ್ರರಿಗೆ ಆರ್ಥಿಕ ನೆರವು: 6 ಲಕ್ಷದ ಆಸ್ತಿ ಜಪ್ತಿ



**ನವದೆಹಲಿ:** ಭಯೋತ್ಪಾದಕ ಸಂಘಟನೆಗಳಾದ ಸಿಮಿ, ಇಂಡಿಯನ್ ಮುಜಾಹಿದ್ದೀನ್ ವಿರುದ್ಧದ ಹಣ ಅಕ್ರಮ ವರ್ಗಾವಣೆ ಆರೋಪಕ್ಕೆ ಸಂಬಂಧಿಸಿದ ಪ್ರಕರಣದ ತನಿಖೆಯ ಭಾಗವಾಗಿ 6.34 ಲಕ್ಷ ಮೌಲ್ಯದ ಆಸ್ತಿಯನ್ನು ಜಪ್ತಿ ಮಾಡಿರುವುದಾಗಿ ಜಾರಿ ನಿರ್ದೇಶನಾಲಯ (ಇ.ಡಿ) ತಿಳಿಸಿದೆ. ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯಡಿ ಜಪ್ತಿ ಮಾಡಲಾದ ಸ್ಥಿರ ಆಸ್ತಿಯು ಆರೋಪಿ ರಾಜು ಖಾನ್‌ಗೆ ಸೇರಿದ್ದು ಎಂದು ತನಿಖಾ ಸಂಸ್ಥೆಯು ಶನಿವಾರ ಹೇಳಿದೆ.

ಅಕ್ರಮ ಚಟುವಟಿಕೆಗಳ ತಡೆ ಕಾಯ್ದೆಯ ನಿಬಂಧನೆಗಳಡಿ ಧೀರಜ್ ಸಾವೊ, ಇತರರ ವಿರುದ್ಧ ಛತ್ತೀಸಘಡ ಪೊಲೀಸರು ರಾಯಪುರದಲ್ಲಿ ದಾಖಲಿಸಿರುವ ಎಫ್‌ಐಆರ್‌ನಿಂದ ಈ ಪ್ರಕರಣ ಬೆಳಕಿಗೆ ಬಂದಿದೆ. ಪಾಕಿಸ್ತಾನದ ಖಾಲಿದ್ ಎಂಬ ಸಂಸ್ಥೆಯ ಸೂಚನೆ ಮೇರೆಗೆ ಭಾರತದಲ್ಲಿ ಅಪರಿಚಿತ ವ್ಯಕ್ತಿಗಳಿಂದ ಹಣವನ್ನು ಸ್ವೀಕರಿಸಲು ಬ್ಯಾಂಕ್ ಖಾತೆಗಳನ್ನು ಬಳಸಲಾಗಿದೆ. ಸ್ವೀಕರಿಸಿದ ಮೊತ್ತವನ್ನು ಜುಬೈರ್ ಹುಸೇನ್, ಆಯಿಶಾ ಬಾನು, ರಾಜುಖಾನ್‌ಗೆ ವರ್ಗಾಯಿಸಲಾಗಿದೆ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖವಾಗಿದೆ.

ರಾಜು ಖಾನ್ ಈ ಪ್ರಕರಣದಲ್ಲಿ ಪ್ರಮುಖ ಪಾತ್ರವಹಿಸಿದ್ದಾನೆ. ಖಾಲಿದ್ ಹಾಗೂ ಸಾವೊ ಸೂಚನೆ ಮೇರೆಗೆ 48 ಲಕ್ಷಕ್ಕೂ ಹೆಚ್ಚು ಮೊತ್ತದ ಹಣಕಾಸು ವಹಿವಾಟು ನಡೆಸಿದ್ದಾನೆ ಎಂದು ಇ.ಡಿ ತಿಳಿಸಿದೆ. ಈ ಹಿಂದೆಯೂ 3 ಲಕ್ಷ ಮೌಲ್ಯದ ಆಸ್ತಿಯನ್ನು ಇ.ಡಿ ಜಪ್ತಿ ಮಾಡಿತ್ತು.

# ಸಂಕಷ್ಟದಲ್ಲಿದ್ದ ಮುಸ್ಲಿಂ ಸಮುದಾಯಕ್ಕೆ ಆಶ್ರಯ ನೀಡಿದ ಹಿಂದೂ ಕುಟುಂಬ



**ಜಮ್ಮು:** ಕಶ್ಮೀರದಲ್ಲಿ ಇತ್ತೀಚೆಗೆ ಸುರಿದ ಭಾರೀ ಮಳೆಯಿಂದ ಉಂಟಾದ ವಿನಾಶದ ನಡುವೆ, ಕಥುವಾ ಜಿಲ್ಲೆಯ ಬನಿಯಿಂದ ಕೋಮು ಸಾಮರಸ್ಯದ ಹೃದಯಸ್ಪರ್ಶಿ ಉದಾಹರಣೆ ಹೊರಹೊಮ್ಮಿದೆ, ಅಲ್ಲಿ ಹಿಂದೂ ಕುಟುಂಬವೊಂದು ವಿಪತ್ತಿನಲ್ಲಿ ಮನೆ ಕಳೆದುಕೊಂಡ ಮುಸ್ಲಿಂ ನೆರೆಹೊರೆಯವರಿಗೆ ಆಶ್ರಯ ನೀಡಲು ತಮ ಮನೆಯ ಬಾಗಿಲು ತೆರೆದಿದೆ.

ಕಳೆದ ಆಗಸ್ಟ್ 28 ರಂದು ಸಂಭವಿಸಿದ ಹಠಾತ್ ಪ್ರವಾಹದಲ್ಲಿ ಮನೆ ಹಾನಿಗೊಳಗಾದ ನಂತರ ಜಾವೈದ್ ಅಹ್ಮದ್ ಕುಟುಂಬಕ್ಕೆ ಯಾರು ನೆರವಾಗಲಿಲ್ಲಮ ಆದರೆ ಸುಬಾಶ್ ಅವರು ಜಾವೈದ್ ಅಹದ್,ಅವರ ಮಾವ ,ಇಬ್ಬರು ಕುರುಡು ಮಕ್ಕಳು ಸೇರಿದಂತೆ ಅವರ ಎಂಟು ಕುಟುಂಬ ಸದಸ್ಯರನ್ನು ಮನೆಗೆ ಕರೆತಂದು ಉಪಚರಿಸಿದ್ದಾರೆ. ಸುಬಾಶ್ ಅವರ ಮಾನವೀಯತೆ ವರ್ಣಿಸಲು ಸಾಧ್ಯವಿಲ್ಲ ಎಮದು ಅಹದ್ ಹೇಳಿದರು. ಪ್ರವಾಹದಲ್ಲಿ ನಮ ಮನೆ ಹಾನಿಗೊಳಗಾಗಿದ್ದು, ನಾವು ಬೇರೆ ಕಡೆ ಆಶ್ರಯ ಪಡೆಯಬೇಕಾಯಿತು. ಆದರೆ ಸುಬಾಶ್‌ಜಿಯವರ ಮನೆಯಲ್ಲಿ ವಾಸಿಸುತ್ತಿದ್ದೇವೆ. ಅವರು ನಮಗೆ ಮೊದಲ ಮಹಡಿಯಲ್ಲಿ ಎರಡು ಕೊಠಡಿಗಳನ್ನು ನೀಡಿ ಮೇಲಿನ ಮಹಡಿಗೆ ಸ್ಥಳಾಂತರಗೊಂಡಿದ್ದಾರೆ. ನಾವು ನಮ್ಮ ಸ್ವಂತ ಮನೆಯಲ್ಲಿದ್ದೇವೆ ಎಂಬ ಭಾವನೆ ನಮಗಿದೆ ಎಂದು ಅವರು ಹೇಳಿದರು.

ತಮ ಆತಿಥೇಯರ ಮಾನವೀಯ ಮನೋಭಾವವನ್ನು ಅಪಾರವಾಗಿ ಶ್ಲಾಘಿಸಿದ ಅಹ್ಮದ್, ಅವರು ಅವರಿಗೆ ಪಡಿತರ, ಇತರ ಗೃಹೋಪಯೋಗಿ ವಸ್ತುಗಳನ್ನು ನೀಡಿದ್ದಾರೆ ಎಂದು ಹೇಳಿದರು. ಕುಟುಂಬಗಳನ್ನು ಭೇಟಿ ಮಾಡಿದ ಸ್ಥಳೀಯ ಶಾಸಕ ರಾಮೇಶ್ವರ್ ಸಿಂಗ್, ಈ ಕಾರ್ಯವು ಪ್ರಬಲ ಸಂದೇಶವನ್ನು ಹೊಂದಿದೆ ಎಂದು ಹೇಳಿದರು. ಜಮ್ಮು ಮತ್ತು ಕಾಶ್ಮೀರದ ನಿಜವಾದ ಸೌಂದರ್ಯ ಇದು ಎಂದು ಶಾಸಕರು ಹೇಳಿದರು.

ಪ್ರತಿಕೂಲ ಪರಿಸ್ಥಿತಿಯಲ್ಲಿ ಏಕತೆ, ಎಲ್ಲಕ್ಕಿಂತ ಹೆಚ್ಚಾಗಿ ಮಾನವೀಯತೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಪರಿಹಾರ, ಪುನರ್ವಸತಿ ಕ್ರಮಗಳನ್ನು ಹೆಚ್ಚಿಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದರು.

# ಸಿಪಿಇಸಿಯ ಪ್ರಮುಖ ಯೋಜನೆಯಿಂದ ಹಿಂದಕ್ಕೆ ಸರಿದ ಚೀನಾ

## ಅಮೆರಿಕಕ್ಕೆ ಹತ್ತಿರವಾಗುತ್ತಿರುವ ಪಾಕಿಸ್ತಾನಕ್ಕೆ ಚೀನಾ ಶಾಕ್, ಏಷ್ಯನ್ ಅಭಿವೃದ್ಧಿ ಬ್ಯಾಂಕ್ ಮುಂದೆ ಪಾಕಿಸ್ತಾನ ಸಾಲಕ್ಕೆ ಮೊರೆ

**ಇಸ್ಲಾಮಾಬಾದ್:** ಇತ್ತೀಚಿನ ದಿನಗಳಲ್ಲಿ ಅಮೆರಿಕಕ್ಕೆ ಹತ್ತಿರವಾಗುತ್ತಿರುವ ಪಾಕಿಸ್ತಾನಕ್ಕೆ ಚೀನಾ ಬಿಗ್ ಶಾಕ್ ಅನ್ನು ನೀಡಿದೆ. ಚೀನಾ ಪಾಕಿಸ್ತಾನ ಆರ್ಥಿಕ ಕಾರಿಡಾರ್ ಕೇಂದ್ರ ಬಿಂದುವಾಗಬೇಕಿದ್ದ ಪಾಕಿಸ್ತಾನದ ಯೋಜನೆಯೊಂದಕ್ಕೆ ಹಣಕಾಸಿನ ನೆರವು ನೀಡುವುದರಿಂದ ಚೀನಾ ಹಿಂದಕ್ಕೆ ಸರಿದಿದೆ. ಈ ಹಿನ್ನೆಲೆ ತನ್ನ ಹಳೇ ರೈಲ್ವೇ ಜಾಲದ ನಿರ್ಣಾಯಕ ಭಾಗವನ್ನು ಅಭಿವೃದ್ಧಿಪಡಿಸಲು ಪಾಕಿಸ್ತಾನ ಏಷ್ಯನ್ ಅಭಿವೃದ್ಧಿ ಬ್ಯಾಂಕ್ ಮೊರೆ ಹೋಗಿದೆ. ಪಾಕಿಸ್ತಾನದ ಮೇನ್ ಲೈನ್-1 ಯೋಜನೆಗೆ ಹಣಕಾಸು ಒದಗಿಸುವುದಿಲ್ಲ ಎಂದು ಚೀನಾ ಹೇಳಿದೆ. ಆದ್ದರಿಂದ ಪಾಕಿಸ್ತಾನವು ಈಗ ಕರಾಚಿ-ರೋಹ್ರಿ ವಿಭಾಗದ ಮಾರ್ಗವನ್ನು ನವೀಕರಿಸಲು ಎಡಿಬಿಯಿಂದ 2 ಬಿಲಿಯನ್ ಡಾಲರ್ ಸಾಲವನ್ನು ಪಡೆಯಲು ಮುಂದಾಗಿದೆ. ಈ ಬೆಳವಣಿಗೆಯು ಚೀನಾ ಪಾಕಿಸ್ತಾನ ಆರ್ಥಿಕ ಕಾರಿಡಾರ್‌ಗೆ ದೊಡ್ಡ ತಿರುವನ್ನು ನೀಡಿದೆ. ಸಿಪಿಇಸಿ ಅಡಿಯಲ್ಲಿ ಪಾಕಿಸ್ತಾನದಾದ್ಯಂತ ಇಂಧನ, ಸಾರಿಗೆ ಮೂಲಸೌಕರ್ಯಕ್ಕಾಗಿ ಸುಮಾರು 60 ಬಿಲಿಯನ್ ಡಾಲರ್ ಹೂಡಿಕೆ ಮಾಡುವುದಾಗಿ ಚೀನಾ ಭರವಸೆ ನೀಡಿತ್ತು. ಕರಾಚಿಯಿಂದ ಪೇಶಾವರದವರೆಗೆ ಸುಮಾರು 1,800 ಕಿಲೋ ಮೀಟರ್ ವ್ಯಾಪಿಸಿರುವ ಎಂಎಲ್-1 ರೈಲ್ವೇ ನವೀಕರಣ ಯೋಜನೆಯು ಈ ಎಲ್ಲಾ ಯೋಜನೆಗಳಲ್ಲಿ ಅತಿದೊಡ್ಡ ಮತ್ತು ಗೇಮ್ ಚೇಂಜರ್ ಎಂದೇ ಹೇಳಲಾಗಿತ್ತು. ಆದರೆ, ಸುಮಾರು ಒಂದು ದಶಕದ ರಾಜತಾಂತ್ರಿಕ ಮಾತುಕತೆಗಳ ನಂತರವೂ, ಈ ಯೋಜನೆಗೆ ಹಣಕಾಸಿನ ನೆರವನ್ನು ಚೀನಾ ನೀಡಿಲ್ಲ. ಇದೀಗ ಎಡಿಬಿಯಿಂದ ಸಾಲ ತೆಗೆದುಕೊಳ್ಳುವ ಮೂಲಕ ಚೀನಾದ ಬೆಲ್ಟ್ ಅಂಡ್ ರೋಡ್ ಇನಿಶಿಯೇಟಿವ್‌ನ ಪ್ರಮುಖ ಯೋಜನೆಯಲ್ಲಿ ಎಡಿಬಿ ಮಧ್ಯಪ್ರವೇಶಕ್ಕೆ ಪಾಕಿಸ್ತಾನ ಅವಕಾಶ ನೀಡಲು ಮುಂದಾಗಿದೆ. ಅದಲ್ಲದೇ ಚೀನಾದ ವಿದೇಶಿ ಹೂಡಿಕೆಗಳ ಮರುಮೌಲ್ಯಮಾಪನವೂ ಈ ನಿರ್ಧಾರದ ಹಿಂದೆ ಇದೆ ಎನ್ನಲಾಗಿದೆ. ಹೆಚ್ಚುತ್ತಿರುವ ಸಾಲದ ಹೊರೆ, ಪದೇ ಪದೇ ಐಎಂಎಫ್‌ನಿಂದ ಬೇಲ್ ಔಟ್‌ಗಳನ್ನು ಪಡೆಯುತ್ತಿರುವ ಪಾಕಿಸ್ತಾನ ಚೀನಾದ ಆತಂಕಕ್ಕೆ ಕಾರಣವಾಗಿದೆ. ಸಿಪಿಇಸಿಯ ಅತಿದೊಡ್ಡ ಯೋಜನೆಯಿಂದ ಚೀನಾ ಹಿಂದೆ ಸರಿದಿರುವುದು, ಎರಡೂ ದೇಶಗಳು ಹೇಳಿಕೊಳ್ಳುವ ಉಕ್ಕಿನ ಸ್ನೇಹಕ್ಕೂ ಆರ್ಥಿಕ ಅಸ್ತಿತ್ವದಲ್ಲಿರುವ ರೈಲು ಮಾರ್ಗವು ಹಳೆಯದಾಗಿದ್ದು, ರೆಕೊ ಡಿಕ್ ಕಾರ್ಯಾಚರಣೆಯಿಂದ ನಿರೀಕ್ಷಿಸಲಾದ ಭಾರೀ ಸರಕುಗಳ ಪ್ರಮಾಣ, ತೂಕವನ್ನು ಬೆಂಬಲಿಸಲು ಸಾಧ್ಯವಾಗುತ್ತಿಲ್ಲ. ಆಧುನೀಕರಿಸಿದ ಎಂಎಲ್-1 ಇಲ್ಲದೇ ಗಣಿಯ ಸಂಪೂರ್ಣ ಆರ್ಥಿಕ ಸಾಮರ್ಥ್ಯವನ್ನು ಬಳಸಿಕೊಳ್ಳಲು ಪಾಕಿಸ್ತಾನಕ್ಕೆ ಸಾಧ್ಯವಿಲ್ಲ. ಈ ಕಾರಣದಿಂದಾಗಿಯೇ ಎಡಿಬಿ ರೈಲ್ವೇಯ ಒಂದು ಭಾಗಕ್ಕೆ ಹಣಕಾಸು ಒದಗಿಸಲು ಒಪ್ಪಿಕೊಂಡಿರುವುದಲ್ಲದೇ, ರೆಕೊ ಡಿಕ್ ಯೋಜನೆಗೆ ಈಗಾಗಲೇ 410 ಮಿಲಿಯನ್ ಡಾಲರ್ ನೀಡುವುದಾಗಿ ಭರವಸೆ ನೀಡಿದೆ.



### ಪಾಕ್‌ಗೆ ಮಾಡು ಇಲ್ಲವೇ ಮಡಿ

ಬಲೂಚಿಸ್ತಾನದಲ್ಲಿರುವ ರೆಕೊ ಡಿಕ್ ತಾಮ್ರ ಮತ್ತು ಚಿನ್ನದ ಗಣಿಯ ಅಭಿವೃದ್ಧಿಯು ಎಂಎಲ್-1 ಅನ್ನು ಅಪ್‌ಗ್ರೇಡ್ ಮಾಡುವ ತುರ್ತನ್ನು ಮತ್ತಷ್ಟು ಹೆಚ್ಚಿಸಿದೆ. ಕೆನಡಾದ ಗಣಿಗಾರಿಕೆ ದೈತ್ಯ ಬ್ಯಾರಿಕ್ ಗೋಲ್ಡ್ ಅಭಿವೃದ್ಧಿಪಡಿಸುತ್ತಿರುವ ಈ ಗಣಿಯು ವಿಶ್ವದ ಅತಿದೊಡ್ಡ ಬಳಕೆಯಾಗದ ಖನಿಜ ಸಂಪನ್ಮೂಲಗಳಲ್ಲಿ ಒಂದಾಗಿದೆ ಮತ್ತು ಮುಂಬರುವ ವರ್ಷಗಳಲ್ಲಿ ಪಾಕಿಸ್ತಾನದ ರಫ್ತು ಆದಾಯಕ್ಕೆ ಗಮನಾರ್ಹ ಕೊಡುಗೆ ನೀಡುವ ನಿರೀಕ್ಷೆಯಿದೆ. ಆದಾಗ್ಯೂ, ಗಣಿಯಿಂದ ಅದಿರನ್ನು ಬಂದರುಗಳಿಗೆ ಸಾಗಿಸಲು ಬೇಕಾದ ಸಾರಿಗೆ ಮೂಲಸೌಕರ್ಯದ ತೀವ್ರ ಕೊರತೆಯಿದೆ.

### ಶತಕೋಟಿ ಡಾಲರ್ ಹೂಡಿಕೆ

ಪಾಕ್ ಯೋಜನೆಯಿಂದ ಚೀನಾ ಹಿಂದೆ ಸರಿದಿದ್ದೇಕೆ? ಪಾಕಿಸ್ತಾನದ ಎಂಎಲ್-1 ಯೋಜನೆಯಿಂದ ಹಿಂದೆ ಸರಿಯುವ ನಿರ್ಧಾರವನ್ನು ಚೀನಾದ ದಿಢೀರ್ ಎಂದು ತೆಗೆದುಕೊಂಡಿಲ್ಲ. ಯೋಜನೆಯ ಆರ್ಥಿಕ ಕಾರ್ಯಸಾಧ್ಯತೆ, ವಿಶೇಷವಾಗಿ ಪಾಕಿಸ್ತಾನದ ಹದಗೆಡುತ್ತಿರುವ ಆರ್ಥಿಕ ಸ್ಥಿತಿ, ಸಾಲ ಮರುಪಾವತಿಯಲ್ಲಿನ ತೊಂದರೆಗಳ ಬಗ್ಗೆ ಬೀಜಿಂಗ್ ಆತಂಕವನ್ನು ಹೆಚ್ಚಿಸಿತ್ತು. ಚೀನೀ ಸಂಸ್ಥೆಗಳು ಈಗಾಗಲೇ ಶತಕೋಟಿ ಡಾಲರ್‌ಗಳನ್ನು ಹೂಡಿಕೆ ಮಾಡಿರುವ ವಿದ್ಯುತ್ ವಲಯದಲ್ಲಿ ಈ ಸಮಸ್ಯೆಗಳು ಹೆಚ್ಚಾಗಿದ್ದು, ಹಣದ ಮರುಪಾವತಿಯಾಗುತ್ತಿಲ್ಲ. ಈ ಹಿನ್ನೆಲೆ ಎಂಎಲ್-1 ಯೋಜನೆಯಿಂದ ಚೀನಾ ಹಿಂದಕ್ಕೆ ಸರಿದಿದೆ.

ಉದಯ ವಾಹಿನಿ

ಪ್ರಾದೇಶಿಕ

ಭಾನುವಾರ 07 ಸೆಪ್ಟೆಂಬರ್ 2025 | 07

## ಮಿನಿ ನ್ಯೂಸ್

### ಶಾಲೆಯ ಹೊರಗೆ ಬಾಲಕನ ಎದೆಗೆ ಚಾಕು ಇರಿತ

**ನವದೆಹಲಿ:** ದೇಶದ ರಾಜಧಾನಿ ದೆಹಲಿಯ ಪಹರ್‌ಗಂಜ್ ಪ್ರದೇಶದ ಶಾಲೆಯೊಂದರ ಹೊರಗೆ 15 ವರ್ಷದ ಬಾಲಕನಿಗೆ ಮೂವರು ಹಲ್ಲೆ ನಡೆಸಿ ಆತನ ಎದೆಕೆ ಚಾಕುವಿನಿಂದ ಇರಿದ ಘಟನೆ ನಡೆದಿದೆ. ಘಟನೆಗೆ ಸಂಬಂದಿಸಿದಂತೆ ಮೂವರು ಅಪ್ರಾಪ್ತ ವಯಸ್ಕರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಗೊಂಡಿದ್ದ ಬಾಲಕ ಎದೆಗೆ ಚುಚಿದ್ದ ಚಾಕುವಿನ ಜೊತೆಗೆ ಪಹರ್‌ಗಂಜ್ ಪೊಲೀಸ್ ಠಾಣೆಗೆ ತಲುಪಿದ್ದು ಪೊಲೀಸರು ಇದನ್ನು ನೋಡಿ ಬೆಚ್ಚಿಬಿದ್ದಿದ್ದಾರೆ.

ನಂತರ ಬಾಲಕನನ್ನು ಕಲಾವತಿ ಸರನ್ ಆಸ್ಪತ್ರೆಗೆ ಕರೆದೊಯ್ಯಲಾಯಿತು, ನಂತರ ಆರ್‌ಎಂಎಲ್ ಆಸ್ಪತ್ರೆಗೆ ಸಾಗಿಸಿ ಅಲ್ಲಿ ವೈದ್ಯರು ಎದೆಯಿಂದ ಚಾಕುವನ್ನು ಯಶಸ್ವಿಯಾಗಿ ಹೊರತೆಗೆದರು ಎಂದು ಅವರು ಪೊಲೀಸರು ತಿಳಿಸಿದ್ದಾರೆ. ಸುಮಾರು 15 ದಿನಗಳ ಹಿಂದೆ ನಡೆದಿದ್ದ ಗಲಾಟೆ ಈ ಮಟ್ಟಕ್ಕೆ ತಲುಪಿದೆ ಎಂದು ಉಪ ಪೊಲೀಸ್ ಆಯುಕ್ತ (ಕೇಂದ್ರ) ನಿಧಿನ್ ವಲ್ಸನ್ ಹೇಳಿದರು.ಪಹರ್‌ಗಂಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳೀಯ ಗುಪ್ತಚರ ಮತ್ತು ತ್ವರಿತ ದಾಳಿಗಳ ಮೂಲಕ, ಪ್ರಕರಣ ದಾಖಲಾದ ಕೆಲವೇ ಗಂಟೆಗಳಲ್ಲಿ 15, 16 ವರ್ಷ ವಯಸ್ಸಿನ ಮೂವರು ಆರೋಪಿಗಳನ್ನು ಅರಾಮ್ ಬಾಗ್ ಪ್ರದೇಶದಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಖಾಲಿಸ್ತಾನಿ ಉಗ್ರರಿಗೆ ಕೆನಡಾದಿಂದ ಆರ್ಥಿಕ ನೆರವು: ವರದಿಯಲ್ಲಿ ಬಹಿರಂಗ

**ಒಟ್ಟಾವ:** ಕನಿಷ್ಠ ಎರಡು ಖಾಲಿಸ್ತಾನಿ ಭಯೋತ್ಪಾದಕ ಸಂಘಟನೆಗಳು ಕೆನಡಾದಿಂದ ಆರ್ಥಿಕ ನೆರವು ಪಡೆದಿವೆ ಎಂದು ಕೆನಡಾ ಸರ್ಕಾರದ ವರದಿಯೊಂದು ತಿಳಿಸಿದೆ. ಕೆನಡಾದಲ್ಲಿ ಹಣದ ಅಕ್ರಮ ಚಲಾವಣೆ ಮತ್ತು ಭಯೋತ್ಪಾದಕರಿಗೆ ಹಣಕಾಸಿನ ನೆರವು ನೀಡುತ್ತಿರುವುದರಿಂದ ಸೃಷ್ಟಿಯಾಗಿರುವ ಅಪಾಯಗಳು- 2025 ಮೌಲ್ಯಮಾಪನ ಎಂಬ ಶೀರ್ಷಿಕೆಯ ವರದಿಯಲ್ಲಿ ಈ ಉಲ್ಲೇಖವಿದೆ. ಬಬ್ಬರ್ ಖಾಲ್ಸಾ ಹಾಗೂ ಸಿಖ್ ಯೂತ್ ಫೆಡರೇಷನ್ ಭಯೋತ್ಪಾದಕ ಸಂಘಟನೆಗಳು ಕೆನಡಾದಲ್ಲಿ ಹಣ ಸಂಗ್ರಹಿಸುತ್ತಿವೆ ಎಂದು ವರದಿ ತಿಳಿಸಿದೆ.

ಭಾರತದ ಪಂಜಾಬ್ ಅನ್ನು ಖಾಲಿಸ್ತಾನ್ ಎಂಬ ಸ್ವತಂತ್ರ ರಾಷ್ಟ್ರದ ನಿರ್ಮಾಣಕ್ಕಾಗಿ ಕೆನಡಾದಲ್ಲಿ 1980ರ ದಶಕದಿಂದಲೂ ರಾಜಕೀಯ ಪ್ರೇರಿತ ಹಿಂಸಾತ್ಮಕ ಚಟುವಟಿಕೆಗಳನ್ನು ಖಾಲಿಸ್ತಾನಿ ಉಗ್ರರು ನಡೆಸಿದ್ದಾರೆ ಎಂದು ಒಟ್ಟಾವದ ಗುಪ್ತಚರ ಸಂಸ್ಥೆಯು ವರದಿ ನೀಡಿದ ಎರಡು ತಿಂಗಳ ಬಳಿಕ ಈ ವಿದ್ಯಮಾನ ನಡೆದಿದೆ. ರಾಜಕೀಯ ಪ್ರೇರಿತ ಹಿಂಸಾತ್ಮಕ ಉಗ್ರವಾದವು ನೂತನ ರಾಜಕೀಯ ವ್ಯವಸ್ಥೆ ರೂಪಿಸಲು ಅಥವಾ ಅಸ್ತಿತ್ವದಲ್ಲಿರುವ ವ್ಯವಸ್ಥೆಯಲ್ಲೇ ಹೊಸ ರಚನೆಗಾಗಿ ಹಿಂಸಾಚಾರವನ್ನು ಪ್ರೋತ್ಸಾಹಿಸಲಿದೆ ಎಂದು ಈಚಿನ ವರದಿಯು ಹೇಳಿದೆ.

### ಇಸ್ರೇಲ್ ಹಮಾಸ್ ಯುದ್ಧ: ಗಾಜಾದ ಮಗುವಿಗೆ ಇಟಲಿಯಲ್ಲಿ ಚಿಕಿತ್ಸೆ

**ನೇಪಲ್ಸ್:** ಇಸ್ರೇಲ್, ಹಮಾಸ್ ಮಧ್ಯೆ ಯುದ್ಧ ಆರಂಭವಾಗುವುದಕ್ಕೂ ಕೆಲವೇ ತಿಂಗಳು ಮುಂಚೆ ಹುಟ್ಟಿ, ಈಗ ಎರಡು ವರ್ಷದ ಹುಟ್ಟುಹಬ್ಬ ಆಚರಿಸಿಕೊಂಡ ಶಾಮ್ ಖುದೇ ಎಂಬ ಹೆಣ್ಣುಮಗುವಿಗೆ ಇಟಲಿಯ ಆಸ್ಪತ್ರೆಯಲ್ಲಿ ಆರೈಕೆ ನಡೆಯುತ್ತಿದೆ. ಹುಟ್ಟಿನಿಂದಲೇ ಆಕೆಗೆ ಪಚನ ಸಂಬಂಧಿ ಕಾಯಿಲೆ ಇತ್ತು. ಯುದ್ಧ ಆರಂಭವಾದ ಬಳಿಕ ಈ ಕುಟುಂಬವು ಹಲವು ಬಾರಿ ಅಲ್ಲಿಂದ ಇಲ್ಲಿಗೆ ಓಡಾಡಿ, ನಿರಾಶ್ರಿತರಾಗಿದ್ದಾರೆ. ಮಗುವಿಗೆ ಪೌಷ್ಟಿಕ ಊಟವನ್ನೇ ನೀಡಲು ಕುಟುಂಬಕ್ಕೆ ಸಾಧ್ಯವಾಗಿರಲಿಲ್ಲ.

ಚರ್ಮವು ಮೂಳೆಗೆ ಅಂಟಿ ಹೋಗಿ, ಎದೆಗೂಡಿನ ಮೂಳೆಗಳು ಹೊರಗೆ ಬಂದಿದ್ದ ಸ್ಥಿತಿಯಲ್ಲಿ ಶಾಮ್‌ಳನ್ನು ಕೆಲವು ವಾರಗಳ ಹಿಂದಷ್ಟೇ ಇಟಲಿ ಆಸ್ಪತ್ರೆಗೆ ಕರೆತರಲಾಗಿತ್ತು. ಈಕೆಯೊಂದಿಗೆ ಗಾಜಾದ ಇನ್ನೂ 181 ಮಕ್ಕಳು ಇಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಶಾಮ್ ಈಗ ನಿಧಾನಕ್ಕೆ ಚೇತರಿಸಿಕೊಳ್ಳುತ್ತಿದ್ದಾಳೆ. ಆಸ್ಪತ್ರೆಗೆ ಬರುವಾಗ ಅಮ್ಮನ ಎದೆಗವಚಿಕೊಂಡು ಬಂದಿದ್ದ ಇವಳು 4 ಕೆ.ಜಿ. ಇದ್ದಳು. ಈಗ ಒಂದು ವಾರದಲ್ಲಿ 5.5 ಕೆ.ಜಿ ಆಗಿದ್ದಾಳೆ. ಅಮ್ಮ, ಅಕ್ಕ ಕರೆದರೆ ನಗುತ್ತಾಳೆ. ವೈದ್ಯರು ಚಿಕಿತ್ಸೆ ಮುಂದುವರಿಸಿದ್ದಾರೆ.

### ವಿಶ್ವಸಂಸ್ಥೆಯ ಸಾಮಾನ್ಯ ಸಭೆ: ಪಿಎಂ ಬದಲು ಸಚಿವ ಜೈಶಂಕರ್ ಭಾಷಣ

**ವಿಶ್ವಸಂಸ್ಥೆ:** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 80ನೇ ಅಧಿವೇಶನದ ಉನ್ನತ ಮಟ್ಟದ ಸಾಮಾನ್ಯ ಚರ್ಚೆಯಲ್ಲಿ ಈ ಬಾರಿ ಪ್ರಧಾನಿ ನರೇಂದ್ರ ಮೋದಿ ಭಾಷಣ ಇರುವುದಿಲ್ಲ. ಭಾಷಣಗಾರರ ತಾತ್ಕಾಲಿಕ ಪರಿಷ್ಕೃತ ಪಟ್ಟಿ ಪ್ರಕಟಿಸಲಾಗಿದ್ದು, ಅದರಲ್ಲಿ ಭಾರತದ ಪ್ರಧಾನಿಯ ಹೆಸರಿಲ್ಲ. ಭಾರತದಿಂದ ಒಬ್ಬ ಸಚಿವ ಪ್ರತಿನಿಧಿಸುತ್ತಾರೆ ಎಂಬ ಮಾಹಿತಿ ಪಟ್ಟಿಯಲ್ಲಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನ ಇದೇ 9ರಿಂದ ಆರಂಭವಾಗಲಿದೆ. ಇದೇ 23ರಿಂದ ಇದೇ 29ರವರೆಗೆ ಉನ್ನತ ಮಟ್ಟದ ಸಾಮಾನ್ಯ ಚರ್ಚೆ ನಡೆಯಲಿದೆ.

ಈ ಅಧಿವೇಶನದಲ್ಲಿ ವಾಡಿಕೆಯಂತೆ ಮೊದಲು ಮಾತನಾಡುವ ಅವಕಾಶ ಬ್ರೆಜಿಲ್ ನಂತರ ಅಮೆರಿಕಕ್ಕೆ ಇದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯುಎನ್‌ಜಿಎ ವೇದಿಕೆಯಲ್ಲಿ ವಿಶ್ವ ಮುಖಂಡರನ್ನು ಉದ್ದೇಶಿಸಿ ಇದೇ 23ರಂದು ಭಾಷಣ ಮಾಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಬದಲು, ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ 27ರಂದು ಭಾಷಣ ಮಾಡಲಿದ್ದಾರೆ. ಇಸ್ರೇಲ್, ಚೀನಾ, ಪಾಕಿಸ್ತಾನ, ಬಾಂಗ್ಲಾದೇಶಕ್ಕೆ ಯುಎನ್‌ಜಿಎ ವೇದಿಕೆಯಲ್ಲಿ ಮಾತನಾಡಲು ಇದೇ 26ರಂದು ಅವಕಾಶ ನೀಡಲಾಗಿದೆ. ಇಸ್ರೇಲ್-ಹಮಾ ಸಂಘರ್ಷ, ರಷ್ಯಾ-ಉಕ್ರೇನ್ ಯುದ್ಧದ ಬಗ್ಗೆಯೂ ಚರ್ಚೆ ನಡೆಯುವ ಸಾಧ್ಯತೆಗಳಿವೆ.

### ಅಫ್ಘಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಭಾರತ ಭೇಟಿ ರದ್ದು

**ನವದೆಹಲಿ:** ವಿದೇಶ ಪ್ರವಾಸಕ್ಕೆ ವಿಶ್ವಸಂಸ್ಥೆ ಭದ್ರತಾ ಮಂಡಳಿಯಿಂದ ಅನುಮತಿ ಸಿಗದ ಹಿನ್ನೆಲೆ ಅಫ್ಘಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಅವರ ಭಾರತ ಭೇಟಿ ರದ್ದಾಗಿದೆ ಎಂದು ಮೂಲಗಳು ತಿಳಿಸಿವೆ. ಮುತ್ತಕಿ ಅವರ ಭಾರತ ಭೇಟಿಯನ್ನು ಈ ತಿಂಗಳು ನಿಗದಿಪಡಿಸಲಾಗಿತ್ತು. ಯೋಜನೆಯಂತೆ ಮುತ್ತಕಿ ಅವರು ಭಾರತಕ್ಕೆ ಭೇಟಿ ನೀಡಿದ್ದರೆ, ಅಫ್ಘಾನಿಸ್ತಾನದಲ್ಲಿ ತಾಲಿಬಾನ್ ಅಧಿಕಾರ ವಹಿಸಿಕೊಂಡ ನಂತರ ಅಲ್ಲಿನ ಸಚಿವರೊಬ್ಬರ ಮೊದಲ ಭಾರತ ಭೇಟಿ ಇದಾಗುತ್ತಿತ್ತು. ತಾಲಿಬಾನ್‌ನ ಎಲ್ಲಾ ಪ್ರಮುಖ ನಾಯಕರ ವಿರುದ್ಧ ವಿಶ್ವಸಂಸ್ಥೆ ಭದ್ರತಾ ಮಂಡಳಿ ಹಲವು ನಿರ್ಬಂಧಗಳನ್ನು ಹೇರಿದೆ. ಇದರನ್ವಯ ವಿದೇಶ ಪ್ರಯಾಣಕ್ಕೆ ವಿನಾಯಿತಿ ಪಡೆಯುವುದು ಕಡ್ಡಾಯವಾಗಿದೆ. ಮೇ 15 ರಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಮುತ್ತಕಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದರು. ಈ ವೇಳೆ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಮುತ್ತಕಿ ಬಲವಾಗಿ ಖಂಡಿಸಿದ್ದರು. ಭಾರತವು ತಾಲಿಬಾನ್ ರಚನೆಯನ್ನು ಇನ್ನೂ ಗುರುತಿಸಿಲ್ಲ. ಆದರೆ ಯಾವುದೇ ದೇಶದ ವಿರುದ್ಧ ಭಯೋತ್ಪಾದಕ ಚಟುವಟಿಕೆಗಳಿಗೆ ಅಫ್ಘಾನಿಸ್ತಾನದ ನೆಲವನ್ನು ಬಳಸಬಾರದು ಎಂದು ಒತ್ತಾಯಿಸಿದೆ.

# ರೆಸ್ಟೋರೆಂಟ್ ಕ್ಲೋಸ್ ಮಾಡುವುದರ ಹಿಂದಿನ ಕಾರಣ

ಶಿಲ್ಪಾ ಶೆಟ್ಟಿ ಅವರ ಬಾಂದ್ರಾದ ಬಾಸ್ಟಿಯನ್ ರೆಸ್ಟೋರೆಂಟ್ ಮುಚ್ಚುವಿಕೆಯ ಬಗ್ಗೆ ಹರಡುತ್ತಿದ್ದ ವದಂತಿಗಳಿಗೆ ಸ್ಪಷ್ಟನೆ ನೀಡಿದ್ದಾರೆ. ಆರ್ಥಿಕ ಸಮಸ್ಯೆಗಳಿಂದಲ್ಲ, ಬದಲಾಗಿ ಹೊಸ ದಕ್ಷಿಣ ಭಾರತೀಯ ರೆಸ್ಟೋರೆಂಟ್ 'ಅಮ್ಮಕೈ' ಅದೇ ಸ್ಥಳದಲ್ಲಿ ತೆರೆಯಲಾಗುತ್ತಿದೆ ಎಂದು ಹೇಳಿದ್ದಾರೆ. ಜೊತೆಗೆ, ಜುಹುದಲ್ಲಿ ಮತ್ತೊಂದು ಬಾಸ್ಟಿಯನ್ ರೆಸ್ಟೋರೆಂಟ್ ತೆರೆಯುವ ಯೋಜನೆಯನ್ನೂ ಅವರು ಘೋಷಿಸಿದ್ದಾರೆ. ಬಾಲಿವುಡ್‌ನ ಖ್ಯಾತ ನಟಿ ಶಿಲ್ಪಾ ಶೆಟ್ಟಿ ಆರ್ಥಿಕ ಸಮಸ್ಯೆಯಿಂದಾಗಿ ಬಾಂದ್ರಾದಲ್ಲಿರುವ ತಮ್ಮ ರೆಸ್ಟೋರೆಂಟ್ ಅನ್ನು ಮುಚ್ಚಲಿದ್ದಾರೆ ಎಂಬ ಮಾಹಿತಿ ಹೊರಬಿದ್ದಿತ್ತು.



ಆದರೆ ಇದರ ಹಿಂದಿನ ನಿಜವಾದ ಸತ್ಯವೇನು ಶಿಲ್ಪಾ ಈ ಬಗ್ಗೆ ಮೌನ ಮುರಿದಿದ್ದಾರೆ. ಶಿಲ್ಪಾ ರೆಸ್ಟೋರೆಂಟ್ ಬಗ್ಗೆ ಸಾಕಷ್ಟು ಮಾಹಿತಿ ನೀಡಿದ್ದಾರೆ. ನಟಿ ಪ್ರಸ್ತುತ ರೆಸ್ಟೋರೆಂಟ್ ಮುಚ್ಚುವ ದರ ಹಿಂದಿನ ಕಾರಣ ಹೇಳಿದ್ದಾರೆ. ಅದನ್ನು ನಡೆಸುವಲ್ಲಿ ಯಾವುದೇ ಆರ್ಥಿಕ ಸಮಸ್ಯೆ ಇಲ್ಲ ಎಂದು ಹೇಳಿದ್ದಾರೆ. 'ಹಳೆಯ ರೆಸ್ಟೋರೆಂಟ್ ಮುಚ್ಚಿದ ಜಾಗದಲ್ಲೇ, ಶೀಘ್ರದಲ್ಲೇ ಹೊಸ ದಕ್ಷಿಣ ಭಾರತೀಯ ರೆಸ್ಟೋರೆಂಟ್ ತೆರೆಯಲಾಗುವುದು. ಮತ್ತೊಂದೆಡೆ, ಜುಹುದಲ್ಲಿ 'ಬಾಸ್ಟಿಯನ್' ಹೆಸರಿನ ಮತ್ತೊಂದು ರೆಸ್ಟೋರೆಂಟ್ ತೆರೆಯಲಾಗುವುದು ಎಂದು ಶಿಲ್ಪಾ ತಿಳಿಸಿದ್ದಾರೆ. 'ನೀವು ಕಷ್ಟಪಟ್ಟು ಕೆಲಸ ಮಾಡಿ ಖ್ಯಾತಿಯನ್ನು ಗಳಿಸಿದಾಗ, ಕೆಲವು ವದಂತಿಗಳು ನಿಮ್ಮ ಜೊತೆ ತಳುಕು ಹಾಕಿಕೊಳ್ಳುತ್ತವೆ. ನಮ್ಮ ನಿಜವಾದ ಆರಂಭವು ಬಾಂದ್ರಾದಿಂದ. ಈ ಅಧ್ಯಾಯವು ಮುಕ್ತಾಯಗೊಳ್ಳುತ್ತದೆ, ಇನ್ನೂ ಎರಡು ಅಧ್ಯಾಯಗಳು ಪ್ರಾರಂಭವಾಗಲಿವೆ. ಅವು ನಿಮಗಾಗಿ ಕಾಯುತ್ತಿವೆ.

ನಮ್ಮ ಬ್ರ್ಯಾಂಡ್ ಹೊಸ ಪ್ರಯಾಣವನ್ನು ಪ್ರಾರಂಭಿಸಲಿದೆ ಶೀಘ್ರದಲ್ಲೇ ಅದರ ಬಗ್ಗೆ ನಿಮಗೆ ತಿಳಿಸಲಾಗುವುದು' ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಬಾಸ್ಟಿಯನ್ ಬಾಂದ್ರಾ ಔಟ್ಲೆಟ್ ಅನ್ನು ಈಗ 'ಅಮ್ಮಕೈ' ಎಂಬ ದಕ್ಷಿಣ ಭಾರತೀಯ ರೆಸ್ಟೋರೆಂಟ್ ಆಗಿ ಪರಿವರ್ತಿಸಲಾಗುತ್ತಿದೆ ಎಂದು ಶಿಲ್ಪಾ ಶೆಟ್ಟಿ ಹೇಳಿದರು. ಬ್ರ್ಯಾಂಡ್ ಜುಹುಗೆ ಸ್ಥಳಾಂತರಗೊಳ್ಳುತ್ತಿದ್ದು, ಬಾಸ್ಟಿಯನ್ ಬೀಚ್ ಕ್ಲಬ್ ಮತ್ತೆ ತೆರೆಯಲಿದೆ ಎಂದು ನಟಿ ಹೇಳಿದರು. ಶಿಲ್ಪಾ ಕಳೆದ ಕೆಲವು ದಿನಗಳಿಂದ ವಿವಾದದಲ್ಲಿ ಸಿಲುಕಿದ್ದಾರೆ. ನಟಿ ಮೋಸ ಮಾಡಿದಂತಹ ಗಂಭೀರ ಆರೋಪಗಳನ್ನು ಹಲವರು ಮಾಡಿದ್ದಾರೆ.

# ಹೇಗಿದ್ದ ಕಲ್ಯಾಣಿ ಹೇಗಾದ್ರು ನೋಡಿ

ಕಲ್ಯಾಣಿ ಪ್ರಿಯದರ್ಶನ್ ಅವರು ತಮ್ಮ ತೂಕ ಇಳಿಕೆ ಮತ್ತು ಫಿಟ್ನೆಸ್ ಪ್ರಯಾಣದ ಮೂಲಕ ಸಾಕಷ್ಟು ಪ್ರೇರಣೆಯಾಗಿದ್ದಾರೆ. ಲೋಕಃ ಚಿತ್ರದ ಯಶಸ್ಸಿನೊಂದಿಗೆ, ಅವರ ಫಿಟ್ನೆಸ್ ಪ್ರಯಾಣ ಮತ್ತು ಆರೋಗ್ಯಕರ ಜೀವನಶೈಲಿಯ ಬಗ್ಗೆ ತಿಳಿದುಕೊಳ್ಳಲು ಅನೇಕರು ಉತ್ಸುಕರಾಗಿದ್ದಾರೆ. ಅವರ ಪರಿಶ್ರಮ ಮತ್ತು ಡೆಡಿಕೇಷನ್ ಇತರರಿಗೆ ಸ್ಫೂರ್ತಿ ನೀಡುತ್ತದೆ. ನಾನು ದಪ್ಪಗಿದ್ದೇನೆ, ನಾನು ಸುಂದರವಾಗಿಲ್ಲ ಎಂಬ ಕೊರಗು ಅನೇಕರಲ್ಲಿ ಇರುತ್ತದೆ. ಆದರೆ, ಡೆಡಿಕೇಷನ್ ಎಂಬುದು ಒಂದಿದ್ದರೆ ಏನು ಬೇಕಿದ್ದರೂ ಸಾಧಿಸಬಹುದು ಎಂಬುದಕ್ಕೆ ನಟಿ ಕಲ್ಯಾಣಿ ಪ್ರಿಯದರ್ಶನ್ ಅವರು ಉತ್ತಮ ಉದಾಹರಣೆ. ಅವರ ಈ ಮೊದಲಿನ ಫೋಟೋಗಳು ಹಾಗೂ ಈಗಿನ ಫೋಟೋಗಳನ್ನು ಹೋಲಿಕೆ ಮಾಡಿ ನೋಡಿದರೆ ಅಜ ಗಜಾಂತರ ವ್ಯತ್ಯಾಸ ಇದೆ. ಅವರ ಟ್ರಾನ್ಸ್‌ಫಾರ್ಮೇಷನ್‌ನ ಅನೇಕರು ಹೊಗಳಿದ್ದಾರೆ. ಕಲ್ಯಾಣಿ ಪ್ರಿಯದರ್ಶನ್ ಅವರು 'ಲೋಕಃ: ಚಾಪ್ಟರ್ 1 – ಚಂದ್ರ' ಸಿನಿಮಾ ಇತ್ತೀಚೆಗೆ ರಿಲೀಸ್ ಆಗಿ ಮೆಚ್ಚುಗೆ ಪಡೆದಿದೆ. ಈ ಚಿತ್ರ ಒಳ್ಳೆಯ ಕಲೆಕ್ಷನ್ ಮಾಡುತ್ತಿದೆ. ಈ ಸಿನಿಮಾ ರಾಜ್ ಬಿ. ಶೆಟ್ಟಿ ಅವರು ಕರ್ನಾಟಕದಲ್ಲಿ ಹಂಚಿಕೆ ಮಾಡುತ್ತಿದ್ದಾರೆ. ಈ ಚಿತ್ರವನ್ನು ದುಲ್ಕರ್ ಸಲ್ಮಾನ್ ಅವರು ನಿರ್ಮಾಣ ಮಾಡಿದ್ದಾರೆ. ಈ ಚಿತ್ರದಲ್ಲಿ ಅವರು ದಂತದ ಗೊಂಬೆ ರೀತಿ ಕಾಣಿಸುತ್ತಾರೆ. ಕಲ್ಯಾಣಿ ಪ್ರಿಯದರ್ಶನ್ ಅವರು ಆರಂಭದ ದಿನಗಳಲ್ಲಿ ದಪ್ಪ ಇದ್ದರು.



ಅವರು ಫಿಟ್ನೆಸ್‌ಗೆ ಹೆಚ್ಚು ಆದ್ಯತೆ ನೀಡುತ್ತಾ ಇರಲಿಲ್ಲ. ಆದರೆ, ದಿನ ಕಳೆದಂತೆ ಅವರಿಗೆ ಆರೋಗ್ಯದ ಕಡೆ ಗಮನ ಬಂತು. ಈ ಕಾರಣದಿಂದಲೇ ಅವರು ಆಹಾರದ ಬಗ್ಗೆ ಗಮನ ಹರಿಸಿದರು. ನಿತ್ಯ ಜಿಮ್‌ನಲ್ಲಿ ವರ್ಕೌಟ್ ಕೂಡ ಮಾಡಿದರು. ಈ ಎಲ್ಲಾ ಕಾರಣದಿಂದ ಈಗ ಅವರು ಫಿಟ್ ಆಗಿದ್ದಾರೆ. ಲೆಜೆಂಡರಿ ಸಿನಿಮಾ ನಿರ್ದೇಶಕ ಪ್ರಿಯದರ್ಶನ್ ಹಾಗೂ ಖ್ಯಾತ ಮಲಯಾಳಂ ನಟಿ ಲಿಸ್ಸಿ ಅವರ ಪುತ್ರಿ ಕಲ್ಯಾಣಿ. 'ಹೃದಯಂ' ಸಿನಿಮಾದಲ್ಲಿ ನಟಿಸಿ ಕಲ್ಯಾಣಿ ಹೆಚ್ಚು ಜನಪ್ರಿಯತೆ ಪಡೆದಿದ್ದಾರೆ. ಆ ಬಳಿಕ ಹಲವು ಸಿನಿಮಾಗಳಲ್ಲಿ ಕಲ್ಯಾಣಿ ನಟಿಸಿದ್ದಾರೆ. ಅವರ ಜನಪ್ರಿಯತೆ ಈಗ ಸಾಕಷ್ಟು ಹೆಚ್ಚಾಗಿದೆ. ಲೋಕಃ ಸಿನಿಮಾದಲ್ಲಿ ಅವರು ಸೂಪರ್ ವುಮನ್ ಪಾತ್ರ ಮಾಡಿದ್ದಾರೆ. ಅವರ ಪಾತ್ರವನ್ನು ಎಲ್ಲರೂ ಮೆಚ್ಚಿಕೊಂಡಿದ್ದಾರೆ.

# ದಂತದ ಗೊಂಬೆ ರೀತಿ ಕಾಣಿಸುತ್ತಿದ್ದಾರೆ ಧನ್ಯಾ


ನಟಿ ಧನ್ಯಾ ರಾಮ್‌ಕುಮಾರ್ ಅವರು ಆಗಾಗ ಹೊಸ ಹೊಸ ಫೋಟೋಗಳನ್ನು ಹಂಚಿಕೊಂಡು ಗಮನ ಸೆಳೆಯುತ್ತಾರೆ. ಈಗ ಅವರ ಹೊಸ ಫೋಟೋಗಳು ವೈರಲ್ ಆಗಿ ಗಮನ ಸೆಳೆದಿವೆ. ಅವರ ಫೋಟೋಗೆ ಫ್ಯಾನ್ಸ್ ಕಡೆಯಿಂದ ಭರ್ಜರಿ ಲೈಕ್ಸ್ ಸಿಗುತ್ತಿವೆ. ಈ ಫೋಟೋಗಳನ್ನು ಅನೇಕರು ಇಷ್ಟಪಟ್ಟಿದ್ದಾರೆ. ಧನ್ಯಾ ರಾಮ್‌ಕುಮಾರ್ ಹೊಸ ಫೋಟೋಗಳು ವೈರಲ್ ಆಗಿ ಗಮನ ಸೆಳೆದಿವೆ. ಅವರು ದೇಶ–ವಿದೇಶ ಸುತ್ತುತ್ತಾ ಇದ್ದಾರೆ. ಈ ಸಂದರ್ಭದಲ್ಲಿ ತೆಗೆದ ಫೋಟೋಗಳು ಇವಾಗಿವೆ. ಈ ಫೋಟೋಗೆ ಫ್ಯಾನ್ಸ್ ಕಡೆಯಿಂದ ಮೆಚ್ಚುಗೆ ಸಿಕ್ಕಿದೆ. ಧನ್ಯಾ ಅವರು ಸಖತ್ ಗ್ಲಾಮರಸ್ ಆಗಿ ಕಾಣಿಸಿದ್ದಾರೆ. ಅವರ ನೋಟ ಕಣ್ಣು ಕುಕ್ಕುವ ರೀತಿಯಲ್ಲಿ ಇದೆ. ಧನ್ಯಾ ಸಂಜೆ ವೇಳೆ ಸಮುದ್ರ ತೀರದಲ್ಲಿ ನಿಂತು ಪೋಸ್ ಕೊಟ್ಟಿದ್ದಾರೆ. ಇದಕ್ಕೆ ಅನೇಕರು ಹಾರ್ಟ್ ಎಮೋಜಿ ಕಮೆಂಟ್ ಮಾಡಿದ್ದಾರೆ. ಧನ್ಯಾ ರಾಮ್‌ಕುಮಾರ್ ಅವರು ಖ್ಯಾತ ನಟ ರಾಮ್‌ಕುಮಾರ್ ಮಗಳು. 2021ರಿಂದ ಅವರು ಚಿತ್ರರಂಗದಲ್ಲಿ ಆಯಕ್ಟೀವ್ ಆಗಿದ್ದಾರೆ. ಅವರು ಮಾಡೆಲ್ ಕೂಡ ಹೌದು. 2021ರಲ್ಲಿ ತೆರೆಗೆ ಬಂದ 'ನಿನ್ನ ಸನಿಹಕೆ' ಚಿತ್ರದಲ್ಲಿ ಅವರು ಮೊದಲ ಬಾರಿಗೆ ನಟಿಸಿದರು. ಈ ಸಿನಿಮಾದಲ್ಲಿ 'ಅಮೃತಾ' ಹೆಸರಿನ ಪಾತ್ರವನ್ನು ಅವರು ಮಾಡಿದ್ದರು. ಆ ಬಳಿಕ ಅವರು ಕೆಲವು ಸಿನಿಮಾಗಳಲ್ಲಿ ನಟಿಸಿದರು.



ಸಾಥ್ ಕೊಟ್ಟ ನಿರ್ಮಾಪಕಿ ರಕ್ಷಾ

# ಸೈಮಾನಲ್ಲಿ ಕನ್ನಡಿಗರಿಗೆ ಅವಮಾನ

ದುಬೈನಲ್ಲಿ ನಡೆಯುತ್ತಿರುವ 'ಸೈಮಾ 2025'ನಲ್ಲಿ ಕನ್ನಡದ ಅತ್ಯುತ್ತಮ ಸಿನಿಮಾ, ತಂತ್ರಜ್ಞರಿಗೆ ಪ್ರಶಸ್ತಿ ನೀಡಲಾಗಿದೆ. ಆದರೆ ಕಾರ್ಯಕ್ರಮದಲ್ಲಿ ಕನ್ನಡದ ಸೆಲೆಬ್ರಿಟಿಗಳಿಗೆ ಅವಮಾನ ಮಾಡಲಾಗಿದೆ ಎಂಬ ಆರೋಪ ಕೇಳಿ ಬಂದಿದೆ. ನಟ ದುನಿಯಾ ವಿಜಯ್ ಅವರು ನಿಜಕ್ಕೂ ಸೈಮಾನಲ್ಲಿ ನಡೆದಿದ್ದೇನು ಎಂದು ವಿವರಿಸಿದ್ದಾರೆ. ಸೈಮಾ 2025 ಪ್ರಶಸ್ತಿ ವಿತರಣೆ ಸಮಾರಂಭ ದುಬೈನಲ್ಲಿ ನಡೆಯುತ್ತಿದೆ. ಸೆಪ್ಟೆಂಬರ್ 05 ನಡೆದ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ತೆಲುಗು ಭಾಷೆಯ ನಟ-ನಟಿಯರು ಮತ್ತು ತಂತ್ರಜ್ಞರುಗಳಿಗೆ ಪ್ರಶಸ್ತಿ ನೀಡಲಾಗಿದೆ. ಆದರೆ ನಿನ್ನೆ ನಡೆದ ಕಾರ್ಯಕ್ರಮದಲ್ಲಿ ಕನ್ನಡಿಗರಿಗೆ ಅವಮಾನ ಮಾಡಲಾಗಿದೆ ಎಂಬ ಆರೋಪ ಕೇಳಿ ಬಂದಿದೆ. ಅಸಲಿಗೆ ಈ ಹಿಂದೆಯೂ ಸಹ ಕನ್ನಡಿಗರು ಸೈಮಾನಲ್ಲಿ ಅವಮಾನ ಎದುರಿಸಿದ್ದರು. ಆದರೆ ನಿನ್ನೆಯ ಕಾರ್ಯಕ್ರಮದಲ್ಲಿ ನಡೆದ ಅವಮಾನವನ್ನು ನಟ ದುನಿಯಾ ವಿಜಯ್ ನೇರವಾಗಿ ಕಾರ್ಯಕ್ರಮದ ವೇದಿಕೆಯಲ್ಲಿಯೇ ಕಟು ಶಬ್ದಗಳಲ್ಲಿ ಖಂಡಿಸಿದ್ದಾರೆ. ನಿನ್ನೆ ಸೈಮಾನಲ್ಲಿ ನಡೆದಿದ್ದೇನು ಎಂಬುದನ್ನು ವಿವರವಾಗಿ ವಿವರಿಸಿದ್ದಾರೆ. ಟಿವಿ9 ಜೊತೆಗೆ ಮಾತನಾಡಿದ ದುನಿಯಾ ವಿಜಯ್, 'ಇನ್ನು ಮುಂದೆ ನಾನು ಸೈಮಾಕ್ಕೆ ಹೋಗಬಾರದು ಎಂದು ನಿರ್ಧರಿಸಿದ್ದೇನೆ. ನಾನು ಮಾತ್ರವಲ್ಲ ನಾಳೆ ನನ್ನ ಮಕ್ಕಳಿಗೆ ಪ್ರಶಸ್ತಿ ಕೊಟ್ಟರೂ ಅದನ್ನೂ ಸ್ವೀಕರಿಸದಿರುವಂತೆ ಹೇಳಲಿದ್ದೇನೆ' ಎಂದು ಬಲು ಬೇಸರದಿಂದಲೇ ಹೇಳಿದರು. ನಿಜಕ್ಕೂ ನಿನ್ನೆ ನಡೆದಿದ್ದೇನು ಎಂಬ ಪ್ರಶ್ನೆಗೆ ಉತ್ತರಿಸಿದ ನಟ ದುನಿಯಾ ವಿಜಯ್, 'ಮೊದಲು ತೆಲುಗು ನಟರಿಗೆ ಪ್ರಶಸ್ತಿಗಳನ್ನು ನೀಡಲಾಯ್ತು. ಆದರೆ ಕನ್ನಡಿಗರಿಗೆ ಪ್ರಶಸ್ತಿ ನೀಡುವುದನ್ನು ಉದ್ದೇಶಪೂರ್ವಕವಾಗಿ ತಡ ಮಾಡಿದರು.



# ಬಾಲಿವುಡ್‌ನಲ್ಲಿ ಗೆದ್ದ ಎ.ಹರ್ಷ

ಕನ್ನಡದ ಪ್ರತಿಭಾನ್ವಿತ ನಿರ್ದೇಶಕ ಎ. ಹರ್ಷ ಅವರು ಬಾಲಿವುಡ್‌ನಲ್ಲಿ ತಮ್ಮ ಮೊದಲ ಸಿನಿಮಾ 'ಬಾಘಿ 4' ಮೂಲಕ ದೊಡ್ಡ ಯಶಸ್ಸು ಕಂಡಿದ್ದಾರೆ. ಟೈಗರ್ ಶ್ರಾಫ್ ಅಭಿನಯದ ಈ ಚಿತ್ರವು ಬಿಡುಗಡೆಯ ಮೊದಲ ದಿನವೇ ಭಾರಿ ಗಳಿಕೆ ಮಾಡಿದೆ. ಈ ಯಶಸ್ಸಿನ ಹಿಂದೆ ದಕ್ಷಿಣ ಭಾರತದ ಸಿನಿಮಾ ನಿರ್ಮಾಣ ಶೈಲಿಯ ಪ್ರಭಾವವಿದೆ ಎಂದು ಹೇಳಲಾಗುತ್ತಿದೆ. ಕನ್ನಡದ ನಿರ್ದೇಶಕ ಎ.ಹರ್ಷ ಅವರು ಬಾಲಿವುಡ್‌ಗೆ ಹೋಗಿ ಸದ್ದು ಮಾಡಿದ್ದಾರೆ. ಹೌದು, ಅವರ ನಿರ್ದೇಶನದ 'ಬಾಘಿ 4' ಸಿನಿಮಾ ಸೆಪ್ಟೆಂಬರ್ 5ರಂದು ರಿಲೀಸ್ ಆಗಿ ಮೆಚ್ಚುಗೆ ಪಡೆದಿದೆ. ನಟ ಟೈಗರ್ ಶ್ರಾಫ್ ಅವರು ಈ ಚಿತ್ರದ ಹೀರೋ. ಟೈಗರ್ ಸಿನಿಮಾ ಎಂದರೆ ಕೇವಲ ಫೈಟ್ ಹಾಗೂ ವೈಲೆನ್ಸ್‌ಗಳು ಮಾತ್ರ ಇರುತ್ತಿದ್ದವು. ಆದರೆ, ಈ ಸಿನಿಮಾ ಭಿನ್ನವಾಗಿದೆ ಎಂಬ





ಬಾಘಿ 4 ಕಲೆಕ್ಷನ್ ಇಷ್ಟೊಂದಾ

ಅಭಿಪ್ರಾಯ ಮೂಡಿ ಬಂದಿದೆ. ಈ ಸಿನಿಮಾ ಮೊದಲ ದಿನ ಒಳ್ಳೆಯ ಕಲೆಕ್ಷನ್ ಮಾಡಿದೆ. 'ಬಾಘಿ' ಸಿನಿಮಾ ಸರಣಿಯಲ್ಲಿ ಈಗಾಗಲೇ ನಾಲ್ಕು ಸಿನಿಮಾಗಳು ಬಂದು ಹೋಗಿವೆ. ಮೊದಲ ಪಾರ್ಟ್‌ಗಿಂತ ಎರಡನೇ ಪಾರ್ಟ್ ಚಾರ್ಮ್ ಕಳೆದುಕೊಂಡಿತ್ತು. ಮೂರನೇ ಪಾರ್ಟ್ ಸಾಧಾರಣ ಎನಿಸಿಕೊಂಡಿತ್ತು. ಆದರೆ, ಬಿಸ್ನೆಸ್ ದೃಷ್ಟಿಯಿಂದ ಸಿನಿಮಾ ಒಳ್ಳೆಯ ಕಲೆಕ್ಷನ್ ಮಾಡಿತ್ತು. ಹೀಗಾಗಿ, ನಿರ್ಮಾಪಕರು ನಾಲ್ಕನೇ ಪಾರ್ಟ್ ಮಾಡಿದ್ದಾರೆ. ಇದಕ್ಕೆ ಕನ್ನಡದ ನಿರ್ದೇಶಕ ಎ. ಹರ್ಷ ಆಕ್ಷನ್ ಹೇಳಿದ್ದಾರೆ. ಅವರು ಬಾಲಿವುಡ್‌ನಲ್ಲಿ ಗೆದ್ದಿದ್ದಾರೆ. 'ಬಾಘಿ 4' ಸಿನಿಮಾ ಮೊದಲ ದಿನ ಬರೋಬ್ಬರಿ 12 ಕೋಟಿ ರೂಪಾಯಿ ಕಲೆಕ್ಷನ್ ಮಾಡಿದೆ. ಈ ಚಿತ್ರಕ್ಕೆ ಒಳ್ಳೆಯ ವಿಮರ್ಶೆ ಸಿಕ್ಕಿದೆ. ಬುಕ್ ಮೈ ಶೋನಲ್ಲಿ 8+ರೇಟಿಂಗ್ ಚಿತ್ರಕ್ಕೆ ಸಿಕ್ಕಿದೆ. ಹೀಗಾಗಿ, ಶನಿವಾರ ಹಾಗೂ ಭಾನುವಾರ ಸಿನಿಮಾ ಒಳ್ಳೆಯ ಕಲೆಕ್ಷನ್ ಮಾಡುವ ನಿರೀಕ್ಷೆ ಇದೆ. ಈ ಚಿತ್ರ 100+ ಕೋಟಿ ರೂಪಾಯಿ ಕಲೆಕ್ಷನ್ ಮಾಡಿದರೆ ಹರ್ಷಗೆ ಬಾಲಿವುಡ್ ಆಫರ್ ಹೆಚ್ಚಲಿದೆ.

ದಕ್ಷಿಣ ನಿರ್ದೇಶಕರ ಸಿನಿಮಾ ಮೇಕಿಂಗ್ ಸ್ಟೈಲ್‌ಗೂ ಬಾಲಿವುಡ್ ಸಿನಿಮಾ ನಿರ್ದೇಶಕರ ಶೈಲಿಗೂ ಸಾಕಷ್ಟು ವ್ಯತ್ಯಾಸ ಇದೆ.

# ಅಫ್ಘಾನ್ ಪಡೆಯ ನಾಗಾಲೋಟಕ್ಕೆ ಪಾಕ್ ದಾಖಲೆ ಉಡೀಸ್

ಟಿ20 ಕ್ರಿಕೆಟ್‌ನಲ್ಲಿ ಒಂದೇ ಮೈದಾನದಲ್ಲಿ ಅತ್ಯಧಿಕ ಗೆಲುವು ದಾಖಲಿಸಿದ ವಿಶೇಷ ವಿಶ್ವ ದಾಖಲೆ ಬಾಂಗ್ಲಾದೇಶ್ ತಂಡದ ಹೆಸರಿನಲ್ಲಿದೆ. ಈ ದಾಖಲೆ ಮುರಿಯುವತ್ತ ಇದೀಗ ಅಫ್ಘಾನಿಸ್ತಾನ್ ತಂಡ ದಾಪುಗಾಲಿಟ್ಟಿದೆ. ಅದು ಕೂಡ ಪಾಕಿಸ್ತಾನ್ ತಂಡದ ದಾಖಲೆ ಮುರಿಯುವ ಮೂಲಕ ಎಂಬುದು ವಿಶೇಷ.

ಶಾರ್ಜಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಯುಎಇ ವಿರುದ್ಧದ ಪಂದ್ಯದಲ್ಲಿ ಅಫ್ಘಾನಿಸ್ತಾನ್ ತಂಡ ರೋಚಕ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಅಫ್ಘಾನಿಸ್ತಾನ್ ತಂಡವು ಮೊದಲು ಬ್ಯಾಟಿಂಗ್ ಮಾಡಿ 20 ಓವರ್‌ಗಳಲ್ಲಿ 170 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ ಯುಎಇ ತಂಡ 20 ಓವರ್‌ಗಳಲ್ಲಿ 166 ರನ್‌ಗಳಿಸಲಷ್ಟೇ ಶಕ್ತರಾಗಿದ್ದರು. ಈ ಮೂಲಕ ಅಫ್ಘಾನಿಸ್ತಾನ್ ತಂಡವು 4 ರನ್‌ಗಳ ರೋಚಕ ಜಯ ಸಾಧಿಸಿದೆ.



4 ರನ್‌ಗಳ ರೋಚಕ ಗೆಲುವು

ಈ ರೋಚಕ ಗೆಲುವಿನೊಂದಿಗೆ ಅಫ್ಘಾನ್ ಪಡೆ ಟಿ20 ಕ್ರಿಕೆಟ್‌ನಲ್ಲಿ ವಿಶೇಷ ದಾಖಲೆ ಬರೆದರು. ಅದು ಸಹ ಒಂದೇ ಮೈದಾನದಲ್ಲಿ 20 ಗೆಲುವು ದಾಖಲಿಸುವ ಮೂಲಕ ಎಂಬುದು ವಿಶೇಷ. ಈ ಹಿಂದೆ ಶಾರ್ಜಾ ಮೈದಾನದಲ್ಲಿ ಅತ್ಯಧಿಕ ಗೆಲುವು ದಾಖಲಿಸಿದ ದಾಖಲೆ ಪಾಕಿಸ್ತಾನ್ ತಂಡದ ಹೆಸರಿನಲ್ಲಿತ್ತು. ಪಾಕ್ ಪಡೆಯು ಶಾರ್ಜಾ ಕ್ರಿಕೆಟ್ ಸ್ಟೇಡಿಯಂನಲ್ಲಿ ಆಡಿದ 32 ಪಂದ್ಯಗಳಲ್ಲಿ 18 ಗೆಲುವು ದಾಖಲಿಸಿ ಈ ವಿಶೇಷ ದಾಖಲೆ ನಿರ್ಮಿಸಿತ್ತು. ಆದರೆ ಈ ಬಾರಿಯ ತ್ರಿಕೋನ ಸರಣಿಯ ಮೂಲಕ ಪಾಕ್ ದಾಖಲೆ ಮುರಿಯುವಲ್ಲಿ ಅಫ್ಘಾನಿಸ್ತಾನ್ ಯಶಸ್ವಿಯಾಗಿದೆ. ಶಾರ್ಜಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಪಾಕಿಸ್ತಾನ್ ವಿರುದ್ಧದ ಟಿ20 ಪಂದ್ಯದಲ್ಲಿ 18 ರನ್‌ಗಳ ಜಯ ಸಾಧಿಸಿದ್ದ ಅಫ್ಘಾನಿಸ್ತಾನ್ ತಂಡವು ಇದೀಗ ಯುಎಇ ವಿರುದ್ಧ 4 ರನ್‌ಗಳ ರೋಚಕ ಗೆಲುವು ದಾಖಲಿಸಿದೆ. ಈ ಗೆಲುವುಗಳೊಂದಿಗೆ ಶಾರ್ಜಾ ಮೈದಾನದಲ್ಲಿ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ಜಯ ಸಾಧಿಸಿದ ತಂಡ ಎನಿಸಿಕೊಂಡಿದೆ.

ಶಾರ್ಜಾ ಕ್ರಿಕೆಟ್ ಮೈದಾನದಲ್ಲಿ ಅಫ್ಘಾನಿಸ್ತಾನ್ ತಂಡವು ಈವರೆಗೆ 29 ಪಂದ್ಯಗಳನ್ನಾಡಿದ್ದಾರೆ. ಇಪ್ಪತ್ತೊಂಬತ್ತು ಮ್ಯಾಚ್‌ಗಳಲ್ಲಿ 20 ಪಂದ್ಯಗಳಲ್ಲಿ ಅಫ್ಘಾನ್ ಪಡೆ ಜಯ ಸಾಧಿಸಿದೆ. ಈ ಮೂಲಕ ಪಾಕ್ ತಂಡದ ಹೆಸರಿನಲ್ಲಿದ್ದ ದಾಖಲೆ ಮುರಿದು ಅಫ್ಘಾನಿಸ್ತಾನ್ ತಂಡ ಶಾರ್ಜಾದಲ್ಲಿ ಹೊಸ ಇತಿಹಾಸ ನಿರ್ಮಿಸಿದೆ. ಇನ್ನು ಟಿ20 ಕ್ರಿಕೆಟ್ ಇತಿಹಾಸದಲ್ಲಿ ಒಂದೇ ಮೈದಾನದಲ್ಲಿ ಅತ್ಯಧಿಕ ಗೆಲುವು ದಾಖಲಿಸಿದ ವಿಶ್ವ ದಾಖಲೆ ಬಾಂಗ್ಲಾದೇಶ್ ತಂಡದ ಹೆಸರಿನಲ್ಲಿದೆ. ಬಾಂಗ್ಲಾದೇಶ್ ತಂಡವು ಶೇರೆ ಬಾಂಗ್ಲಾ ನ್ಯಾಷನಲ್ ಸ್ಟೇಡಿಯಂನಲ್ಲಿ ಆಡಿದ 48 ಪಂದ್ಯಗಳಲ್ಲಿ 24 ಗೆಲುವು ದಾಖಲಿಸಿ ಈ ದಾಖಲೆ ಬರೆದಿದೆ. ಇದೀಗ ಶಾರ್ಜಾ ಕ್ರಿಕೆಟ್ ಸ್ಟೇಡಿಯಂನಲ್ಲಿ 20 ಗೆಲುವು ದಾಖಲಿಸುವ ಮೂಲಕ ಅಫ್ಘಾನಿಸ್ತಾನ್ ತಂಡ ಒಂದೇ ಮೈದಾನದಲ್ಲಿ ಅತೀ ಹೆಚ್ಚು ವಿಜಯ ಸಾಧಿಸಿದ ವಿಶ್ವದ 2ನೇ ತಂಡ ಎನಿಸಿಕೊಂಡಿದೆ.

# ಕೊನೆಯ ಎಸೆತದಲ್ಲಿ 2 ರನ್ ಓಡಿ ಪಂದ್ಯ ಗೆದ್ದ ಫಾಲ್ಕನ್ಸ್

ಅಂಡ್ರಿಸ್ ಗೌಸ್ ಭರ್ಜರಿ ಬ್ಯಾಟಿಂಗ್



ಕೆರಿಬಿಯನ್ ಪ್ರೀಮಿಯರ್ ಲೀಗ್‌ನ 22ನೇ ಪಂದ್ಯವು ರಣರೋಚಕ ಹೋರಾಟಕ್ಕೆ ಸಾಕ್ಷಿಯಾಗಿತ್ತು. ಕೆನ್ಸಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಬಾರ್ಬಡೋಸ್ ರಾಯಲ್ಸ್ ಮತ್ತು ಅಂಟಿಗುವಾ ಅಂಡ್ ಬಾರ್ಬುಡಾ ಫಾಲ್ಕನ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಮ್ಯಾಚ್‌ನಲ್ಲಿ ಟಾಸ್ ಗೆದ್ದ ಅಂಟಿಗುವಾ ಅಯಂಡ್ ಬಾರ್ಬುಡಾ ಫಾಲ್ಕನ್ಸ್ ತಂಡದ ನಾಯಕ ಇಮಾದ್ ವಾಸಿಂ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಬಾರ್ಬಡೋಸ್ ರಾಯಲ್ಸ್ ಪರ ಬ್ರ್ಯಾಂಡನ್ ಕಿಂಗ್ 65 ಎಸೆತಗಳಲ್ಲಿ 7 ಭರ್ಜರಿ ಸಿಕ್ಸ್ ಹಾಗೂ 6 ಫೋರ್‌ಗಳೊಂದಿಗೆ ಅಜೇಯ 98 ರನ್ ಬಾರಿಸಿದ್ದರು. ಈ ಸ್ಫೋಟಕ ಬ್ಯಾಟಿಂಗ್ ನೆರವಿನೊಂದಿಗೆ ಬಾರ್ಬಡೋಸ್ ರಾಯಲ್ಸ್ ತಂಡವು 20 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 187 ರನ್ ಕಲೆಹಾಕಿತು.

188 ರನ್‌ಗಳ ಗುರಿ ಬೆನ್ನತ್ತಿದ ಅಂಟಿಗುವಾ ಅಯಂಡ್ ಬಾರ್ಬುಡಾ ಫಾಲ್ಕನ್ಸ್ ಪರ ಅಂಡ್ರಿಸ್ ಗೌಸ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದರು. ಪರಿಣಾಮ ಕೊನೆಯ ಓವರ್‌ನಲ್ಲಿ ಫಾಲ್ಕನ್ಸ್ ಪಡೆಗೆ ಗೆಲ್ಲಲು 12 ರನ್‌ಗಳ ಅವಶ್ಯಕತೆಯಿತ್ತು. ಅದರಂತೆ ಕೊನೆಯ ಓವರ್ ಎಸೆದ ಶೆರ್ಫೇನ್ ರದರ್‌ಫೋರ್ಡ್ ಮೊದಲೆರಡು ಎಸೆತಗಳಲ್ಲಿ ವೈಡ್ ಎಸೆದರು. ಆ ಬಳಿಕ 2 ರನ್ ನೀಡಿದರು. ಇನ್ನು ಎರಡನೇ ಎಸೆತದಲ್ಲಿ ಮತ್ತೊಂದು ವೈಡ್. ಆ ನಂತರ 2, 1, 1, 1 ರನ್ ನೀಡಿದರು. ಪರಿಣಾಮ ಅಂತಿಮ ಎಸೆತದಲ್ಲಿ ಅಂಟಿಗುವಾ ಅಂಡ್ ಬಾರ್ಬುಡಾ ಫಾಲ್ಕನ್ಸ್ ತಂಡಕ್ಕೆ 2 ರನ್‌ಗಳ ಅವಶ್ಯಕತೆಯಿತ್ತು. ಈ ವೇಳೆ ಶಮರ್ ಸ್ಪ್ರಿಂಗರ್ 2 ರನ್ ಕಲೆಹಾಕುವ ಮೂಲಕ ಅಂಟಿಗುವಾ ಅಯಂಡ್ ಬಾರ್ಬುಡಾ ಫಾಲ್ಕನ್ಸ್ ತಂಡಕ್ಕೆ ಕೊನೆಯ ಎಸೆತದಲ್ಲಿ ರೋಚಕ ಗೆಲುವು ತಂದುಕೊಟ್ಟರು.



# ಅಯ್ಯರ್‌ಗೆ ನಾಯಕತ್ವ

ಆಸ್ಟ್ರೇಲಿಯಾ ಎ ವಿರುದ್ಧದ ಸರಣಿಗೆ ಟೀಂ ಇಂಡಿಯಾ ಪ್ರಕಟ

ಆಸ್ಟ್ರೇಲಿಯಾ ಎ ವಿರುದ್ಧದ ಎರಡು ಪಂದ್ಯಗಳ ಸರಣಿಗೆ ಬಿಸಿಸಿಐ ಭಾರತ ಎ ತಂಡವನ್ನು ಆಯ್ಕೆ ಮಾಡಿದೆ. ಶ್ರೇಯಸ್ ಅಯ್ಯರ್ ನಾಯಕನಾಗಿ, ಧ್ರುವ್ ಜುರೆಲ್ ಉಪನಾಯಕನಾಗಿ ಕಾರ್ಯನಿರ್ವಹಿಸಲಿದ್ದಾರೆ. ಜಗದೀಶನ್ ತಂಡದಲ್ಲಿದ್ದಾರೆ ಆದರೆ ರುತುರಾಜ್ ಗಾಯಕ್ವಾಡ್ ಅವರನ್ನು ನಿರ್ಲಕ್ಷಿಸಲಾಗಿದೆ. ಸೆಪ್ಟೆಂಬರ್ 16 ರಿಂದ 4 ದಿನಗಳ 2 ಪಂದ್ಯಗಳ ಸರಣಿ ಆರಂಭವಾಗಲಿದೆ. ಸೆಪ್ಟೆಂಬರ್ 9 ರಿಂದ ಯುಎಇಯಲ್ಲಿ ಟಿ20 ಏಷ್ಯಾಕಪ್ ಶುರುವಾಗಲಿದೆ. ವಾಸ್ತವವಾಗಿ ಭಾರತ ಎ ತಂಡ ಆಸ್ಟ್ರೇಲಿಯಾ ಎ ವಿರುದ್ಧ ಇದೇ ಸೆಪ್ಟೆಂಬರ್ 16 ರಿಂದ ನಾಲ್ಕು ದಿನಗಳ 2 ಪಂದ್ಯಗಳನ್ನು ಆಡಲಿದೆ. ಈ ಸರಣಿಯಲ್ಲಿ ಭಾರತ ತಂಡವನ್ನು ಶ್ರೇಯಸ್ ಅಯ್ಯರ್ ಮುನ್ನಡೆಸಲಿದ್ದಾರೆ. ಹಾಗೆಯೇ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಧ್ರುವ್ ಜುರೆಲ್ ಅವರಿಗೆ ಉಪನಾಯಕತ್ವದ ಜವಾಬ್ದಾರಿಯನ್ನು ನೀಡಲಾಗಿದೆ. ಆಸ್ಟ್ರೇಲಿಯಾ ವಿರುದ್ಧದ ಈ ಸರಣಿಗೆ ಭಾರತ ಎ ತಂಡದಲ್ಲಿ ಅನೇಕ ಅನುಭವಿ ಆಟಗಾರರಿಗೆ ಅವಕಾಶ ನೀಡಲಾಗಿದೆ. ದುಲೀಪ್ ಟ್ರೋಫಿಯ ಸೆಮಿಫೈನಲ್‌ನಲ್ಲಿ ದ್ವಿಶತಕದಂಚಿನಲ್ಲಿ ಎಡವಿದ್ದ ತಮಿಳುನಾಡು ಮೂಲದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಎನ್. ಜಗದೀಸನ್ ಅವರಿಗೆ ತಂಡದಲ್ಲಿ ಸ್ಥಾನ ನೀಡಲಾಗಿದೆ. ಆದರೆ ದುಲೀಪ್ ಟ್ರೋಫಿಯ ಮತ್ತೊಂದು ಸೆಮಿಫೈನಲ್ ಪಂದ್ಯದಲ್ಲಿ 184 ರನ್‌ಗಳ ಇನ್ನಿಂಗ್ಸ್ ಆಡಿದ್ದ ರುತುರಾಜ್ ಗಾಯಕ್ವಾಡ್ ಅವರನ್ನು ಮತ್ತೊಮ್ಮೆ ನಿರ್ಲಕ್ಷಿಸಲಾಗಿದೆ. ಆಸ್ಟ್ರೇಲಿಯಾ–ಎ ಮತ್ತು ಭಾರತ–ಎ ನಡುವಿನ ನಾಲ್ಕು ದಿನಗಳ 2 ಪಂದ್ಯಗಳಲ್ಲಿ ಮೊದಲ ಪಂದ್ಯ ಸೆಪ್ಟೆಂಬರ್ 16 ರಿಂದ 19 ರವರೆಗೆ ಲಕ್ನೋದಲ್ಲಿ ನಡೆಯಲಿದೆ. ಎರಡನೇ ಪಂದ್ಯ ಸೆಪ್ಟೆಂಬರ್ 23 ರಿಂದ 26 ರವರೆಗೆ ಲಕ್ನೋದಲ್ಲಿ ನಡೆಯಲಿದೆ. ಇದರ ನಂತರ, ಸೆಪ್ಟೆಂಬರ್ 30 ರಿಂದ ಅಕ್ಟೋಬರ್ 5 ರವರೆಗೆ ಕಾನ್ಪುರದಲ್ಲಿ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಲಿದೆ. ಏಕದಿನ ಸರಣಿಗೆ ಭಾರತ–ಎ ತಂಡವನ್ನು ಇನ್ನೂ ಘೋಷಿಸಲಾಗಿಲ್ಲ. ವರದಿಗಳ ಪ್ರಕಾರ, ರೋಹಿತ್ ಶರ್ಮಾ ಏಕದಿನ ಸರಣಿಗೆ ಭಾರತ–ಎ ತಂಡದಲ್ಲಿ ಸ್ಥಾನ ಪಡೆಯಬಹುದು.

**ಭಾರತ–ಎ ತಂಡ:** ಶ್ರೇಯಸ್ ಅಯ್ಯರ್ (ನಾಯಕ), ಅಭಿಮನ್ಯು ಈಶ್ವರನ್, ನಾರಾಯಣ್ ಜಗದೀಸನ್ (ವಿಕೆಟ್ ಕೀಪರ್), ಸಾಯಿ ಸುದರ್ಶನ್, ಧ್ರುವ್ ಜುರೆಲ್ (ಉಪನಾಯಕ ಮತ್ತು ವಿಕೆಟ್ ಕೀಪರ್), ದೇವದತ್ ಪಡಿಕ್ಕಲ್, ಹರ್ಷ್ ದುಬೆ, ಆಯುಷ್ ಬಡೋನಿ, ನಿತೀಶ್ ಕುಮಾರ್ ರೆಡ್ಡಿ, ತನುಷ್ ಕೋಟ್ಯಾನ್, ಕೆ. ಸುತಾರ್, ಯಶ್ ಠಾಕೂರ್.

# ಪಾಕಿಸ್ತಾನ್ ವಿರುದ್ಧ ಪ್ರಜ್ವಲಿಸದ ಸೂರ್ಯ!

ಯುಎಇನಲ್ಲಿ ನಡೆಯಲಿರುವ ಈ ಬಾರಿಯ ಏಷ್ಯಾಕಪ್‌ನಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಈ ತಂಡಗಳಲ್ಲಿ ಭಾರತ, ಪಾಕಿಸ್ತಾನ್, ಒಮಾನ್ ಮತ್ತು ಯುಎಇ ಗ್ರೂಪ್ ಎ ನಲ್ಲಿದ್ದರೆ, ಬಾಂಗ್ಲಾದೇಶ್, ಅಫ್ಘಾನಿಸ್ತಾನ್, ಹಾಂಗ್ ಕಾಂಗ್ ಹಾಗೂ ಶ್ರೀಲಂಕಾ ಬಿ ಗ್ರೂಪ್‌ನಲ್ಲಿದೆ. ಹೀಗಾಗಿ ಮೊದಲ ಸುತ್ತಿನಲ್ಲೇ ಭಾರತ ಮತ್ತು ಪಾಕಿಸ್ತಾನ್ ತಂಡಗಳ ಮುಖಾಮುಖಿಯನ್ನು ಎದುರು ನೋಡಬಹುದು. ಭಾರತ ಮತ್ತು ಪಾಕಿಸ್ತಾನ್ ನಡುವಿನ ಹೈವೋಲ್ಟೇಜ್ ಕದನಕ್ಕೆ ದಿನಗಣನೆ ಶುರುವಾಗಿದೆ. ಸೆಪ್ಟೆಂಬರ್ 14 ರಂದು ನಡೆಯಲಿರುವ ಏಷ್ಯಾಕಪ್ ನ 6ನೇ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿಗಳು ಮುಖಾಮುಖಿಯಾಗಲಿದೆ. ಈ ಪಂದ್ಯಕ್ಕೂ ಮುನ್ನ ಟೀಮ್ ಇಂಡಿಯಾಗೆ ಹೊಸ ಚಿಂತೆ ಶುರುವಾಗಿದೆ. ಅದುವೇ ಸೂರ್ಯಕುಮಾರ್ ಯಾದವ್ ಚಿಂತೆ. ಭಾರತ ತಂಡದ ನಾಯಕ ಸೂರ್ಯಕುಮಾರ್ ಯಾದವ್ ಪ್ರಚಂಡ ಬ್ಯಾಟರ್ ಎಂಬುದರಲ್ಲಿ ಎರಡು ಮಾತಿಲ್ಲ. ಆದರೆ ಅದು ಪಾಕಿಸ್ತಾನದ ವಿರುದ್ಧವಲ್ಲ. ಅಂದರೆ ಪಾಕ್ ವಿರುದ್ಧ ಈವರೆಗೆ 5 ಇನಿಂಗ್ಸ್ ಆಡಿದರೂ ಸೂರ್ಯ ಒಮ್ಮೆಯೂ 20 ರನ್ ಗಳಿಸಿಲ್ಲ ಎಂಬುದು ಉಲ್ಲೇಖಾರ್ಹ. ಪಾಕಿಸ್ತಾನ್ ವಿರುದ್ಧದ 5 ಇನಿಂಗ್ಸ್ ಗಳಿಂದ ಸೂರ್ಯಕುಮಾರ್ ಯಾದವ್ ಈವರೆಗೆ ಕಲೆಹಾಕಿರುವುದು ಕೇವಲ 64 ರನ್ ಗಳು ಮಾತ್ರ. ಈ 64 ರನ್ ಗಳನ್ನು ಕಲೆಹಾಕಲು 54 ಎಸೆತಗಳನ್ನು ತೆಗೆದುಕೊಂಡಿದ್ದಾರೆ. ಇದರ ನಡುವೆ ಅವರು ಗಳಿಸಿದ ಗರಿಷ್ಠ ಸ್ಕೋರ್ ಕೇವಲ 18 ರನ್ ಗಳು ಮಾತ್ರ. ಇನ್ನು ಪಾಕಿಸ್ತಾನ್ ವಿರುದ್ಧದ ಪಂದ್ಯಗಳಲ್ಲಿ ಸೂರ್ಯಕುಮಾರ್ ಯಾದವ್ ಬ್ಯಾಟ್ ನಿಂದ ಮೂಡಿಬಂದ ಸಿಕ್ಸರ್‌ಗಳ ಸಂಖ್ಯೆ ಕೇವಲ ಒಂದು. ಹಾಗೆಯೇ 5 ಇನಿಂಗ್ಸ್ ಗಳಲ್ಲಿ ಕೇವಲ 7 ಫೋರ್ ಗಳನ್ನು ಮಾತ್ರ ಬಾರಿಸಲು ಯಶಸ್ವಿಯಾಗಿದ್ದಾರೆ. ಅಂದರೆ ಪಾಕಿಸ್ತಾನ್ ವಿರುದ್ಧ ಸೂರ್ಯಕುಮಾರ್ ಯಾದವ್ ಅವರ ಸ್ಟ್ರೈಕ್ ರೇಟ್ 118.5 ಅಷ್ಟೇ. ಇನ್ನು ಈ ಸ್ಟ್ರೈಕ್ ರೇಟ್ ನಲ್ಲಿ 12.80 ಅವರೇಜ್ ನಲ್ಲಿ ಕೇವಲ 64 ರನ್ ಮಾತ್ರ ಗಳಿಸಿದ್ದಾರೆ.

ಸಿಕ್ಸರ್‌ಗಳ ಸಂಖ್ಯೆ ಕೇವಲ ಒಂದು



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966